ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫೭

**ಪಟ್ಟಿ – ೨೯**

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತಮೂರನೇ ಅಧಿವೇಶನ
(ಮುಂದುವರೆದ ಉಪವೇಶನ)
ಸೋಮವಾರ, ದಿನಾಂಕ : ೨೦ನೇ ನವೆಂಬರ್, ೨೦೧೭

---

## ಸಮೂಹ – I

೧. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

೨. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

೩. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು.

೪. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.

೫. ವೈದ್ಯಕೀಯ ಶಿಕ್ಷಣ ಸಚಿವರು.

೬. ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.

೭. ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು.

---

## ವಸತಿ ಶಾಲೆಗಳಲ್ಲಿನ ಹುದ್ದೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೩೬೮೧ (೪೩೩೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಸಮಾಜ ಕಲ್ಯಾಣ ಇಲಾಖೆಯು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ (KREIS) ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮುರಾರ್ಜಿ ದೇಸಾಯಿ, ಕಿತ್ತೂರ ರಾಣಿ ಚೆನ್ನಮ್ಮ, ಏಕಲವ್ಯ ಹಾಗೂ ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳು ಎಷ್ಟು ; (ಜಿಲ್ಲಾವಾರು, ಸಂಸ್ಥೆವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಆ) ಸದರಿ ಮೇಲ್ಕಾಣಿಸಿದ ವಸತಿ ಶಾಲೆಗಳಲ್ಲಿ ಮಂಜೂರಾದ ಹುದ್ದೆಗಳು, ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳು, ಖಾಲಿ ಇರುವ ಹುದ್ದೆಗಳ ಜಿಲ್ಲಾವಾರು, ಸಂಸ್ಥೆವಾರು, ಮಾಹಿತಿ ನೀಡುವುದು ;

(ಇ) ಮೇಲ್ಕಂಡ ಸಂಸ್ಥೆಗಳಲ್ಲಿ ಪ್ರಾಂಶುಪಾಲ ಹುದ್ದೆ ಹಾಗೂ ಇತರೆ ಹುದ್ದೆಗಳಲ್ಲಿ ಸಂವಿಧಾನ ೩೭೧ (ಜೆ) ಅಡಿಯಲ್ಲಿ ಮೀಸಲಾತಿ ಕಲ್ಪಿಸಲಾಗಿದೆಯೇ ; ಇದ್ದಲ್ಲಿ, ನೇಮಕಾತಿ ಹಾಗೂ ಮುಂಬಡ್ತಿಗಳ ಮಾಹಿತಿಗಳೊಂದಿಗೆ ಸಂಪೂರ್ಣ ವಿವರ ನೀಡುವುದು ?

## ಡೆಂಗ್ಯೂ ಜ್ವರ ನಿಯಂತ್ರಣದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೩೬೮೨ (೪೩೩೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ವಿಭಾಗದಲ್ಲಿ ಡೆಂಗ್ಯೂ ಜ್ವರ ವ್ಯಾಪಕವಾಗಿ ಹರಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದರೆ, ಜಿಲ್ಲಾವಾರು ದೃಢಪಟ್ಟ ಪ್ರಕರಣಗಳ ಸಂಖ್ಯೆ, ಮರಣ ಹೊಂದಿದ ಪ್ರಕರಣಗಳ ಸಂಖ್ಯೆ ಸವಿವರ ಮಾಹಿತಿ ನೀಡುವುದು ;

(ಆ) ಸದರಿ ಡೆಂಗ್ಯೂ ಕಾಯಿಲೆ ಪ್ರಕರಣಗಳು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು ಡೆಂಗ್ಯೂ ನಿಯಂತ್ರಣ ಮಾಡುವಲ್ಲಿ ಇಲಾಖೆ ಸಂಪೂರ್ಣ ವಿಫಲಗೊಂಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಇ) ಸದರಿ ಡೆಂಗ್ಯೂ ಜ್ವರ ಮುಂಜಾಗ್ರತ ಹಾಗೂ ನಿಯಂತ್ರಣಕ್ಕಾಗಿ ಗುತ್ತಿಗೆ ಆಧಾರಿತ ನೇಮಕಗೊಂಡ ನಗರ ಆರೋಗ್ಯ ಸಹಾಯಕರನ್ನು ಸೇವೆಯಿಂದ ವಜಾ ಮಾಡಿರುವುದರಿಂದ ವಿಕೋಪಕ್ಕೆ ಹೋಗಿದ್ದು, ಇವರನ್ನು ಮರು ನೇಮಕ ಮಾಡಲು ಸರ್ಕಾರ ಮುಂದಾಗುವುದೇ? (ಮಾಹಿತಿ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಭಾಗದ ಸಾಹಿತಿ ಮತ್ತು ಲೇಖಕರನ್ನು ಪ್ರೋತ್ಸಾಹಿಸುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೩೬೮೩ (೪೩೩೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಹೈದ್ರಾಬಾದ್–ಕರ್ನಾಟಕ ಭಾಗದ ಸಾಹಿತಿಗಳಿಗೆ ಹಾಗೂ ಲೇಖಕರಿಗೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಅವರುಗಳು ಬರೆದ ಸಾಹಿತ್ಯ

ಹಾಗೂ ಪುಸ್ತಕಗಳನ್ನು ಖರೀದಿಸಲಾಗಿದೆಯೇ ; (ಸಾಹಿತಿಗಳ ಹೆಸರು ಪುಸ್ತಕಗಳ ಮಾಹಿತಿ, ಮೊತ್ತಗಳ ಸಂಪೂರ್ಣ ವಿವರ ನೀಡುವುದು)

(ಆ) ಇತ್ತೀಚೆಗೆ ಸಾಹಿತಿಗಳು ಹಾಗೂ ಲೇಖಕರು ಬರೆದ ಪುಸ್ತಕಗಳು ಹಾಗೂ ಸಾಹಿತ್ಯಗಳನ್ನು ಖರೀದಿ ಮಾಡದೇ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಕಾರಣಗಳೇನು;

(ಇ) ಹೈದ್ರಾಬಾದ್–ಕರ್ನಾಟಕ ಪ್ರದೇಶದ ಸಾಹಿತಿಗಳಿಗೆ ಹಾಗೂ ಲೇಖಕರಿಗೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಅವರು ಬರೆದ ಪುಸ್ತಕಗಳು ಹಾಗೂ ಸಾಹಿತ್ಯಗಳು ಹೆಚ್.ಕೆ.ಡಿ.ಬಿ., ಯಿಂದ ಖರೀದಿಸಲು ಸರ್ಕಾರ ಮುಂದಾಗುವುದೇ ? (ಮಾಹಿತಿ ನೀಡುವುದು)

## ಜ್ಯೋತಿ ಸಂಜೀವಿನಿ ಯೋಜನೆ

**ಶ್ರೀ ಅರುಣ ಶಹಾಪೂರ (ಶಿಕ್ಷಕರ ಕ್ಷೇತ್ರ) :–**

೩೬೮೪ (೪೩೬೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ನೌಕರರುಗಳಿಗೆ ಸರ್ಕಾರದ ಜ್ಯೋತಿ ಸಂಜೀವಿನಿ ಯೋಜನೆಯ ಸೌಲಭ್ಯವನ್ನು ಒದಗಿಸಲು ಸರ್ಕಾರವು ಕ್ರಮವಹಿಸುವುದೇ ;

(ಆ) ಈ ನೌಕರರುಗಳಿಗೆ ವೈದ್ಯಕೀಯ ವೆಚ್ಚ ಮರು ಪಾವತಿ ಸೌಲಭ್ಯ ನೀಡಲಾಗುತ್ತಿದೆಯೇ ; ಇಲ್ಲದಿದ್ದಲ್ಲಿ ನೀಡಲಾಗುವುದೇ ; ನೀಡಲು ಇರುವ ಅಡೆತಡೆಗಳೇನು ? (ವಿವರ ನೀಡುವುದು)

## ವೇತನ ಬಡ್ತಿ ಕುರಿತು

**ಶ್ರೀ ಅರುಣ ಶಹಾಪೂರ (ಶಿಕ್ಷಕರ ಕ್ಷೇತ್ರ) :–**

೩೬೮೫ (೪೩೬೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶ್ರೀ ಕುಮಾರ್ ನಾಯಕ್ ವರದಿಯನ್ವಯ ಜೂನ್ ೨೦೧೬ರಿಂದ ಅನ್ವಯವಾಗುವಂತೆ ವಿಶೇಷ ವೇತನ ಬಡ್ತಿಯನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ಸಹಶಿಕ್ಷಕರುಗಳಿಗೆ ಮತ್ತು ಪ್ರಾಂಶುಪಾಲರಿಗೆ ನೀಡಲಾಗುವುದೆಂದು ಸರ್ಕಾರವು ಈ ಹಿಂದೆ ಸದನದಲ್ಲಿ ಭರವಸೆ ನೀಡಿದೆಯೇ ;

(ಆ) ಶ್ರೀ ಕುಮಾರ್ ನಾಯಕ್ ವರದಿಯನ್ವಯ ಶಿಕ್ಷಣ ಇಲಾಖೆಯ ಸಹಶಿಕ್ಷಕರುಗಳಿಗೆ ಮತ್ತು ಮುಖ್ಯೋಪಾಧ್ಯಾಯರಿಗೆ ಜೂನ್ ೨೦೧೬ರಿಂದ ಅನ್ವಯವಾಗುವಂತೆ ಸರ್ಕಾರವು ನೀಡಿರುವ ವಿಶೇಷ ವೇತನ ಬಡ್ತಿಯನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ಸಹ ಶಿಕ್ಷಕರುಗಳಿಗೆ ಮತ್ತು ಪ್ರಾಂಶುಪಾಲರಿಗೆ ಇಲ್ಲಿಯವರೆಗೂ ನೀಡದಿರಲು ಕಾರಣವೇನು?

## ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ನೌಕರರುಗಳಿಗೆ ಕೆ.ಜಿ.ಐ.ಡಿ. ಮತ್ತು ಜಿ.ಐ.ಎಸ್. ನೀಡುವ ಬಗ್ಗೆ

**ಶ್ರೀ ಅರುಣ ಶಹಾಪೂರ (ಶಿಕ್ಷಕರ ಕ್ಷೇತ್ರ) :–**

೩೬೮೬ (೪೩೬೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಶಾಲೆಗಳ ನೌಕರರುಗಳಿಗೆ ಕೆ.ಜಿ.ಐ.ಡಿ. ಮತ್ತು ಜಿ.ಐ.ಎಸ್. ವೃತ್ತಿ ಸೌಲಭ್ಯಗಳನ್ನು ಒದಗಿಸಲು ಸರ್ಕಾರವು ಕ್ರಮ ವಹಿಸಿರುವುದೇ?

## ಹಿಂದುಳಿದ ವರ್ಗಗಳ ವಿದ್ಯಾರ್ಥಿ ವಸತಿ ನಿಲಯಗಳ ಬಗ್ಗೆ

**ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೮೭ (೪೩೩೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಹಿಂದುಳಿದ ವರ್ಗಗಳ ವಸತಿ ನಿಲಯಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಪೂರ್ಣ ವಿವರ ನೀಡುವುದು)

(ಆ) ಅವಶ್ಯಕತೆಗಿಂತ ಹೆಚ್ಚು ವಿದ್ಯಾರ್ಥಿಗಳು ಇರುವುದರಿಂದ ಮೂಲ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ?

## ಕೊಪ್ಪ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೮೮ (೪೩೪೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮದ್ದೂರು ತಾಲ್ಲೂಕು, ಕೊಪ್ಪ ಹೋಬಳಿ, ಕೊಪ್ಪ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸಲಾಗಿದೆಯೇ;

(ಆ) ಮೇಲ್ದರ್ಜೆಗೇರಿಸಲಾಗಿದ್ದಲ್ಲಿ, ಅವಶ್ಯಕತೆ ಇರುವ ಮೂಲ ಸೌಲಭ್ಯಗಳನ್ನು ಒದಗಿಸಲಾಗಿದೆಯೇ ; (ವಿವರ ನೀಡುವುದು)

(ಇ) ಸದರಿ ಪ್ರಾಥಮಿಕ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ವಿವರ ನೀಡುವುದು ;

(ಈ) ಈ ಕೇಂದ್ರದಲ್ಲಿ ಕೇವಲ ಒಬ್ಬ ವೈದ್ಯರು ಸೇವೆಯಲ್ಲಿದ್ದು ಜನ ಸಾಮಾನ್ಯರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು?

## ಕನ್ನಡ ಭವನಗಳ ಬಗ್ಗೆ

**ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೮೯ (೪೩೩೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಕಳೆದ ೫ ವರ್ಷಗಳಲ್ಲಿ ಎಷ್ಟು ಕನ್ನಡ ಭವನಗಳನ್ನು ನಿರ್ಮಿಸಲಾಗಿದೆ;

(ಆ) ಸದರಿ ಭವನಗಳಿಗೆ ನೀಡಿರುವ ಅನುದಾನವೆಷ್ಟು ;

(ಇ) ಕಳೆದ ೪ ವರ್ಷಗಳಲ್ಲಿ ಸದರಿ ಇಲಾಖೆಯಿಂದ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ?

## ಪ್ರವಾಸೋದ್ಯಮ ಇಲಾಖೆಯಡಿ ಕೈಗೊಂಡ ಕಾಮಗಾರಿಗಳ ಬಗ್ಗೆ

**ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೯೦ (೪೩೩೭) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೪ ವರ್ಷಗಳಲ್ಲಿ ಪ್ರವಾಸೋದ್ಯಮ ಇಲಾಖೆಯಡಿಯಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಇದುವರೆವಿಗೂ ಬಾಕಿ ಉಳಿದಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ಹಾಗೂ ಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು ಮತ್ತು ಯಾವುವು ? (ತಾಲ್ಲೂಕುವಾರು ವಿವರ ನೀಡುವುದು)

## ಪ್ರವಾಸಿ ತಾಣಗಳ ಬಗ್ಗೆ

**ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೯೧ (೪೩೩೮) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿರುವ ಪ್ರವಾಸಿ ತಾಣಗಳು ಯಾವುವು ; (ಪೂರ್ಣ ವಿವರ ನೀಡುವುದು)

(ಆ) ಸದರಿ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಕಳೆದ ೪ ವರ್ಷಗಳಿಂದ ಕೈಗೊಂಡ ಕಾಮಗಾರಿಗಳು ಯಾವುವು ? (ಪೂರ್ಣ ವಿವರ ನೀಡುವುದು)

## ಶಿವಮೊಗ್ಗದಲ್ಲಿನ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೬೯೨ (೪೨೦೪) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ಸರ್ಕಾರಿ ಮೆಡಿಕಲ್ ಕಾಲೇಜಿನ ಆವರಣದಲ್ಲಿರುವ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡದ ಅಂದಾಜು ಎಷ್ಟು ; ಯಾವಾಗ ಆರಂಭಿಸಲಾಯಿತು ; ಯಾವಾಗ ಪೂರ್ಣಗೊಳ್ಳುತ್ತದೆ ;

(ಆ) ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಪ್ರಾರಂಭಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು ; ಪ್ರಾರಂಭಿಸಲು ಕಾಲಬದ್ದ ಯೋಜನೆ ಏನು? (ವಿವರ ನೀಡುವುದು)

## ಮಾತೃ ಪೂರ್ಣ ಯೋಜನೆ ವಿಚಾರ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೬೯೩ (೪೨೦೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಾತೃಪೂರ್ಣ ಯೋಜನೆ ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಆರಂಭಿಸಲಾಗಿದೆ ; ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಮೇಲ್ಕಂಡ ಯೋಜನೆಯಲ್ಲಿ ಗರ್ಭಿಣಿಯರು ಮತ್ತು ಬಾಣಂತಿಯರು ಅಂಗನವಾಡಿಗೆ ಬಂದು ಊಟ ತೆಗೆದುಕೊಂಡು ಹೋಗಲು ಸರ್ಕಾರ ಆದೇಶ ಮಾಡಿರುವುದರಿಂದ, ಆಗುತ್ತಿರುವ ತೊಂದರೆಯನ್ನು ಪರಿಹರಿಸಲು ಸರ್ಕಾರ ತೆಗೆದುಕೊಂಡಿರುವ ಪರಿಹಾರಗಳೇನು ;

(ಇ) ಯೋಜನೆಯಲ್ಲಿ ಫಲಾನುಭವಿಗಳಿಗೆ ಯಾವ ಯಾವ ಆಹಾರವನ್ನು ಎಷ್ಟು ಪ್ರಮಾಣದಲ್ಲಿ ನೀಡಲಾಗುವುದು ; ಪ್ರತಿದಿನ ನೀಡಲಾಗುವುದೇ;

(ಈ) ಗರ್ಭಿಣಿ ಮತ್ತು ಬಾಣಂತಿಯರ ಆರೋಗ್ಯ ರಕ್ಷಣೆಗಾಗಿ ಆಹಾರ ತಯಾರಿಸುವ ಅಂಗನವಾಡಿಗಳಲ್ಲಿ ಯಾವ ಯಾವ ಎಚ್ಚರಿಕೆಯನ್ನು ತೆಗೆದುಕೊಳ್ಳಲಾಗುವುದು ?

## ಅಂತರ್ಜಾತಿ ವಿವಾಹ ಮಾಡಿಕೊಂಡವರಿಗೆ ಪ್ರೋತ್ಸಾಹ ಧನದ ವಿಚಾರ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೯೪ (೪೨೧೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಂತರ್ಜಾತಿ ವಿವಾಹ ಮಾಡಿಕೊಂಡವರಿಗೆ ನೀಡುತ್ತಿರುವ ಪ್ರೋತ್ಸಾಹವೇನು ; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಅಂತರ್ಜಾತಿ ವಿವಾಹ ಮಾಡಿಕೊಂಡವರ ಸಂಖ್ಯೆ ಎಷ್ಟು ; (ವರ್ಷಾವಾರು, ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಅಂತರ್ಜಾತಿ ವಿವಾಹ ಮಾಡಿಕೊಂಡವರಿಗೆ ಸಕಾಲದಲ್ಲಿ ಪ್ರೋತ್ಸಾಹಧನ ವಿತರಿಸಲಾಗುತ್ತಿದೆಯೇ ; ಇಲ್ಲದಿದ್ದಲ್ಲಿ ಕಾರಣವೇನು; ಎಷ್ಟು ಹಣ ವಿತರಿಸಬೇಕಾಗಿದೆ ? (ವಿವರ ನೀಡುವುದು)

## ಕಿವುಡುತನ ನಿವಾರಣೆಗೆ ಕಾಂಕ್ಲಿಯಾರ್ ಇಂಪ್ಲಾಟ್ ವಿಚಾರ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೯೫ (೪೨೧೨) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರದ ವತಿಯಿಂದ ಕಿವುಡುತನ ನಿವಾರಣೆಯ ಶಸ್ತ್ರಚಿಕಿತ್ಸೆ ಕಾಂಕ್ಲಿಯಾರ್ ಇಂಪ್ಲಾಟ್ ಸೌಲಭ್ಯ ಎಷ್ಟು ಸರ್ಕಾರಿ ಆಸ್ಪತ್ರೆ ಅಥವಾ ಮೆಡಿಕಲ್ ಕಾಲೇಜಗಳಲ್ಲಿ ಅಳವಡಿಸಲಾಗಿದೆ;

(ಆ) ಕಿವುಡುತನ ನಿವಾರಣೆಗೆ ಖಾಸಗಿ ಆಸ್ಪತ್ರೆಗಳಲ್ಲಿ ದುಬಾರಿ ಶುಲ್ಕ ನೀಡಿ ಶಸ್ತ್ರಚಿಕಿತ್ಸೆ (ಕಾಂಕ್ಲಿಯಾರ್ ಇಂಪ್ಲಾಟ್) ಪಡೆಯುತ್ತಿರುವುದರಿಂದ ಸಾಮಾನ್ಯ ಜನರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಶಿವಮೊಗ್ಗದ ಸರ್ಕಾರಿ ಮೆಡಿಕಲ್ ಕಾಲೇಜಿನಲ್ಲಿ SIPDA ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಹಣವೆಷ್ಟು ; ಈ ಯೋಜನೆಯ ಉದ್ದೇಶವೇನು ; ಈಗ ಈ ಯೋಜನೆಯು ಯಾವ ಹಂತದಲ್ಲಿದೆ ;

(ಈ) ಕೇಂದ್ರ ಸರ್ಕಾರದ ಮಹತ್ವದ ಯೋಜನೆ NPPCD ಸಹಕಾರದಿಂದ ರಾಜ್ಯದ ಸರ್ಕಾರಿ ಮೆಡಿಕಲ್ ಕಾಲೇಜುಗಳಲ್ಲಿ ಕಾಂಕ್ಲಿಯಾರ್ ಇಂಪ್ಲಾಟ್ ಶಸ್ತ್ರಚಿಕಿತ್ಸೆ ಸೌಲಭ್ಯ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಉ) ರಾಜ್ಯದ ಎಷ್ಟು ಮೆಡಿಕಲ್ ಕಾಲೇಜುಗಳಲ್ಲಿ BSc (Speech & Hearing) ಕೋರ್ಸ್ ಸ್ಥಾಪಿಸಲು ಅಗತ್ಯ ವ್ಯವಸ್ಥೆ ಇದೆ ; ಈ ಕೋರ್ಸ್‌ಗಳನ್ನು ಯಾವಾಗ ಆರಂಭಿಸಲಾಗುವುದು ?

## ಶಾಸಕರ ಪ್ರದೇಶಾಭಿವೃದ್ಧಿ ಕಾಮಗಾರಿಗಳ ವಿಳಂಬವಾದ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೯೬ (೪೨೧೬) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಧಾನಸಭೆ ಹಾಗೂ ವಿಧಾನ ಪರಿಷತ್ತಿನ ಸದಸ್ಯರ ಪ್ರದೇಶಾಭಿವೃದ್ಧಿ ಅನುದಾನದ ಕಾಮಗಾರಿಗಳು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಕಾಮಗಾರಿಗಳಿಗೆ ಆಡಳಿತಾತ್ಮಕ ಮತ್ತು ಅಗ್ರಿಮೆಂಟ್ ಅಪ್ರೂವಲ್‌ಗಾಗಿ ಬೆಂಗಳೂರಿನವರೆಗೆ ಒಂದು ವರ್ಷ ವಿಳಂಬವಾಗುವುದಕ್ಕೆ ಕಾರಣವೇನು ; ಹಾಗಿದ್ದಲ್ಲಿ, ಜರುಗಿಸಲಾಗಿರುವ ಕ್ರಮಗಳೇನು ;

(ಇ) ಈ ಕಾಮಗಾರಿಗಳು ವಿಳಂಬವಾಗದ ಹಾಗೆ ಜರುಗಿಸಲಿರುವ ಕ್ರಮಗಳೇನು ?

## ಹೊಸ ಪಡಿತರ ಚೀಟಿ ವಿತರಿಸುವ ಬಗ್ಗೆ

**ಶ್ರೀ ಬಸನಗೌಡ ಆರ್.ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೯೭ (೪೨೨೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹೊಸ ಪಡಿತರ ಚೀಟಿ ಮಾಡದಿರುವುದರಿಂದ ನೈಜ ಬಡ ಫಲಾನುಭವಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹೊಸ ಪಡಿತರ ಚೀಟಿಗಳನ್ನು ಯಾವ ಕಾಲಮಿತಿಯೊಳಗೆ ನೀಡಲಾಗುವುದು ; (ಸಂಪೂರ್ಣ ವಿವರ ನೀಡುವುದು)

(ಇ) ಆಹಾರ ಇಲಾಖೆಯಲ್ಲಿ ಆಹಾರ ನಿರೀಕ್ಷಕರು ಮತ್ತು ಶಿರಸ್ತೇದಾರರ ಹುದ್ದೆಗಳು ಖಾಲಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ನೇಮಕಾತಿಗೆ ಯಾವ ಕ್ರಮ ತೆಗೆದುಕೊಂಡಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಪದೋನ್ನತಿ ಇಲ್ಲದೆ ನಿವೃತ್ತಿಯಾಗಿರುವುದು ಕಂಡು ಬಂದಿದ್ದು ಈಗಿರುವ ಸಿಬ್ಬಂದಿಗಳಿಗೆ ಪದೋನ್ನತಿಯನ್ನು ನೀಡಲು ಯಾವ ಕ್ರಮ ತೆಗೆದುಕೊಳ್ಳಲಾಗಿದೆ? (ವಿವರ ನೀಡುವುದು)

## ಕಾನ್ಸರ್ ಆಸ್ಪತ್ರೆ ಪ್ರಾರಂಭಿಸುವ ಬಗ್ಗೆ

**ಶ್ರೀ ಬಸನಗೌಡ ಆರ್.ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೮ (೪೨೨೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಸರ್ಕಾರಿ ಕ್ಯಾನ್ಸರ್ ಆಸ್ಪತ್ರೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕ್ಯಾನ್ಸರ್ ಆಸ್ಪತ್ರೆ ಪ್ರಾರಂಭಿಸಲು ಸರ್ಕಾರ ಕೈಗೊಂಡ ಕ್ರಮವೇನು; (ವಿವರ ನೀಡುವುದು)

(ಆ) ಇಲ್ಲಿ ಸರ್ಕಾರಿ ಕ್ಯಾನ್ಸರ್ ಆಸ್ಪತ್ರೆ ಇಲ್ಲದೆ ದೂರದ ಮಹಾರಾಷ್ಟ್ರ ಮತ್ತು ಬೆಂಗಳೂರಿಗೆ ಕ್ಯಾನ್ಸರ್ ರೋಗಿಗಳು ಚಿಕಿತ್ಸೆಗೆ ಹೋಗಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರೋಗಿಗಳಿಗೆ ಅನುಕೂಲವಾಗುವಂತೆ ಯಾವ ಯಾವ ಸೌಲಭ್ಯಗಳನ್ನು ಒದಗಿಸಲು ಉದ್ದೇಶಿಸಲಾಗಿದೆ ? (ವಿವರ ನೀಡುವುದು)

## ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಪ್ರಾರಂಭಿಸುವ ಬಗ್ಗೆ

**ಶ್ರೀ ಬಸನಗೌಡ ಆರ್.ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೬೯ (೪೨೨೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸರ್ಕಾರಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಸರ್ಕಾರಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವೈದ್ಯಾಧಿಕಾರಿ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ನಿರ್ಮಾಣ ಮಾಡಿ ಪ್ರಾರಂಭಿಸಲು ತಗಲುವ ವೆಚ್ಚವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಈ) ವಿಜಯಪುರ ಜಿಲ್ಲೆಯಲ್ಲಿ ಸರ್ಕಾರಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಪ್ರಾರಂಭಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಉ) ವಿಜಯಪುರ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿರುತ್ತದೆ? (ವಿವರ ನೀಡುವುದು)

## ಹಂದಿಗೊಲ್ಲ ಜನಾಂಗದ ಕಲ್ಯಾಣಕ್ಕಾಗಿ ರೂಪಿಸಿರುವ ಯೋಜನೆಗಳ ಬಗ್ಗೆ

**ಶ್ರೀ ಬಸನಗೌಡ ಆರ್.ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೦೦ (೪೨೩೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಂದಿಜೋಗಿ ಅಥವಾ ಹಂದಿಗೊಲ್ಲ ಸಮಾಜವು ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ವಾಸಿಸುತ್ತಿದ್ದಾರೆ ; (ವಿವರ ನೀಡುವುದು) ಈ ಜನಾಂಗದವರ ಕಲ್ಯಾಣಕ್ಕಾಗಿ ಸರ್ಕಾರವು ರೂಪಿಸಿರುವ ಯೋಜನೆಗಳಾವುವು; (ವಿವರ ನೀಡುವುದು)

(ಆ) ಈ ಜನಾಂಗವನ್ನು ಪ್ರತ್ಯೇಕ ಜಾತಿಯೆಂದು ಸರ್ಕಾರ ಪರಿಗಣಿಸಿದೆಯೇ; ಪರಿಗಣಿಸಿದ್ದರೆ, ಯಾವ ಸ್ಥಾನಮಾನವನ್ನು ನೀಡಲಾಗಿದೆ; (ವಿವರ ನೀಡುವುದು)

(ಇ) ಈ ಜಾತಿಯನ್ನು ಜಾತಿ ಸಮೀಕ್ಷೆ ಅಥವಾ ಜನಸಂಖ್ಯೆ ಸಮೀಕ್ಷೆಗಳಲ್ಲಿ ಪರಿಶಿಷ್ಟ ಜಾತಿಗೆ ಪರಿಗಣಿಸಲಾಗಿದೆಯೇ; (ವಿವರ ನೀಡುವುದು)

(ಈ) ಈ ಜನಾಂಗದ ಶೈಕ್ಷಣಿಕ, ಸಾಮಾಜಿಕ ಹಾಗೂ ಆರ್ಥಿಕ ಸ್ಥಿತಿಗಳೇನು; ಇವರನ್ನು ಪರಿಶಿಷ್ಟ ಜಾತಿಗೆ ಸೇರಿಸಲು ಉದ್ದೇಶಿಸಲಾಗಿದೆಯೇ; ಉದ್ದೇಶಿಸಿದ್ದರೆ ಯಾವ ಕಾಲಮಿತಿಯೊಳಗೆ ಪರಿಶಿಷ್ಟ ಜಾತಿಗೆ ಸೇರಿಸಲಾಗುವುದು?

## ರಾಯಚೂರು ಜಿಲ್ಲೆಯಲ್ಲಿರುವ BPL/APL ಕಾರ್ಡುದಾರರ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೦೧ (೪೩೫೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ BPL/APL ಕಾರ್ಡುಗಳು ಪಡೆದಿರುವ ಕುಟುಂಬಗಳ ಸಂಖ್ಯೆ ಎಷ್ಟು;

(ಆ) ರಾಯಚೂರು ಜಿಲ್ಲೆಯಲ್ಲಿ ಸರಬರಾಜು ಮಾಡುತ್ತಿರುವ ಆಹಾರ ಧಾನ್ಯಗಳಿಗೆ ಸರ್ಕಾರ ನೀಡುತ್ತಿರುವ ಅನುದಾನ ಎಷ್ಟು?

## ವಸತಿ ಶಾಲೆಗಳ ಬಗ್ಗೆ

**ಶ್ರೀ ಎನ್.ಎಸ್.ಬೋಸ್ ರಾಜು(ವಿಧಾನ ಸಭೆಯಿಂದ ಚುನಾಯಿತರಾದವರು):–**

೩೭೦೨(೪೩೫೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ರಾಯಚೂರು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ೨೦೧೬-೨೦೧೭ ಮತ್ತು ೨೦೧೭-೧೮ನೇ ಸಾಲಿನಲ್ಲಿ ಪ್ರಾರಂಭಿಸಿರುವ ವಸತಿ ಶಾಲೆಗಳು ಎಷ್ಟು?

## ಮಾತೃಪೂರ್ಣ ಯೋಜನೆ ಬಗ್ಗೆ

**ಶ್ರೀ ಎನ್.ಎಸ್.ಬೋಸ್ ರಾಜು(ವಿಧಾನ ಸಭೆಯಿಂದ ಚುನಾಯಿತರಾದವರು):–**

೩೭೦೩ (೪೩೪೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಅಂಗನವಾಡಿಗಳ ಮುಖಾಂತರ ಮಾತೃಪೂರ್ಣ ಯೋಜನೆ ಅಡಿಯಲ್ಲಿ ಎಷ್ಟು ಜನ ಗರ್ಭಿಣಿ ಮಹಿಳೆಯರಿಗೆ ಅನುಕೂಲವಾಗಿದೆ;

(ಆ) ಮಾನ್ವಿ ತಾಲ್ಲೂಕಿನಲ್ಲಿ ಪ್ರಾಯೋಗಿಕವಾಗಿ ಮಾತೃಪೂರ್ಣ ಯೋಜನೆ ಪ್ರಾರಂಭಿಸಿದಾಗ ಎಷ್ಟು ಜನ ಗರ್ಭಿಣಿ ಮಹಿಳೆಯರಿಗೆ ಈ ಯೋಜನೆಯಿಂದ ಅನುಕೂಲವಾಗಿದೆ?

## ರಾಯಚೂರು ಪ್ರಾಚೀನ ಕೋಟೆ ಅಭಿವೃದ್ಧಿಯ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು(ವಿಧಾನ ಸಭೆಯಿಂದ ಚುನಾಯಿತರಾದವರು):–**

೩೭೦೪ (೪೩೪೭) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರವಾಸೋದ್ಯಮ ಇಲಾಖೆಯಿಂದ ರಾಯಚೂರು ಪ್ರಾಚೀನ ಕೋಟೆ ಅಭಿವೃದ್ಧಿ ಪಡಿಸಲು ಮಂಜೂರಾತಿ ನೀಡಿರುವ ಅನುದಾನ ಎಷ್ಟು; ಸದರಿ ಕೋಟೆಯ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರು ಜಿಲ್ಲೆಯ ಕೃಷ್ಣಾ ನದಿಯ ಹತ್ತಿರ ಪುಷ್ಕರಘಾಟ ಅಭಿವೃದ್ಧಿ ಮಾಡಲು ಸರ್ಕಾರದಿಂದ ಮಂಜೂರಾಗಿರುವ ಅನುದಾನ ಎಷ್ಟು; ಸದರಿ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ಕುಲಪತಿಗಳ ನೇಮಕಾತಿ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೩೭೦೫ (೪೧೬೪) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ಕುಲಪತಿಗಳ ಹುದ್ದೆ ಯಾವಾಗಿನಿಂದ ಖಾಲಿಯಿದೆ;

(ಆ) ಶಾಶ್ವತವಾದ ಕುಲಪತಿಗಳ ನೇಮಕ ಮಾಡದಿರುವುದರಿಂದ ಆಡಳಿತದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ವಿಶ್ವವಿದ್ಯಾಲಯದ ಉಪ ಕುಲಪತಿಗಳನ್ನು ನೇಮಿಸದಿರಲು ಕಾರಣವೇನು ; (ವಿವರ ನೀಡುವುದು)

(ಈ) ಕುಲಪತಿಗಳ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣ–ಗೊಳಿಸಲಾಗುವುದು ಯಾವಾಗ ?

## ಬಾಲ್ಯವಿವಾಹ ಹಾಗೂ ಮಕ್ಕಳ ಮೇಲಿನ ಅತ್ಯಾಚಾರ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೩೭೦೬ (೪೧೬೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ಚೈಲ್ಡ್ ರೈಟ್ಸ್ ಟ್ರಸ್ಟ್ ನವರು ಮಧ್ಯಪ್ರವೇಶದ ಕಕ್ಷಿದಾರರಾಗಿ ಸಲ್ಲಿಸಿದ್ದ ಪ್ರಕರಣವನ್ನು ಇತ್ಯರ್ಥ ಮಾಡಿರುವ ಸರ್ವೋಚ್ಛ ನ್ಯಾಯಾಲಯವು ಮದುವೆಯ ಸಂಬಂಧದಲ್ಲಿ ೧೫ ರಿಂದ ೧೮ ವರ್ಷದವರೊಡನೆಯೂ ನಡೆಸುವ ಲೈಂಗಿಕ ಚಟುವಟಿಕೆಯನ್ನು ಅತ್ಯಾಚಾರ ಎಂದು ಪರಿಗಣಿಸಿರುವುದನ್ನು ಕರ್ನಾಟಕ ಸರ್ಕಾರವು ಗಮನಕ್ಕೆ ತೆಗೆದುಕೊಂಡಿದೆಯೇ;

(ಆ) ಹೌದಾಗಿದ್ದಲ್ಲಿ, ಈ ನಿರ್ದೇಶನದಂತೆ ಬಾಲ್ಯವಿವಾಹಗಳನ್ನು ತಡೆಗಟ್ಟಲು ಅಗತ್ಯವಿರುವ ಕ್ರಿಯಾ ಯೋಜನೆಯನ್ನು ಸರ್ಕಾರದ ಕಾನೂನು ಇಲಾಖೆ, ಗೃಹ ಇಲಾಖೆ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗಳು ರೂಪಿಸಿವೆಯೇ ; (ವಿವರ ನೀಡುವುದು)

(ಇ) ಸರ್ವೋಚ್ಛ ನ್ಯಾಯಾಲಯದ ಈ ನಿರ್ದೇಶನವನ್ನು ಜಾರಿಗೆ ತಂದಾಗ, ಮಕ್ಕಳ ಮೇಲಿನ ಲೈಂಗಿಕ ಅತ್ಯಾಚಾರದ ಪ್ರಕರಣಗಳು ಹೆಚ್ಚಾಗಲಿದ್ದು, ಅವುಗಳನ್ನು ನಿರ್ವಹಿಸಲು ಇಲಾಖೆಗಳು ಮತ್ತು ನ್ಯಾಯಾಲಯಗಳು ಮಾಡಿಕೊಂಡಿರುವ ಸಿದ್ಧತೆಗಳೇನು?

## ವಿಕ್ಟೋರಿಯ ಆಸ್ಪತ್ರೆಯಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೩೭೦೭ (೪೧೬೬) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನಲ್ಲಿರುವ ವಿಕ್ಟೋರಿಯ ಆಸ್ಪತ್ರೆಯಲ್ಲಿ ವಿವಿಧ ವಿಭಾಗಗಳಿಗೆ ಹೊಸದಾಗಿ ಕಟ್ಟಡಗಳನ್ನು ನಿರ್ಮಿಸಿದ್ದು, ಅವುಗಳಲ್ಲಿ ಮೂಲಭೂತ ಸೌಲಭ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಆಸ್ಪತ್ರೆಯಲ್ಲಿ ಹೊರ ರೋಗಿಗಳ ವಿಭಾಗ ನಿರ್ಮಿಸಿದ್ದು, ವೈದ್ಯರ ತಪಾಸಣೆ ಕೊಠಡಿಗಳು ೧ನೇ ಮತ್ತು ೨ನೇ ಮಹಡಿಗಳಲ್ಲಿದ್ದು, ವಯಸ್ಸಾದ ಹಾಗೂ ಅಂಗವಿಕಲತೆ ಹೊಂದಿದ ರೋಗಿಗಳು ಮೇಲಿನ ಮಹಡಿಗೆ ಹೋಗಲು ಲಿಫ್ಟ್ ಮತ್ತು ರ್‍ಯಾಂಪ್‌ಗಳು ಇಲ್ಲದಿರುವುದರಿಂದ ಕಷ್ಟ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದರೆ, ಈ ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರ ಏನು ಕ್ರಮ ಕೈಗೊಂಡಿದೆ?

## ಅನ್ನಭಾಗ್ಯ ಯೋಜನೆಯ ಅನುಷ್ಠಾನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೩೭೦೮ (೪೧೬೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅನ್ನಭಾಗ್ಯ ಯೋಜನೆ ಯಾವಾಗಿನಿಂದ ಜಾರಿಗೆ ಬಂದಿದೆ;

(ಆ) ಈ ಯೋಜನೆಯಡಿ ಗ್ರಾಹಕರಿಗೆ ಆಗುತ್ತಿರುವ ಪ್ರಯೋಜನಗಳಾವುವು;

(ಇ) ಈ ಯೋಜನೆಗೆ ಖರ್ಚಾಗುತ್ತಿರುವ ಹಣವೆಷ್ಟು;

(ಈ) ಈ ಯೋಜನೆಗೆ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರಗಳು ನೀಡುತ್ತಿರುವ ಸಹಾಯ ಧನವೆಷ್ಟು; (ವಿವರ ನೀಡುವುದು)

(ಉ) ಈ ಯೋಜನೆಯಡಿಯಲ್ಲಿ ವಾರ್ಷಿಕ ಎಷ್ಟು ಫಲಾನುಭವಿಗಳು ಪ್ರಯೋಜನ ಪಡೆದಿರುತ್ತಾರೆ?

## ಮಾತೃಪೂರ್ಣ ಯೋಜನೆಯ ಅನುಷ್ಠಾನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೩೭೦೯ (೪೧೬೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರದ ರಾಷ್ಟ್ರೀಯ ಆರೋಗ್ಯ ಮಿಷನ್ ಸಹಯೋಗದಲ್ಲಿ ರಾಜ್ಯ ಸರ್ಕಾರ ರೂಪಿಸಿರುವ ಮಾತೃಪೂರ್ಣ ಯೋಜನೆಗೆ ಅನುಮೋದನೆ ದೊರಕಿದೆಯೇ;

(ಆ) ಈ ಯೋಜನೆಗೆ ಹಂಚಿಕೆಯಾದ ಒಟ್ಟು ಹಣವೆಷ್ಟು;

(ಇ) ಈ ಯೋಜನೆಯ ಅನುಷ್ಠಾನದ ರೂಪುರೇಷೆಗಳ ಬಗ್ಗೆ ವಿವರ ನೀಡುವುದು;

(ಈ) ಗರ್ಭಿಣಿಯರಿಗೆ Micro Nutrient Granule ಔಷಧಿ ವೈದ್ಯರ ಶಿಫಾರಸ್ಸಿನಂತೆ ಪೂರೈಸುವ ಟೆಂಡರ್ ಯಾವ ಹಂತದಲ್ಲಿದೆ;

(ಉ) ಈ ಯೋಜನೆಯ ಟೆಂಡರ್ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿರುವುದು ಪತ್ರಿಕೆಯಲ್ಲಿ ವರದಿಯಾಗಿದ್ದು ಇದರ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು ?

## ಹೊರಸಂಪನ್ಮೂಲ ಏಜನ್ಸಿ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೩೭೧೦ (೪೩೪೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ (ಕೆ.ಆರ್.ಇ.ಐ.ಎಸ್.,) ದ ಅಧೀನದಲ್ಲಿ ಬರುವ ವಸತಿ ಶಾಲೆಗಳಲ್ಲಿ ಹೊರಸಂಪನ್ಮೂಲ ಏಜೆನ್ಸಿಯಿಂದ ಕಾರ್ಯನಿರ್ವಹಿಸುತ್ತಿದ್ದ ಸಹ ಶಿಕ್ಷಕರುಗಳಿಗೆ ಒಂದು ಶೈಕ್ಷಣಿಕ ವರ್ಷಕ್ಕೆ ಎಷ್ಟು ಸೇವಾ ಕೃಪಾಂಕಗಳನ್ನು ನೀಡಲಾಗಿದೆ;

(ಆ) ಸೇವಾ ಕೃಪಾಂಕಗಳನ್ನು ಪರಿಗಣಿಸಿ ಎಷ್ಟು ಜನರನ್ನು ಆಯ್ಕೆ ಮಾಡಲಾಗಿದೆ; (ವಿವರವಾದ ಮಾಹಿತಿ ನೀಡುವುದು)

(ಇ) ಸಹ ಶಿಕ್ಷಕರುಗಳ ನೇಮಕಾತಿಯಡಿ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಯ್ಕೆಗೊಂಡ ಎಷ್ಟು ಜನರನ್ನು ಅಂತಿಮ ಆಯ್ಕೆ ಪಟ್ಟಿಯಲ್ಲಿ ಕೈ ಬಿಡಲಾಗಿದೆ; ಈ ರೀತಿ ಕೈ ಬಿಡಲು ಇರುವ ಸಕಾರಣಗಳೇನು; (ವಿವರವಾದ ಕಾರಣಗಳೊಂದಿಗೆ ಮಾಹಿತಿ ನೀಡುವುದು)

(ಈ) ಹೆಚ್ಚಿಗೆ ಅಂಕ ಹೊಂದಿದ್ದರೂ ಕೂಡಾ ರಿ ನಂ ೧೩೫೮೬೧ (ಸಮಾಜಶಾಸ್ತ್ರ ವಿಷಯದ) ಅಭ್ಯರ್ಥಿಯನ್ನು ಆಯ್ಕೆ ಪಟ್ಟಿಯಿಂದ ಕೈಬಿಟ್ಟು ಅನ್ಯಾಯ ಮಾಡಿರುವುದು ಸರಿಯೇ;

(ಉ) ಈ ಅನ್ಯಾಯವನ್ನು ಯಾವ ಕಾಲಮಿತಿಯೊಳಗೆ ಸರ್ಕಾರವು ಸರಿಪಡಿಸಿ ಅಭ್ಯರ್ಥಿಗೆ ನ್ಯಾಯು ಒದಗಿಸುವುದು? (ಸಂಪೂರ್ಣವಾದ ವಿವರವಾದ ಮಾಹಿತಿ ನೀಡುವುದು)

## ಪ್ರವಾಸೋದ್ಯಮ ಮೂಲಭೂತ ಸೌಕರ್ಯಗಳ ಕಾಮಗಾರಿ ಬಗ್ಗೆ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೩೭೧೧ (೪೩೪೧) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭-೧೮ನೇ ಸಾಲಿನಲ್ಲಿ ಪ್ರವಾಸೋದ್ಯಮ ಮೂಲಭೂತ ಸೌಕರ್ಯಗಳಿಗೆ ನಿಗಧಿಪಡಿಸಿರುವ ಹಣವೆಷ್ಟು; ಈ ಹಣವನ್ನು ಯಾವ ಯಾವ ಪ್ರವಾಸೋದ್ಯಮ ಕಾಮಗಾರಿಗಳಿಗೆ ವಿನಿಯೋಗಿಸಬಹುದಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಆ) ೨೦೧೭-೧೮ನೇ ಸಾಲಿಗೆ ಮುಂದುವರಿದ ಪ್ರವಾಸೋದ್ಯಮ ಮೂಲಭೂತ ಸೌಕರ್ಯ ಕಾಮಗಾರಿಗಳಿಗೆ ಎಷ್ಟು ಹಣ ಮಂಜೂರು ಮಾಡಿ ಬಿಡುಗಡೆ ಮಾಡಲಾಗಿದೆ; (ಜಿಲ್ಲಾವಾರು, ಕಾಮಗಾರಿವಾರು ಮಾಹಿತಿ ನೀಡುವುದು)

(ಇ) ೨೦೧೭-೧೮ನೇ ಸಾಲಿನ ಹೊಸದಾಗಿ ಪ್ರವಾಸೋದ್ಯಮ ಮೂಲಭೂತ ಸೌಕರ್ಯ ಕಾಮಗಾರಿಗಳಿಗೆ ಎಷ್ಟು ಹಣ ಮಂಜೂರು ಮಾಡಿ ಬಿಡುಗಡೆ ಮಾಡಲಾಗಿದೆ; (ಜಿಲ್ಲಾವಾರು, ಕಾಮಗಾರಿಗಳ ಹೆಸರು ಸಮೇತ ಮಾಹಿತಿ ನೀಡುವುದು)

(ಈ) ಸದರಿ ಅನುದಾನದಲ್ಲಿ ನೀಡುವುದು ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಬಹುದಾಗಿರುತ್ತದೆ? (ವಿವರವಾದ ಮಾಹಿತಿ ನೀಡುವುದು)

## ಶಾಸಕರ ಪ್ರದೇಶಾಭಿವೃದ್ಧಿ ಅನುದಾನದ ಬಳಕೆಯಲ್ಲಿ ತೊಂದರೆ

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೭೧೨ (೪೧೫೮) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನ ಸಂಪೂರ್ಣವಾಗಿ ಖರ್ಚಾಗದೆ ಉಳಿದಿರುವುದು ನಿಜವೇ;

(ಆ) ಈ ಬಗ್ಗೆ ಇರುವ ಕಠಿಣ ಮಾರ್ಗಸೂಚಿಯಿಂದಾಗಿ ಯೋಜನೆ ಅನುಷ್ಠಾನದಲ್ಲಿ ತೊಂದರೆಯಾಗುತ್ತಿದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಮಾರ್ಗಸೂಚಿಯನ್ನು ಸರಳೀಕರಣಗೊಳಿಸಿ ಯೋಜನೆಯಲ್ಲಿನ ಅನುದಾನ ಸಂಪೂರ್ಣ ಬಳಕೆ ಮಾಡಲು ಅವಕಾಶ ಮಾಡಿಕೊಡಲಾಗುವುದೇ?

## ಡಾ॥ ಅಂಬೇಡ್ಕರ್ ಮತ್ತು ಜಗಜೀವನರಾಂ ಭವನಗಳ ಕಾಮಗಾರಿ

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೧೩ (೪೧೫೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಕಳೆದ ಎರಡು ವರ್ಷಗಳಿಂದ ಮಂಜೂರು ಮಾಡಿರುವ ಡಾ॥ಅಂಬೇಡ್ಕರ್ ಭವನ ಮತ್ತು ಬಾಬು ಜಗಜೀವನರಾಂ ಭವನಗಳೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಾಮಗಾರಿ ಪೂರ್ಣವಾಗಿ ಬಳಕೆಗೆ ಲಭ್ಯವಿರುವ ಡಾ॥ ಅಂಬೇಡ್ಕರ್ ಭವನ ಮತ್ತು ಜಗಜೀವನರಾಂ ಭವನಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಅನುದಾನದ ಕೊರತೆಯಿಂದ ಅಪೂರ್ಣವಾಗಿರುವ ಭವನಗಳೆಷ್ಟು; ಈ ಭವನಗಳನ್ನು ಪೂರ್ಣಗೊಳಿಸಲು ಅಗತ್ಯ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು; ಕಾಮಗಾರಿಗಳನ್ನು ಯಾವಾಗ ಮುಗಿಸುವುದು?

## ಮಾದಿಗ ಜನಾಂಗ ಅಭಿವೃದ್ಧಿ ನಿಗಮ ರಚಿಸುವ ಬಗ್ಗೆ

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೧೪ (೪೧೫೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆದಿ ಜಾಂಬವ ಅಭಿವೃದ್ಧಿ ನಿಗಮ ರಚನೆ ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ; ಇದ್ದರೆ, ಯಾವಾಗ ಮಾಡಲಾಗುವುದು;

(ಆ) ಪರಿಶಿಷ್ಟ ಜಾತಿಯಲ್ಲಿ ಅತಿ ಹೆಚ್ಚು ಜನಸಂಖ್ಯೆ ಇರುವ ಆದಿ ಜಾಂಬವ ಜನಾಂಗದ ಅಭಿವೃದ್ಧಿ ನಿಗಮದ ಅಗತ್ಯತೆ ಹೆಚ್ಚಾಗಿದ್ದು, ಕೂಡಲೇ ರಚನೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ;

(ಇ) ಈ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು?

## ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಹಂಚಿಕೆಯಲ್ಲಿನ ತಾರತಮ್ಯ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೩೭೧೫ (೪೩೪೧) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಕೆ.ಎಲ್.ಎಲ್.ಎ.ಡಿ.ಎಸ್.ಯುಡಿಯಲ್ಲಿ ದಿನಾಂಕ : ೧೧.೦೩.೨೦೧೫ರ ತಿದ್ದುಪಡಿ ಆದೇಶ ರಾಜ್ಯದ ಎಲ್ಲಾ ಶಾಸಕರುಗಳಿಗೆ ಏಕರೂಪವಾಗಿ ಪಾಲನೆ ಆಗುತ್ತಿದೆಯೇ;

(ಆ) ೧೧.೦೩.೨೦೧೫ರ ತಿದ್ದುಪಡಿ ಆದೇಶದಿಂದ ಈಗಾಗಲೇ ಸಂಘ ಸಂಸ್ಥೆಗಳಿಗೆ ನೀಡಿರುವ ಅನುದಾನದಲ್ಲಿ ಹಣ ಬಿಡುಗಡೆಯಾಗದೆ ಕಾಮಗಾರಿಗಳು ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಎಂ.ಎಲ್.ಎ., ಎಂ.ಎಲ್.ಸಿ ನಾಮನಿರ್ದೇಶನಗೊಂಡವರಿಗೆ ಹಣ ಹಂಚಿಕೆ ಮಾಡಲು ಬೇರೆ ಬೇರೆ ಕಾನೂನು ಕ್ರಮಗಳನ್ನು ಅನುಸರಿಸಬೇಕೆ;

(ಈ) ಕ್ಷೇತ್ರವಾರು ಅನುದಾನದ ಹಂಚಿಕೆಯಾಗುವಾಗ ನಗರ ಪ್ರದೇಶಗಳಿಗೆ ಹಾಗೂ ಉಳಿದ ಭಾಗಗಳಿಗೆ ಪ್ರತ್ಯೇಕ ಕಾನೂನು ಇವೆಯೇ;

(ಉ) ಶಾಸಕರ ಅನುದಾನ ಮಂಜೂರಾತಿ ಪತ್ರ ನೀಡಿದರು ಸಹಾ ಕಾಮಗಾರಿಗಳಿಗೆ ನಿಗದಿತ ಸಮಯಕ್ಕೆ ಅನುದಾನ ಬಿಡುಗಡೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ನಿಗದಿತ ಸಮಯಕ್ಕೆ ಶಾಸಕರಿಂದ ಮಂಜೂರಾದ ಅನುದಾನ ಸಂಘ ಸಂಸ್ಥೆಗಳು ಅನುದಾನಿತ ಕಾಮಗಾರಿಗಳಿಗೆ ಬಿಡುಗಡೆ ಆಗದೇ ಇರುವುದರಿಂದ ಕೈಗೊಂಡ ಕಾಮಗಾರಿ ನಿರ್ಮಾಣವು ಕುಂಠಿತವಾಗಿ ಸಂಘ ಸಂಸ್ಥೆಗಳಿಗೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಋ) ಈ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ತೆಗೆದುಕೊಂಡ ನಿಲುವೇನು?

## ಉನ್ನತ ವ್ಯಾಸಂಗಕ್ಕೆ ಸೌಲಭ್ಯಗಳನ್ನು ಒದಗಿಸುವ ಬಗ್ಗೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೩೭೧೬ (೪೩೪೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ಪಿ.ಯು. ನಂತರದ ವ್ಯಾಸಂಗಕ್ಕೆ ಯಾವ ಯಾವ ಸೌಲಭ್ಯಗಳನ್ನು ಸರ್ಕಾರದ ವತಿಯಿಂದ ಒದಗಿಸಲಾಗಿದೆಯೆ; (ವಿದ್ಯಾರ್ಥಿ ನಿಲಯ, ವಿದ್ಯಾರ್ಥಿ ವೇತನ ಹಾಗೂ ವ್ಯಾಸಂಗ ಸಾಲಗಳು ಸೇರಿದಂತೆ)

(ಆ) ಇವುಗಳ ಪ್ರಯೋಜನೆ ಪಡೆಯಲು ವಿದ್ಯಾರ್ಥಿಗಳಿಗೆ ಯಾವ ರೀತಿಯ ಸೌಲಭ್ಯವನ್ನು ನೀಡಲಾಗಿದೆ;

(ಇ) ಹಾಗಿದ್ದಲ್ಲಿ, ಇವುಗಳನ್ನು ನೀಡಲು ಅನುಸರಿಸುವ ಮಾನದಂಡಗಳೇನು; ಪೋಷಕರ ವರಮಾನವನ್ನು ಗಮನಿಸ–ಲಾಗುತ್ತಿದೆಯೆ; (ವಿವರ ನೀಡುವುದು)

(ಈ) ಇದು ಸಮರ್ಪಕವಾಗಿ ಅನುಷ್ಠಾನಗೊಳ್ಳುತ್ತಿದೆಯೇ ಈ ಯೋಜನೆಗಳಿಂದ ಲಾಭ ಪಡೆದವರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಉ) ಈ ಯೋಜನೆಯ ಅನುಷ್ಠಾನದಲ್ಲಿ ಪ್ರಗತಿ ಸಾಧಿಸಿದೆಯೇ ಮೇಲುಸ್ತುವಾರಿ ನೋಡುವವರು ಯಾರು (ವಿವರಗಳನ್ನು ಒದಗಿಸುವುದು)

(ಊ) ಪಿ.ಯು.ವ್ಯಾಸಂಗಕ್ಕೆ ಪಡೆದ ಸೌಲಭ್ಯಗಳನ್ನು ಉನ್ನತ ಶಿಕ್ಷಣಕ್ಕೂ ಮುಂದುವರೆಸಲಾಗುವುದೇ ಅಥವಾ ಪ್ರತ್ಯೇಕವಾಗಿ ಯೋಜನೆಯ ಲಾಭಕ್ಕೆ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬೇಕೆ? (ವಿವರ ಒದಗಿಸುವುದು)

## ಬಾಣಂತಿಯರು ಮತ್ತು ನವಜಾತ ಶಿಶುಗಳು ಸಾವನ್ನಪ್ಪುತ್ತಿರುವ ಬಗ್ಗೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೩೭೧೭ (೪೩೪೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಾದಾದ್ಯಂತ ಸರ್ಕಾರಿ ಆಸ್ಪತ್ರೆಗಳಲ್ಲಿ ಬಾಣಂತಿಯರು ಮತ್ತು ನವಜಾತ ಶಿಶುಗಳು ಸಾವನ್ನಪ್ಪುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

(ಆ) ಹಾಗಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಸಾವನ್ನಪ್ಪುತ್ತಿರುವ ಬಾಣಂತಿಯರು ಹಾಗೂ ನವಜಾತ ಶಿಶುಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಆಸ್ಪತ್ರೆಗಳಲ್ಲಿ ಈ ರೀತಿ ಸಾವನ್ನಪ್ಪುತ್ತಿರುವುದನ್ನು ಪತ್ತೆ ಹಚ್ಚಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ;

(ಈ) ಕೈಗೊಂಡಿದ್ದಲ್ಲಿ ಈ ರೀತಿಯ ಸಾವುಗಳು ಸಂಭವಿಸುವುದನ್ನು ತಪ್ಪಿಸಲು ತೆಗೆದುಕೊಂಡ ಕ್ರಮಗಳೇನು?

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ನಕಲಿ ಔಷಧಿಗಳನ್ನು ತಡೆಯುವ ಬಗ್ಗೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೩೭೧೮ (೪೩೪೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ನಕಲಿ ಔಷಧ ಪ್ರಕರಣಗಳು ಹಾಗೂ ಔಷಧಿ ಖರೀದಿಯಲ್ಲಿ ಅಕ್ರಮಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ, ಅಂತಹ ಪ್ರಕರಣಗಳ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ;

(ಆ) ಬಂದಿದ್ದಲ್ಲಿ, ನಕಲಿ ಔಷಧಿಗಳೆಂದು ಯಾವ ಯಾವ ಔಷಧಿಗಳನ್ನು ಗುರುತಿಸಲಾಗಿದೆ;

(ಇ) ಇಂತಹ ಪ್ರಕರಣಗಳಲ್ಲಿನ ತಪ್ಪಿತಸ್ಥರನ್ನು ಗುರುತಿಸಲಾಗಿದೆಯೇ; ಇದಕ್ಕೆ ಕಾರಣಗಳೇನು; (ವಿವರ ನೀಡುವುದು)

(ಈ) ಈ ಅಕ್ರಮವನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿಗಳ ಸಹಾಯಧನ ಸದುಪಯೋಗದ ಕುರಿತು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೩೭೮೯ (೪೩೪೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಿವಿಧ ಸಂಘ/ ಸಂಸ್ಥೆಗಳಿಗೆ ವಿದ್ಯಾರ್ಥಿನಿಲಯದ ಕಟ್ಟಡ ನಿರ್ಮಾಣಕ್ಕೆ ನೀಡಲಾದ ಸಹಾಯಧನ ಎಷ್ಟು; (ಜಿಲ್ಲಾವಾರು, ಸಂಘ ಸಂಸ್ಥೆಗಳವಾರು ವಿವರ ನೀಡುವುದು)

(ಆ) ಈ ಸಂಘ ಸಂಸ್ಥೆಗಳ ವಿದ್ಯಾರ್ಥಿನಿಲಯಗಳಲ್ಲಿ ಇರುವ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ಮತ್ತು ಆ ಸಂಘ/ಸಂಸ್ಥೆಗಳಲ್ಲಿ ಆಯಾ ಸಮುದಾಯದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಸಂಘ ಸಂಸ್ಥೆಗಳವಾರು ವಿವರ ನೀಡುವುದು)

(ಇ) ವಿದ್ಯಾರ್ಥಿನಿಲಯದ ಕಟ್ಟಡ ನಿರ್ಮಾಣಕ್ಕೆ ಸರ್ಕಾರ ನೀಡಿದ ಸಹಾಯಧನ ಸದುಪಯೋಗವಾಗಿಸಲು ಅವಶ್ಯಕ ವಿದ್ಯಾರ್ಥಿಗಳು ವಾಸಿಸುತ್ತಿರುವ ಬಗ್ಗೆ ಯಾವ ರೀತಿಯ ತಪಾಸಣೆಯನ್ನು ಕೈಗೊಳ್ಳಲಾಗುತ್ತಿದೆ;

(ಈ) ಕೆಲವು ವಿದ್ಯಾರ್ಥಿನಿಲಯಗಳಲ್ಲಿ ಅತ್ಯಂತ ಕಡಿಮೆ ಸಂಖ್ಯೆಯ ವಿದ್ಯಾರ್ಥಿಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ ಯಾವ ಕ್ರಮ ಕೈಗೊಳ್ಳಲಾಗಿದೆ?

## ಗಡಿ ಅಭಿವೃದ್ಧಿ ಪ್ರಾಧಿಕಾರದಿಂದ ನೀಡಲಾದ ಅನುದಾನದ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೨೦ (೪೧೯೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಿಂದ ೨೦೧೭–೧೮ನೇ ಸಾಲಿನವರೆಗೆ (೧೦–೧೧–೨೦೧೭ರ ವರೆಗೆ) ರಾಜ್ಯದಾದ್ಯಂತ ಗಡಿ ಅಭಿವೃದ್ಧಿಗೆ ನೀಡಲಾದ ಅನುದಾನ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಯಾವ ಯಾವ ಕಾಮಗಾರಿಗಳಿಗೆ ಎಷ್ಟೆಷ್ಟು ಅನುದಾನ ನೀಡಲಾಗಿದೆ ; (ಕಾಮಗಾರಿವಾರು ವಿವರ ನೀಡುವುದು)

(ಇ) ಈವರೆಗೆ ಬಿಡುಗಡೆ ಆಗಿರುವ ಒಟ್ಟು ಅನುದಾನವೆಷ್ಟು ?

## ಗೊಲ್ಲ ಜನಾಂಗದ ಅಭಿವೃದ್ಧಿ ನಿಗಮ ಸ್ಥಾಪಿಸುವ ಕುರಿತು

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೨೧ (೪೧೬೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಾದ್ಯಂತ ಇರುವ ಗೊಲ್ಲ ಜನಾಂಗದ ಜನಸಂಖ್ಯೆ ಎಷ್ಟು ;

(ಆ) ಗೊಲ್ಲ ಜನಾಂಗದ ಸರ್ವಾಂಗೀಣ ಅಭಿವೃದ್ಧಿಗೆ ಪ್ರತ್ಯೇಕ ನಿಗಮ ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಇ) ಇದ್ದಲ್ಲಿ, ಸ್ಥಾಪಿಸಲಾಗುವುದು ಯಾವಾಗ ?

## ಜಾತಿ ಜನಗಣತಿ ವರದಿ ಪ್ರಕಟಿಸಲು ವಿಳಂಬ ಮಾಡುತ್ತಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೨೨ (೪೩೨೭) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) 'ಜಾತಿ ಜನಗಣತಿ' ವರದಿಯನ್ನು ಸರ್ಕಾರ ಬಿಡುಗಡೆಗೊಳಿಸದಿರಲು ಕಾರಣಗಳೇನು ;

(ಆ) 'ಜಾತಿ ಜನಗಣತಿ' ಗೆ ತಗುಲಿದ ಒಟ್ಟು ವೆಚ್ಚ ಎಷ್ಟು ; ಗಣತಿಯನ್ನು ಯಾವಾಗ ಪ್ರಾರಂಭಿಸಲಾಯಿತು ; ಯಾವಾಗ ಪೂರ್ಣಗೊಳಿಸಲಾಯಿತು ;

(ಇ) 'ಜಾತಿ ಜನಗಣತಿ' ವರದಿ ಸಿದ್ಧವಾಗಿದ್ದರೂ ವರದಿ ಪ್ರಕಟಿಸಲು ಸರ್ಕಾರಕ್ಕಿರುವ ತೊಂದರೆಗಳೇನು ;

(ಈ) 'ಜಾತಿ ಜನಗಣತಿ' ವರದಿ ಎಂದು ಬಹಿರಂಗಗೊಳಿಸಲಾಗುವುದು ; ಬಹಿರಂಗವಾಗಿ ಪ್ರಕಟಿಸುವ ಕುರಿತು ಸರ್ಕಾರದ ನಿಲುವೇನು ?

## ಥೀಂ ಪಾರ್ಕ್ ಅಭಿವೃದ್ಧಿಗೆ ಅನುದಾನ ವಿಳಂಬ ಮಾಡುತ್ತಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೨೩ (೪೩೨೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಡಿ ಲಭ್ಯವಿರುವ ಯೋಜನೆಗಳಾವುವು ;

(ಆ) ರಂಗಮಂದಿರ, ಥೀಂ ಪಾರ್ಕ್ ಅಭಿವೃದ್ಧಿಗೆ ಅನುದಾನ ನೀಡಲಾಗುತ್ತಿದೆಯೇ ;

(ಇ) ಕಳೆದ ೩ ವರ್ಷಗಳಲ್ಲಿ ವಿವಿಧ ಜಿಲ್ಲೆಗಳಿಗೆ ಮಂಜೂರಾದ ಖರ್ಚಾದ ಅನುದಾನವೆಷ್ಟು; ಕೈಗೊಂಡ ಅಭಿವೃದ್ಧಿ ಕಾರ್ಯಗಳೇನು ;

(ಈ) ಉಡುಪಿ ಜಿಲ್ಲೆ, ಉಡುಪಿ ತಾಲ್ಲೂಕಿನ ಕೋಟತಟ್ಟುವಿನಲ್ಲಿರುವ ಡಾ: ಶಿವರಾಮ ಕಾರಂತ ಥೀಂ ಪಾರ್ಕ್‌ನ ಸಮಗ್ರ ಅಭಿವೃದ್ಧಿಗೆ ಪ್ರಸ್ತಾವನೆ ಸಲ್ಲಿಕೆಯಾಗಿದ್ದರೂ ಅನುದಾನ ಬಿಡುಗಡೆ ಮಾಡದಿರಲು ಕಾರಣಗಳೇನು ;

(ಉ) ಉಡುಪಿ ಜಿಲ್ಲೆಯ, ಕೋಟತಟ್ಟುವಿನಲ್ಲಿರುವ ಡಾ: ಶಿವರಾಮ ಕಾರಂತ ಥೀಂ ಪಾರ್ಕ್‌ನ ಅಭಿವೃದ್ಧಿಗೆ ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ?

## ಅನ್ನಭಾಗ್ಯ ಯೋಜನೆಯ ಪರಿಣಾಮಕಾರಿ ಅನುಷ್ಠಾನದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೨೪ (೪೩೨೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) "ಅನ್ನಭಾಗ್ಯ" ಯೋಜನೆಗಾಗಿ ಸರ್ಕಾರ ಕಳೆದ ೩ ವರ್ಷಗಳಲ್ಲಿ ವ್ಯಯಿಸಿದ ಅನುದಾನ ಎಷ್ಟು; ಸದರಿ ಯೋಜನೆಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು ಎಷ್ಟು; (ವರ್ಷವಾರು ವಿವರ ನೀಡುವುದು)

(ಆ) "ಅನ್ನಭಾಗ್ಯ" ಕ್ಕಾಗಿ ಅಕ್ಕಿಯನ್ನು ಎಲ್ಲಿಂದ ಎಷ್ಟು ದರಕ್ಕೆ ಖರೀದಿಸಲಾಗುತ್ತಿದೆ ; (ಸಂಪೂರ್ಣ ವಿವರ ನೀಡುವುದು) ಪ್ರತಿ ಕೆ.ಜಿ.ಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಬ್ಸಿಡಿ ಮೊತ್ತ ಎಷ್ಟು ;

(ಇ) "ಅನ್ನಭಾಗ್ಯ" ಅಕ್ಕಿಯ ಅಕ್ರಮ ಮಾರಾಟ ಜಾಲಗಳು ಪತ್ತೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) "ಅನ್ನಭಾಗ್ಯ" ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಆಹಾರ ಸುರಕ್ಷತಾ ಕಾಯ್ದೆಯ ಅನುಷ್ಠಾನದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೨೫ (೪೧೭೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆರೋಗ್ಯ ಇಲಾಖೆಯಲ್ಲಿನ ಆಹಾರ ಸುರಕ್ಷತಾ ವಿಭಾಗಕ್ಕೆ ವೃಂದ ಮತ್ತು ನೇಮಕಾತಿ ನಿಯಮಾವಳಿಗಳು ರಚನೆಯಾಗಿ ವರ್ಷಗಳೇ ಕಳೆದರೂ ಇನ್ನೂ ಯಾವುದೇ ನೇಮಕಾತಿ ಮಾಡಿಕೊಳ್ಳದೇ ಇರುವುದಕ್ಕೆ ಕಾರಣವೇನು ; ವಿಳಂಬಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗುವುದು ;

(ಆ) ಆಹಾರ ಸುರಕ್ಷತಾ ವಿಭಾಗಕ್ಕೆ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಲ್ಲಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಆಹಾರ ಸುರಕ್ಷತಾ ಅಧಿಕಾರಿಗಳನ್ನು ವಿಲೀನಗೊಳಿಸಲಾಗಿದ್ದು / ಸೇರ್ಪಡೆಗೆ ಅವಕಾಶ ಕಲ್ಪಿಸಲಾಗಿದ್ದು ಈ ಬಗ್ಗೆ ಪ್ರತ್ಯೇಕ ಅಧಿಸೂಚನೆಯನ್ನು ಹೊರಡಿಸಲಾಗುವುದೇ ; ಸದರಿ ಅಧಿಕಾರಿಗಳಿಗೆ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಲ್ಲಿ ಸೂಚಿಸಿರುವ ವೇತನವನ್ನು ನೀಡಲಾಗುವುದೇ ; (ವಿವರ ಒದಗಿಸುವುದು)

(ಇ) ಈ ವಿಭಾಗದಲ್ಲಿ ನಿಯೋಜನೆ / ಅನ್ಯಪರ ಸೇವೆ / ಹೆಚ್ಚುವರಿ ಸೇವೆಯ ಮೇಲೆ ಯಾರು ಯಾರು, ಎಲ್ಲಿ–ಎಲ್ಲಿ, ಯಾವಾಗಿನಿಂದ ಯಾವ ಯಾವ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ; ಈ

ನೇಮಕಗಳು ರಚನೆಗೊಂಡಿರುವ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಿಗೆ ಪೂರಕವಾಗಿದೆಯೇ ; ಪೂರಕವಲ್ಲದ ಹಾಗೂ ಕಾನೂನು ಬಾಹಿರ ನೇಮಕಾತಿಗಳನ್ನು ರದ್ದುಪಡಿಸಲಾಗುವುದೇ ; (ವಿವರ ಒದಗಿಸುವುದು)

(ಈ) ಘನ ನ್ಯಾಯಾಲಯಗಳಲ್ಲಿ ಯಾವ ಯಾವ ಪ್ರಕರಣಗಳು ಹಾಗೂ ಆಹಾರ ಸುರಕ್ಷತಾ ವಿಭಾಗದಲ್ಲಿ ಯಾವ ಯಾವ ಕಡತಗಳು (ಅಸುರಕ್ಷತಾ ಆಹಾರ ಮಾದರಿಯ ಸಂಬಂಧ ದಾಖಲಿಸಬೇಕಾಗಿರುವ ಮೊಕ್ಕದ್ದಮೆಗಳು ಸೇರಿದಂತೆ) ಎಷ್ಟು ಸಮಯದಿಂದ ವಿಲೇವಾರಿಗೆ ಬಾಕಿ ಇರುತ್ತದೆ ; (ವಿವರ ನೀಡುವುದು)

(ಉ) ಕಳೆದ ಎರಡು ವರ್ಷಗಳಿಂದ ಇಡೀ ರಾಜ್ಯದಲ್ಲಿನ ಆಹಾರ ಸುರಕ್ಷಿತಾ ಅಧಿಕಾರಿಗಳು ವಿಶ್ಲೇಷನೆಗೆ ಸಂಗ್ರಹಿಸಿರುವ ಆಹಾರ ಮಾದರಿಗಳ ಮಾಸಿಕವಾರು, ಆಹಾರ ಸುರಕ್ಷಿತಾ ಅಧಿಕಾರಿಗಳವಾರು ವಿವರ ನೀಡುವುದು ; ಕಳಪೆ ಸಾಧನೆ ತೋರಿರುವ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳೇನು ;

(ಊ) ಆಹಾರ ಸುರಕ್ಷಿತಾ ವಿಭಾಗವನ್ನು ಆರೋಗ್ಯ ಇಲಾಖೆ ಆರೋಗ್ಯ ಭವನಕ್ಕೆ ಸ್ಥಳಾಂತರಿಸಲಾಗುವುದೇ ; ಜಾಗೃತ ಕೋಶದಲ್ಲಿ ಆಹಾರ ಸುರಕ್ಷಿತಾ ವಿಭಾಗಕ್ಕೆ ಸಂಬಂಧಿಸಿದ ಯಾರ ಯಾರ ಕಡತಗಳು ವಿಲೇವಾರಿಗೆ ಬಾಕಿ ಇರುತ್ತದೆ ? (ವಿವರ ಒದಗಿಸುವುದು)

## ಪಡಿತರ ಚೀಟಿ ಅರ್ಜಿ ವಿಲೇವಾರಿಯಲ್ಲಿ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೨೬ (೪೩೭೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಡಿತರ ಚೀಟಿಗಾಗಿ ಸಲ್ಲಿಕೆಯಾಗಿರುವ ಮತ್ತು ವಿಲೇವಾರಿಗೆ ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು;

(ಆ) ಪಡಿತರ ಚೀಟಿಗಳನ್ನು "೧೦ ದಿನಗಳಲ್ಲಿ ಮನೆ ಬಾಗಿಲಿಗೆ" ತಲುಪಿಸಲಾಗುವುದು ಎನ್ನುವ ಸರ್ಕಾರದ ಭರವಸೆ ಹುಸಿಯಾಗಿರುವುದು ನಿಜವೇ ; ಕಾರಣಗಳೇನು ;

(ಇ) ಪ್ರಸಕ್ತ ರಾಜ್ಯದಲ್ಲಿ ಚಾಲ್ತಿಯಲ್ಲಿರುವ B.P.L ಅಂತ್ಯೋದಯ ಮತ್ತು A.P.L ಪಡಿತರ ಚೀಟಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಈ) ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಕೆಯಾಗಿ ಅನೇಕ ತಿಂಗಳು ಕಳೆದಿದ್ದರೂ ಪಡಿತರ ಚೀಟಿಯಿಲ್ಲದೇ ಪಡಿತರ "ವಾಜಪೇಯಿ ಆರೋಗ್ಯ ಶ್ರೀ" ಅನೇಕ ತುರ್ತು ಸೇವೆಗಳಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಆಧಾರ್ ಮತ್ತು ಮತದಾರರ ಚೀಟಿ ಸಂಖ್ಯೆ ಜೋಡಣೆಯಾದ / ಜೋಡಣೆಗೆ ಬಾಕಿಯಿರುವ ಪಡಿತರ ಚೀಟಿಗಳ ಸಂಖ್ಯೆ ಎಷ್ಟು; ಹೀಗೆ ಜೋಡಣೆಯಾದ ಪಡಿತರ ಚೀಟಿದಾರರಿಗೆ ಪಡಿತರ / ನೀಡಲಾಗುತ್ತದೆಯೇ ;

(ಊ) ಪಡಿತರ ಚೀಟಿಯ ಅರ್ಜಿಗಳ ಶೀಘ್ರ ವಿಲೇವಾರಿಗೆ ಪಡಿತರ ಸಾಮಗ್ರಿಗಳಿಂದ ಫಲಾನುಭವಿಗಳು ವಂಚಿತರಾಗುವುದನ್ನು ತಪ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

## ಪ್ರಗತಿ ಪರ ರೈತರಿಗೆ ರಾಜ್ಯೋತ್ಸವ ಪ್ರಶಸ್ತಿ ನೀಡುವ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೨೭ (೪೨೦೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡುವ ವೇಳೆ ಪ್ರಗತಿಪರ ರೈತರುಗಳನ್ನು ರಾಜ್ಯ ಸರ್ಕಾರ ಗುರುತಿಸದಿರಲು ಕಾರಣವೇನು ; (ವಿವರ ನೀಡುವುದು)

(ಆ) ಸರ್ಕಾರಕ್ಕಿರುವಂತೆ ಆ ಆಯ್ಕೆ ಸಮಿತಿಯವರಿಗೂ ರೈತರನ್ನು ಕಂಡರೆ ನಿರ್ಲಕ್ಷ್ಯವೇ ; (ವಿವರ ನೀಡುವುದು)

(ಇ) ರಾಜ್ಯದಲ್ಲಿರುವ ೮೦ ಲಕ್ಷ ರೈತ ಕುಟುಂಬಗಳಿಗೆ ಸರ್ಕಾರ ಈ ರೀತಿ ಅಪಮಾನ ಮಾಡುವ ಕಾಳಜಿ ಇದ್ದ ಮೇಲೆ ವರ್ಷ ವರ್ಷ ಪ್ರಶಸ್ತಿ ನೀಡಿದವರಿಗೆ, ಮತ್ತೆ ಮತ್ತೆ ಪ್ರಶಸ್ತಿ ನೀಡುವುದರಿಂದ ಸರ್ಕಾರ ಯಾವ ಮಾನದಂಡ ಅನುಸರಿಸಿ, ಯಾವ ಶಕ್ತಾನುಸಾರ ಈ ಪ್ರಶಸ್ತಿ ನೀಡುತ್ತಿದೆ ; (ವಿವರ ನೀಡುವುದು)

(ಈ) ಹೊರನಾಡು ಕನ್ನಡಿಗರು ಇರಲಿ, ಹೊರ ರಾಜ್ಯದವರ ಬಗ್ಗೆಯು ಮತ್ತು ಅವರ ಕ್ಷೇತ್ರಗಳ ಬಗ್ಗೆಯು ಅಭಿಮಾನ ಇರಲಿ, ಆದರೆ ಹೊರ ರಾಜ್ಯದವರಿಗೆ ಪ್ರಶಸ್ತಿ ನೀಡಲಾಗಿದ್ದು, ಆ ರಾಜ್ಯದವರು ಸಹ ನಮ್ಮ ರಾಜ್ಯದವರಿಗೆ ಇಂತಹ ಪ್ರಶಸ್ತಿಗಳನ್ನು ನೀಡುವರೆ ; (ವಿವರ ನೀಡುವುದು)

(ಉ) ಈಗಲಾದರೂ ಎಚ್ಚೆತ್ತುಕೊಂಡು ಸರ್ಕಾರ ಮಾಡಿರುವ ತಪ್ಪನ್ನು ತಿದ್ದುಕೊಂಡು, ರೈತರಲ್ಲಿ ಕ್ಷಮೆ ಕೇಳಿ, ೮೦ ಲಕ್ಷ ರೈತ ಕುಟುಂಬದವರಲ್ಲಿ ಒಂದೋ ಎರಡೋ ರೈತರಿಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿಯನ್ನು ನೀಡಲು ಕ್ರಮ ವಹಿಸುವುದೇ ?

## ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ತೆರೆಯುವ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೨೮ (೪೨೨೩) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ನಗರದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ತೆರೆಯಲು ಸರ್ಕಾರ ನಿರ್ಧರಿಸಿದೆಯೇ ;

(ಆ) ಹಾಗಿದ್ದಲ್ಲಿ, ಈ ಆಸ್ಪತ್ರೆ ತೆರೆಯಲು ತುಮಕೂರು ನಗರದಲ್ಲಿ ಎಲ್ಲಿ ಸ್ಥಳವನ್ನು ಗುರುತಿಸಲಾಗಿದೆ ; (ವಿವರ ನೀಡುವುದು)

(ಇ) ಈ ಆಸ್ಪತ್ರೆಯನ್ನು ತೆರೆಯಲು ೨೦೧೭–೧೮ನೇ ಸಾಲಿನಲ್ಲಿ ಒದಗಿಸಿರುವ ಅನುದಾನವೆಷ್ಟು ; (ಮಾಹಿತಿ ನೀಡುವುದು)

(ಈ) ಆಸ್ಪತ್ರೆಯ ಕಟ್ಟಡದ ಕಾಮಗಾರಿಯನ್ನು ಯಾವಾಗ ಪ್ರಾರಂಭ ಮಾಡಲಾಗುವುದು ?

## ಗಂಗಾ ಕಲ್ಯಾಣ ಯೋಜನೆ ಅಡಿ ಕೊಳವೆ ಬಾವಿಗಳು

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೦೨೯ (೪೨೦೬) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಲ್ಲಿ ದೇವರಾಜು ಅರಸು ಅಭಿವೃದ್ಧಿ ನಿಗಮದಿಂದ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಕೊಳವೆ ಬಾವಿಯನ್ನು ಕೊರೆಸಿ, ವಿದ್ಯುತ್ ಸಂಪರ್ಕವನ್ನು ಕಲ್ಪಿಸಿ ರೈತರಿಗೆ ಹಸ್ತಾಂತರಿಸಿರುವ ಸಂಖ್ಯೆ ಎಷ್ಟು ; (ಜಿಲ್ಲಾವಾರು

ಮಾಹಿತಿ ನೀಡುವುದು) ಹಾಗೂ ತುಮಕೂರು ಜಿಲ್ಲೆಗೆ ಸಂಬಂಧಿಸಿದಂತೆ ಈ ಬಗ್ಗೆ (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕಳೆದ ಎರಡು ವರ್ಷಗಳಲ್ಲಿ ಈ ಕೊಳವೆ ಬಾವಿಗಳನ್ನು ಕೊರೆಸಿ, ವಿದ್ಯುತ್ ಸಂಪರ್ಕ ಒದಗಿಸಲು ಖರ್ಚು ಮಾಡಿರುವ ಹಣವೆಷ್ಟು; ಹಾಗೂ ವಿದ್ಯುತ್ ಸಂಪರ್ಕ ನೀಡಲು ಬಾಕಿ ಇರುವ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ೨೦೧೭–೧೮ನೇ ಸಾಲಿಗೆ ಸದರಿ ನಿಗಮದ ವತಿಯಿಂದ ಗಂಗಾ ಕಲ್ಯಾಣ ಯೋಜನೆಯಡಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಸಲು ಭೌತಿಕ ಗುರಿಯನ್ನು ಹಾಕಿಕೊಳ್ಳಲಾಗಿದೆ; ಇದಕ್ಕಾಗಿ ಎಷ್ಟು ಅನುದಾನವನ್ನು ಕಾಯ್ದಿರಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

## ಬಯಲು ಸೀಮೆ ಪ್ರದೇಶಾಭಿವೃದ್ಧಿ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೩೦ (೪೨೦೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ವ್ಯಾಪ್ತಿಗೆ ಒಟ್ಟು ಎಷ್ಟು ಜಿಲ್ಲೆಗಳು ಮತ್ತು ಎಷ್ಟು ತಾಲ್ಲೂಕುಗಳು ಸೇರುತ್ತವೆ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಜಿಲ್ಲೆಗಳಿಂದ ಬಂದ ಒಟ್ಟು ಚುನಾಯಿತ ಸದಸ್ಯರ ಸಂಖ್ಯೆ ಎಷ್ಟು ಹಾಗೂ ಈ ಮಂಡಳಿ ವ್ಯಾಪ್ತಿಗೆ ಎಷ್ಟು ವಿಧಾನ ಪರಿಷತ್ ಸದಸ್ಯರು ಸೇರುತ್ತಾರೆ; (ಮಾಹಿತಿ ನೀಡುವುದು)

(ಇ) ಅದೇ ರೀತಿಯಾಗಿ ಸರ್ಕಾರದಿಂದ ನಾಮನಿರ್ದೇಶನಗೊಂಡ ಸದಸ್ಯರು ಎಷ್ಟು;

(ಈ) ೨೦೧೬-೧೭ ಮತ್ತು ೨೦೧೭-೧೮ರಲ್ಲಿ ಸದರಿ ಮಂಡಳಿಗೆ ಸರ್ಕಾರದಿಂದ ನೀಡಿರುವ ಅನುದಾನವೆಷ್ಟು; (ವಿವರ ನೀಡುವುದು)

(ಉ) ವಿಧಾನ ಸಭೆ ಸದಸ್ಯರಿಗೆ ಮತ್ತು ವಿಧಾನ ಪರಿಷತ್ ಸದಸ್ಯರಿಗೆ ತಾರತಮ್ಯ ಮಾಡಿ ಅನುದಾನ ಹಂಚಿಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ; ಬಂದಿದ್ದಲ್ಲಿ ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಊ) ಒಂದು ಜಿಲ್ಲೆಯನ್ನು ಪ್ರತಿನಿಧಿಸುವ ವಿಧಾನ ಪರಿಷತ್ ಸ್ಥಳೀಯ ಸಂಸ್ಥೆಗಳ ಕ್ಷೇತ್ರದ ಸದಸ್ಯರಿಗೆ ಕನಿಷ್ಟ ಪಕ್ಷ ೮ ರಿಂದ ೧೦,೧೧ ವಿಧಾನ ಸಭಾ ಕ್ಷೇತ್ರಗಳು ಸೇರಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ; ಬಂದಿದ್ದಲ್ಲಿ ಜಿಲ್ಲೆಯನ್ನು ಪ್ರತಿನಿಧಿಸುವ ವಿಧಾನ ಪರಿಷತ್ ಸದಸ್ಯರ ಪ್ರದೇಶಾಭಿವೃದ್ಧಿಗೆ ಕೇವಲ ೧೫ ರಿಂದ ೨೦ ಲಕ್ಷ ಹಂಚಿಕೆ ಮಾಡಿದರೆ ಯಾವ ತಾಲ್ಲೂಕಿಗೆ ಈ ಅನುದಾನ ಕೊಡಲು ಸಾಕಾಗುತ್ತದೆ? (ವಿವರ ನೀಡುವುದು)

## ಗೊಡನಮಲ್ಕಿ ಜಲಪಾತದಲ್ಲಿನ ಯಾತ್ರಿ ನಿವಾಸದ ನಿರ್ವಹಣೆ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೩೭೩೧ (೪೩೪೬) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿ ಜಿಲ್ಲೆಯ ಪ್ರವಾಸಿ ಸ್ಥಳವಾಗಿರುವ ಗೊಡಚಿನಮಲ್ಕಿ ಜಲಪಾತದ ಬಳಿ ಇರುವ ಯಾತ್ರಿ ನಿವಾಸವು ಸರಿಯಾದ ನಿರ್ವಹಣೆಯಿಲ್ಲದೆ ಅಕ್ರಮ ಚಟುವಟಿಕೆಗಳ ತಾಣವಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಇದನ್ನು ತಡೆಯುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಗೊಡಚಿನಮಲ್ಕಿ ಜಲಪಾತದ ಹತ್ತಿರ ಇರುವ ಯಾತ್ರಿ ನಿವಾಸವನ್ನು ಯಾವಾಗ ನಿರ್ಮಿಸಲಾಗಿದೆ ; ಅದಕ್ಕೆ ತಗುಲಿದ ಖರ್ಚು ಎಷ್ಟು ; ಇದರ ನಿರ್ವಹಣೆಗೆ ಸರ್ಕಾರ ವಾರ್ಷಿಕ ಎಷ್ಟು ಅನುದಾನ ನೀಡುತ್ತದೆ ; ಇದರ ಮೇಲ್ವಿಚಾರಕರು ಯಾರು ;

(ಇ) ಕಳೆದ ಮೂರು ವರ್ಷಗಳಲ್ಲಿ ಇದರ ನಿರ್ವಹಣೆಗೆ ಎಷ್ಟು ಹಣ ಖರ್ಚು ಮಾಡಲಾಗಿದೆ ;

(ಈ) ಜಲಪಾತ ವೀಕ್ಷಿಸಲು ಪ್ರತಿನಿತ್ಯ ಬರುವ ಪ್ರವಾಸಿಗರ ಸಂಖ್ಯೆ ಎಷ್ಟು ; ಯಾತ್ರಿ ನಿವಾಸ / ಯಾತ್ರಾಸ್ಥಳದಿಂದ ಬರುವ ವಾರ್ಷಿಕ ಆದಾಯವೆಷ್ಟು ;

(ಉ) ಪ್ರವಾಸಿಗರಿಗೆ ಅನುಕೂಲ ಒದಗಿಸುವ ಹಿತದೃಷ್ಟಿಯಿಂದ ಯಾತ್ರಿ ನಿವಾಸವನ್ನು ಅಭಿವೃದ್ಧಿಪಡಿಸಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು ; ಸದರಿ ಯಾತ್ರಾ ಸ್ಥಳವನ್ನು ಅಭಿವೃದ್ಧಿಪಡಿಸಲು ಸರ್ಕಾರವು ಯಾವ ಯೋಜನೆಗಳನ್ನು ಹಮ್ಮಿಕೊಂಡಿದೆ ? (ವಿವರ ನೀಡುವುದು)

## ಖಾಸಗಿ ಆಸ್ಪತ್ರೆಗಳ ವೈದ್ಯರ ಮುಷ್ಕರ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೩೨ (೪೩೪೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಾದಾದ್ಯಂತ ವೈದ್ಯರ ಮತ್ತು ಖಾಸಗಿ ಆಸ್ಪತ್ರೆಗಳ ದಿಢೀರ್ ಮುಷ್ಕರದಿಂದ ಸೂಕ್ತ ಸಮಯದಲ್ಲಿ ಚಿಕಿತ್ಸೆ ಸಿಗದೆ ರೋಗಿಗಳು ಪರದಾಡುವಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಮುಷ್ಕರದಿಂದ ರೋಗಿಗಳ ಪರದಾಟ ತಪ್ಪಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡಿದ್ದ ಸೂಕ್ತ ಕ್ರಮಗಳೇನು ; ಈ ರೀತಿ ವೈದ್ಯರ ಹಠಾತ್ ಮುಷ್ಕರ ಪರಿಸ್ಥಿತಿ ಎದುರಾದಾಗ ಸರ್ಕಾರ ತೆಗೆದುಕೊಳ್ಳುವ ಮುಂಜಾಗ್ರತಾ ಕ್ರಮಗಳೇನು ;

(ಇ) ಸರ್ಕಾರಿ ಸೇವೆಯಲ್ಲಿರುವ ವೈದ್ಯರು ಖಾಸಗಿ ಆಸ್ಪತ್ರೆಗಳಲ್ಲಿಯೂ ಖಾಸಗಿಯಾಗಿ ವೃತ್ತಿ ನಿರ್ವಹಿಸುತ್ತಿರುವುದು ನಿಜವೇ ; ಅಂತಹವರ ವಿರುದ್ಧ ಸರ್ಕಾರವು ಏನು ಕ್ರಮ ಕೈಗೊಳ್ಳುವುದು ; (ವಿವರ ನೀಡುವುದು)

(ಈ) ಮುಷ್ಕರದಿಂದ ರೋಗಿಗಳ ಸಾವು ನೋವು ತಪ್ಪಿಸುವ ದೃಷ್ಟಿಯಿಂದ ವೈದ್ಯಕೀಯ ಸೇವೆಯನ್ನು ಎಸ್ಮಾ ಕಾನೂನಿನಡಿ ತರಲು ಸರ್ಕಾರವು ಚಿಂತಿಸುತ್ತಿದೆಯೇ ? (ವಿವರ ನೀಡುವುದು)

## ಮೆ: ಯಶಸ್ವಿನಿ ಗ್ಯಾಸ್ ಸ್ಥಳಾಂತರಿಸುವ ಬಗ್ಗೆ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೩೩ (೪೧೮೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಅನಿಲ ಗೋದಾಮುಗಳ ಸ್ಥಾಪನೆಗೆ ಇರುವ ಷರತ್ತುಗಳೇನು ; ಗೋದಾಮುಗಳ ಸ್ಥಾಪನೆಗೆ ಯಾವ ಯಾವ ಇಲಾಖೆಗಳಿಂದ ಪರವಾನಗಿಯನ್ನು ಪಡೆಯಬೇಕಾಗಿರುತ್ತದೆ ;

(ಆ) ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಜನವಸತಿ ಇರುವ ಪ್ರದೇಶದಲ್ಲಿ ಗೋದಾಮುಗಳ ಸ್ಥಾಪನೆಗೆ ನಿಯಮದಲ್ಲಿ ಅವಕಾಶವಿದೆಯೇ ;

(ಇ) ಗೋದಾಮು ಇದ್ದ ಪ್ರದೇಶದಲ್ಲಿ ವ್ಯಾಪಕವಾಗಿ ವಸತಿ ವಾಣಿಜ್ಯ ಕಟ್ಟಡ ನಿರ್ಮಿತಗೊಂಡಾಗ ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಗೋದಾಮು ಸ್ಥಳಾಂತರಿಸಲು ಅವಕಾಶವಿದೆಯೇ ;

(ಈ) ವಸತಿ ವಾಣಿಜ್ಯ ಕಟ್ಟಡಗಳು ನಿರ್ಮಿತಗೊಂಡ ಸಂದರ್ಭದಲ್ಲಿ ಸಂಭವಿಸಬಹುದಾದ ಅವಗಡಗಳನ್ನು ತಡೆಗಟ್ಟಲು ಕೈಗೊಳ್ಳಬಹುದಾದ ಮುನ್ನೆಚ್ಚರಿಕೆ ಕ್ರಮಗಳೇನು ;

(ಉ) ಜನವಸತಿ ಪ್ರದೇಶಲ್ಲಿರುವ ಬೆಂಗಳೂರಿನ ಪರಿಮಳನಗರದ (ವಾರ್ಡ್ ನಂ.೪೩), ೯ನೇ ಮುಖ್ಯರಸ್ತೆಯಲ್ಲಿರುವ ಮೆ: ಯಶಸ್ವಿನಿ ಗ್ಯಾಸ್ ಗೋದಾಮನ್ನು ದಿನಾಂಕ: ೨೦-೦೩-೨೦೧೭ರಂದು ಪಶ್ಚಿಮ ವಲಯದ ನಿರ್ದೇಶಕರು ಕೂಡಲೇ ಬೇರೆ ಕಡೆ ವರ್ಗಾಯಿಸುವುದು ಸೂಕ್ತವೆಂದು ವರದಿ ನೀಡಿರುವುದು ನಿಜವೇ ;

(ಊ) ಈ ಗೋದಾಮನ್ನು ಸ್ಥಳಾಂತರಿಸಲು ಈವರೆಗೂ ಸಂಬಂಧಪಟ್ಟವರು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಆದ್ಯವಚನಕಾರ ಶ್ರೀ ದೇವರ ದಾಸಿಮಯ್ಯನವರ ಜಯಂತಿ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೩೭೩೪ (೪೩೭೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆದ್ಯವಚನಕಾರರಾದ ಶ್ರೀ ದೇವರ ದಾಸಿಮಯ್ಯನವರ ಸರ್ಕಾರಿ ಜಯಂತಿ ಎಂದಿನಿಂದ ಪ್ರಾರಂಭವಾಯಿತು ;

(ಆ) ಆಚರಣೆಯನ್ನು ಯಾವ ರೀತಿ ಎಲ್ಲಿ, ಯಾವಾಗ ಮಾಡಲಾಗುವುದು ;

(ಇ) ಆಚರಣೆ ಮಾಡಲು ಸರ್ಕಾರವು ಹಣ ಬಿಡುಗಡೆಯನ್ನು ಯಾವ ರೀತಿ ಮಾಡಲಾಗುತ್ತದೆ ;

(ಈ) ಕಳೆದ ಎರಡು ವರ್ಷದಿಂದ ಅನೇಕ ತಾಲ್ಲೂಕು ಕಛೇರಿಗೆ ಹಣ ಬಾರದಿರಲು ಕಾರಣವೇನು ; ಎಲ್ಲೆಲ್ಲಿ ಬಂದಿರುವುದಿಲ್ಲ ವಿವರ ನೀಡುವುದು ;

(ಉ) ಹಾಗಿದ್ದಲ್ಲಿ, ಆಚರಣೆ ಮಾಡಿರುವ ನೇಕಾರ ಸಮುದಾಯಗಳಿಗೆ ಯಾವಾಗ ಹಣ ನೀಡಲಾಗುವುದು ?

## ವಿದ್ಯಾಸಿರಿ ಯೋಜನೆಯ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೩೫ (೪೧೬೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರ 'ವಿದ್ಯಾಸಿರಿ' ಯೋಜನೆಯನ್ನು ಜಾರಿಗೆ ತಂದಿರುವುದು ನಿಜವೇ ;

(ಆ) ಹಾಗಿದ್ದರೆ, ಈ ಯೋಜನೆ ಜಾರಿಗೆ ಬಂದ ದಿನದಿಂದ ಇದುವರೆವಿಗೆ ಎಷ್ಟು ವಿದ್ಯಾರ್ಥಿಗಳು ಇದರ ಲಾಭ ಪಡೆದಿದ್ದಾರೆ ; ಈ ಯೋಜನೆಗೆ ಮೀಸಲಿಟ್ಟ ಹಣ ಎಷ್ಟು ; ಖರ್ಚು ಮಾಡಿದ ಹಣ ಎಷ್ಟು ; ಬಾಕಿ ಎಷ್ಟು ? (ವರ್ಷಾವಾರು ವಿವರ ನೀಡುವುದು)

## ಡೆಂಗ್ಯೂ ಚಿಕನ್ ಗುನ್ಯ ಮತ್ತು ಎಚ್‌೧ ಎನ್‌೧ ಸೊಂಕಿನ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೩೬ (೪೧೫೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಡೆಂಗ್ಯೂ ಚಿಕನ್ ಗುನ್ಯ ಮತ್ತು ಎಚ್‌೧ ಎನ್‌೧ ಸೋಂಕಿನಿಂದ ರೋಗಿಗಳು ಸಾವನ್ನಪ್ಪುತ್ತಿರುವುದು ನಿಜವೇ ;

(ಆ) ಹಾಗಿದ್ದರೆ, ೨೦೧೩–೧೪ ರಿಂದ ೨೦೧೭–೧೮ ರವರೆಗೆ ಡೆಂಗ್ಯೂ ಚಿಕನ್ ಗುನ್ಯ ಮತ್ತು ಎಚ್‌೧ ಎನ್‌೧ ಸೋಂಕಿನಿಂದ ಸಾವನ್ನಪ್ಪಿದವರ ಸಂಖ್ಯೆ ಎಷ್ಟು ; ಸರ್ಕಾರದಿಂದ ಸಾವನ್ನಪ್ಪಿದವರ ಕುಟುಂಬಕ್ಕೆ ಪರಿಹಾರ ನೀಡಲಾಗಿದೆಯೇ ; ಎಷ್ಟು ಕುಟುಂಬಗಳಿಗೆ ಪರಿಹಾರ ಹಣ ನೀಡಲಾಗಿದೆ ; ಬಾಕಿ ಎಷ್ಟು ;

(ಇ) ಸೋಂಕನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

## ಆಶಾ ಕಾರ್ಯಕರ್ತೆಯರ ಸಮಸ್ಯೆಗಳ ಬಗ್ಗೆ

**ಶ್ರೀ ಲಹರಿ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೩೭ (೪೧೮೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಆಶಾ ಕಾರ್ಯಕರ್ತೆಯರ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದರೆ ಸಮಸ್ಯೆಗಳನ್ನು ಬಗೆಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ವಿವರ ನೀಡುವುದು ?

## ಉಚಿತ ಆಂಬುಲೆನ್ಸ್ ಸೇವೆಗಳ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೩೮ (೪೧೬೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಚಿತ ಆಂಬುಲೆನ್ಸ್ ಸೇವೆ ರೋಗಿಗಳಿಗೆ ಸಮರ್ಪಕವಾಗಿ ಸಿಗದಿರುವುದು ಮತ್ತು ಆಂಬುಲೆನ್ಸ್ ಚಾಲಕರು ರೋಗಿಗಳ ಬಳಿ ಹಣಕ್ಕೆ ಬೇಡಿಕೆ ಇಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದರೆ, ಇಂತಹ ಸಮಸ್ಯೆ ನಿವಾರಣೆಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ಉಚಿತ ಆಂಬುಲೆನ್ಸ್‌ಗಳು ಸೇವೆ ಸಲ್ಲಿಸುತ್ತಿವೆ ;

(ಈ) ನಿಷ್ಕ್ರೀಯಗೊಂಡಿರುವ ಆಂಬುಲೆನ್ಸ್‌ಗಳ ಸಂಖ್ಯೆ ಎಷ್ಟು ?

## ಮಾತೃಪುಷ್ಟಿ ಯೋಜನೆಯ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೩೯ (೪೧೬೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗರ್ಭಿಣಿಯರು ಮತ್ತು ಬಾಣಂತಿಯರು ಅಪೌಷ್ಟಿಕತೆಯಿಂದ ಬಳಲುವುದನ್ನು ತಪ್ಪಿಸಲು ಸರ್ಕಾರ ಮಾತೃಪುಷ್ಟಿ ಯೋಜನೆ ಜಾರಿಗೊಳಿಸಿರುವುದು ನಿಜವೇ ;

(ಆ) ಹಾಗಿದ್ದರೆ, ಈ ಯೋಜನೆಯ ಟೆಂಡರ್ ಪ್ರಕ್ರಿಯೆಯಲ್ಲಿ ನಿಯಮ ಉಲ್ಲಂಘನೆ ಆಗಿರುವುದು ನಿಜವೇ ;

(ಇ) ಹಾಗಿದ್ದರೆ, ಆಗಿರುವ ಉಲ್ಲಂಘನೆಯನ್ನು ಸರಿದೂಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ವಸತಿ ಶಾಲೆಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೪೦ (೪೩೪೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಗೆ ಈಗಾಗಲೇ ಮಂಜೂರಾಗಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು; (ತಾಲ್ಲೂಕು ಮತ್ತು ಹೋಬಳಿವಾರು ಮಾಹಿತಿ ನೀಡುವುದು)

(ಆ) ಈ ಮಂಜೂರಾಗಿರುವ ವಸತಿ ಶಾಲೆಗಳನ್ನು ನಿರ್ಮಾಣ ಮಾಡುವುದಕ್ಕಾಗಿ ಸರ್ಕಾರದಿಂದ ಜಮೀನನ್ನು ಮಂಜೂರು ಮಾಡಲಾಗಿದೆಯೇ;

(ಇ) ಜಮೀನು ಲಭ್ಯವಾಗದೆ ಇರುವ ವಸತಿ ಶಾಲೆಗಳೆಷ್ಟು; ಈ ವಸತಿ ಶಾಲೆಗಳಿಗೆ ಖಾಸಗಿ ಜಮೀನು ಖರೀದಿ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ?

## ವಸತಿ ಶಾಲೆಗಳ ಮೂಲಭೂತ ಸೌಕರ್ಯಗಳ ಬಗ್ಗೆ

**ಡಾ: ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೪೧ (೪೮೯೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೊಳಪಡುವ ವಿವಿಧ ವಸತಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳು ಹಾಗೂ ಬೋಧಕ/ಬೋಧಕೇತರ ಸಿಬ್ಬಂದಿಗಳ ಕೊರತೆಯಿಂದಾಗಿ ವಿದ್ಯಾರ್ಥಿ/ ವಿದ್ಯಾರ್ಥಿನಿಯರ ಶೈಕ್ಷಣಿಕ ಅಭಿವೃದ್ಧಿ ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇದರಿಂದಾಗಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಫಲಿತಾಂಶ ಗಣನೀಯವಾಗಿ ಇಳಿಮುಖವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಈ ವಸತಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಮೂಲಭೂತ ಸೌಲಭ್ಯಗಳು ಮತ್ತು ಬೋಧಕ ಸಿಬ್ಬಂದಿಗಳನ್ನು ನೇಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಸತಿ ನಿಲಯಗಳ ಬಗ್ಗೆ

**ಡಾ: ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೪೨ (೪೯೯೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ಬಾಲಕ/ಬಾಲಕಿಯರ ವಸತಿ ನಿಲಯಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ವಸತಿ ನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ/ ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು; ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ;

(ಇ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿರುವ ವಸತಿ ನಿಲಯಗಳಾವುವು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ವಸತಿ ನಿಲಯಗಳಿಗೆ ಯಾವ ಕಾಲಮಿತಿಯಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು)

## ಬಾಲಕಿಯರ ಮತ್ತು ಮಹಿಳಾ ವಸತಿ ನಿಲಯಗಳಲ್ಲಿ ಭದ್ರತೆಯ ಬಗ್ಗೆ

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೪೩ (೪೧೮೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಸಲಾಗುತ್ತಿರುವ ಬಾಲಕಿಯರ/ಮಹಿಳಾ ವಸತಿ ನಿಲಯಗಳೆಷ್ಟು;

(ಆ) ಸದರಿ ವಸತಿ ನಿಲಯಗಳಿಗೆ ಮಂಜೂರಾದ ಸಿಬ್ಬಂದಿ, ಖಾಲಿಯಿರುವ ಹುದ್ದೆ, ಹೊರಗುತ್ತಿಗೆ ಆಧಾರದ ಮೇಲೆ ನೇಮಕವಾದ ಸಿಬ್ಬಂದಿಯೆಷ್ಟು;

(ಇ) ಸದರಿ ವಸತಿ ನಿಲಯಗಳ ಪೈಕಿ ಎಷ್ಟು ವಸತಿ ನಿಲಯಗಳಲ್ಲಿ ಮಹಿಳಾ ಮೇಲ್ವಿಚಾರಕರಿದ್ದಾರೆ;

(ಈ) ಈ ಪೈಕಿ ಎಷ್ಟು ವಸತಿ ನಿಲಯಗಳಲ್ಲಿ ಸಿ.ಸಿ. ಕ್ಯಾಮರ ಅಳವಡಿಸಲಾಗಿದೆ;

(ಉ) ಅಳವಡಿಸದೇ ಇದ್ದಲ್ಲಿ, ಯಾವ ಕಾಲಮಿತಿಯಲ್ಲಿ ಅಳವಡಿಸಲಾಗುವುದು?

## ಅನ್ನಭಾಗ್ಯ ಯೋಜನೆಯ ಗೋಧಿ ಬಗ್ಗೆ

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೪೪ (೪೧೮೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನ್ನಭಾಗ್ಯ ಯೋಜನೆಯ ಗೋಧಿಯು ಗೋದಾಮಿನಲ್ಲಿಯೇ ಕೊಳೆತದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಗಮನಕ್ಕೆ ಬಂದಿದ್ದಲ್ಲಿ, ಕೊಳೆತ ಗೋಧಿಯ ವಿವರ ನೀಡುವುದು;

(ಇ) ಇದರಿಂದ ಸರ್ಕಾರದ ಬೊಕ್ಕಸಕ್ಕೆ ಆದ ನಷ್ಟವೆಷ್ಟು;

(ಈ) ಸದರಿ ಗೋಧಿಯನ್ನು ವಿತರಣೆ ಮಾಡದೆ ಅದು ಕೊಳೆಯಲು ಕಾರಣಗಳೇನು?

## ಅಂಗನವಾಡಿ ಕೇಂದ್ರಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೪೫ (೪೩೪೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳೆಷ್ಟು;

(ಆ) ಈ ಪೈಕಿ ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳೆಷ್ಟು;

(ಇ) ಉಳಿದ ಎಷ್ಟು ಅಂಗನವಾಡಿ ಕೇಂದ್ರಗಳಿಗೆ ನಿವೇಶನ ಲಭ್ಯವಿದೆ;

(ಈ) ಲಭ್ಯವಿರುವ ನಿವೇಶನಗಳಲ್ಲಿ ಅಂಗನವಾಡಿ ಕಟ್ಟಡಗಳ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ಯಾವಾಗ? (ಗ್ರಾಮವಾರು ಪೂರ್ಣ ವಿವರ ನೀಡುವುದು)

## ಕೊಳವೆ ಬಾವಿಗಳ ಫಲಾನುಭವಿಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೪೬ (೪೩೪೩) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿ ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಗಂಗಾಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆ ಬಾವಿಗೆ ಇಲ್ಲಿಯವರೆಗೆ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಆ) ಈ ಫಲಾನುಭವಿಗಳನ್ನು ಆಯ್ಕೆ ಮಾಡುವಲ್ಲಿ ಸರ್ಕಾರದ ಮಾನದಂಡಗಳೇನು;

(ಇ) ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಭಾರಿ ಅವ್ಯವಹಾರ ಮಾಡಲಾಗಿದೆ ಎಂಬ ಗಂಭೀರ ಆರೋಪ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಈ ಅಧಿಕಾರಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆಯೇ;

## ವೈದ್ಯಕೀಯ ಹುದ್ದೆಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೪೭ (೪೩೪೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಜಿಲ್ಲೆಯಲ್ಲಿ ಆರೋಗ್ಯ ಇಲಾಖೆಯಡಿಯಲ್ಲಿ ಮಂಜೂರಾದ ವೈದ್ಯಕೀಯ ಮತ್ತು ವೈದ್ಯಕೇತರ ಹುದ್ದೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಂಜೂರಾದ ಹುದ್ದೆಗಳಲ್ಲಿ ಭರ್ತಿಯಾದ ಹಾಗೂ ಖಾಲಿ ಇರುವ ಹುದ್ದೆಗಳು ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳಿಗೆ ಪರ್ಯಾಯವಾಗಿ ಯಾವ ವ್ಯವಸ್ಥೆ ಕಲ್ಪಿಸಲಾಗಿದೆ;

(ಈ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) ಈ ಹುದ್ದೆಗಳನ್ನು ಸರ್ಕಾರವು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲು ಕ್ರಮ ಕೈಗೊಳ್ಳುವುದು?

## ಡೆಂಗ್ಯೂ ಜ್ವರ ನಿಯಂತ್ರಣದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೪೮ (೪೧೭೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಡೆಂಗ್ಯೂ ಜ್ವರ ಪ್ರಕರಣಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಪ್ರಕರಣಗಳ ಕುರಿತು ತಾಲ್ಲೂಕುವಾರು ಮಾಹಿತಿ ನೀಡುವುದು;

(ಆ) ರಾಜ್ಯ ಸರ್ಕಾರವು ಮೇಲ್ಕಂಡ ಜಿಲ್ಲೆಗಳಲ್ಲಿ ಡೆಂಗ್ಯೂ ಜ್ವರ ನಿಯಂತ್ರಣ ಮಾಡಲು ಗುತ್ತಿಗೆ ಆಧಾರದ ಮೇಲೆ "ನಗರ ಆರೋಗ್ಯ ಸ್ವಯಂ ಸೇವಕರು–ಪುರುಷ" ರನ್ನು ೩ ತಿಂಗಳ ಅವಧಿಗೆ ನೇಮಕ ಮಾಡಿದ್ದು, ಸದರಿಯವರ ಸೇವೆಯನ್ನು ಮುಂದುವರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ವಿವರ ನೀಡುವುದು?

## ಆರೋಗ್ಯ ಭದ್ರತಾ ಯೋಜನೆಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೪೯ (೪೨೨೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಾಜಪೇಯಿ ಆರೋಗ್ಯ ಶ್ರೀ ಆರೋಗ್ಯ ಭಾಗ್ಯ ಹಾಗೂ ಇನ್ನು ಇತರೆ ಹಲವಾರು ಆರೋಗ್ಯ ಭದ್ರತಾ ಯೋಜನೆಗಳು ಜಾರಿಯಲ್ಲಿರುವುದು ನಿಜವೇ;

(ಆ) ಹಾಗಿದ್ದರೆ, ಅಂತಹ ಆರೋಗ್ಯ ಭದ್ರತಾ ಯೋಜನೆಗಳು ಯಾವುವು; (ವಿವರ ನೀಡುವುದು)

(ಇ) ಇಂತಹ ಯೋಜನೆಗಳ ಅನುಷ್ಠಾನಕ್ಕೆ ಸರ್ಕಾರ ಖಾಸಗಿ ಆಸ್ಪತ್ರೆಗಳೊಂದಿಗೆ ಒಪ್ಪಂದ ಮಾಡಿಕೊಂಡಿರುವುದು ನಿಜವೇ;

(ಈ) ಹಾಗಾದರೆ, ಖಾಸಗಿ ಆಸ್ಪತ್ರೆಗಳಿಗೆ ಇಂತಹ ಯೋಜನೆಗಳ ಹಣವನ್ನು ಪಾವತಿಸದೇ ಬಾಕಿ ಉಳಿಸಿಕೊಂಡಿರುವುದು ನಿಜವೇ;

(ಉ) ಹಾಗಾದರೆ, ಎಷ್ಟು ಹಣ ಬಾಕಿ ಉಳಿದಿದೆ ಸರ್ಕಾರದಿಂದ ಖಾಸಗಿ ಆಸ್ಪತ್ರೆಗಳಿಗೆ ಹಣ ಪಾವತಿಸದೇ ಇರುವುದರಿಂದ ಖಾಸಗಿ ಆಸ್ಪತ್ರೆಗಳು ಯೋಜನೆಗಳನ್ನು ಕೈಬಿಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇಂತಹ ಸಮಸ್ಯೆಗಳನ್ನು ನಿವಾರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮ ಏನು?

## ದೇವರಾಜು ಅರಸು ಅಭಿವೃದ್ಧಿ ನಿಗಮದಿಂದ ಹಿಂದುಳಿದ ವರ್ಗಗಳ ಅಭಿವೃದ್ಧಿಯ ಬಗ್ಗೆ

**ಶ್ರೀ ಬಿ.ಜೆ ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೫೦ (೪೨೦೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದೇವರಾಜ ಅರಸು ಅಭಿವೃದ್ಧಿ ನಿಗಮದಿಂದ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಸರ್ಕಾರ ನಿಯೋಜಿಸಿರುವ ಯೋಜನೆಗಳು ಯಾವುವು? (ಪೂರ್ಣ ವಿವರ ನೀಡುವುದು)

(ಆ) ಆ ಯೋಜನೆಗಳಿಗೆ ಕಳೆದ ೪ ವರ್ಷಗಳಲ್ಲಿ ಆಯವ್ಯಯದಲ್ಲಿ ಮೀಸಲಿಟ್ಟ ಹಣ ಎಷ್ಟು ; ಬಿಡುಗಡೆ ಮಾಡಿದ ಹಣ ಎಷ್ಟು; ಭೌತಿಕವಾಗಿ ಖರ್ಚು ಮಾಡಿದ ಹಣ ಎಷ್ಟು; ಫಲಾನುಭವಿಗಳ ಸಂಖ್ಯೆ ಎಷ್ಟು ? (ವರ್ಷಾವಾರು, ಯೋಜನಾವಾರು ಅಂಕಿ ಅಂಶ ನೀಡುವುದು)

## ಭಾಗ್ಯಲಕ್ಷ್ಮೀ ಯೋಜನೆ ಬಗ್ಗೆ

**ಶ್ರೀ ಬಿ.ಜೆ ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೫೧(೪೨೦೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಕಲ್ಯಾಣ ಇಲಾಖೆಯಲ್ಲಿ ಭಾಗ್ಯಲಕ್ಷ್ಮೀ ಯೋಜನೆ ಜಾರಿಯಲ್ಲಿರುವುದು ನಿಜವೇ ;

(ಆ) ಹಾಗಿದ್ದರೆ, ಯೋಜನೆ ಪ್ರಾರಂಭವಾದ ದಿನದಿಂದ ಇದುವರೆವಿಗೆ ಈ ಯೋಜನೆಗೆ ಸರ್ಕಾರ ವಿತರಿಸಿದ ಬಾಂಡ್‌ಗಳ ಸಂಖ್ಯೆ (ಫಲಾನುಭವಿಗಳ) ಎಷ್ಟು? (ವರ್ಷಾವಾರು ಪೂರ್ಣ ವಿವರವನ್ನು ಒದಗಿಸುವುದು)

## ಮಹಿಳಾ ಮತ್ತು ಮಕ್ಕಳ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣದ ಬಗ್ಗೆ

**ಶ್ರೀ ಬಿ.ಜೆ ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೫೨(೪೨೧೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರ ಮಹಿಳಾ ಮತ್ತು ಮಕ್ಕಳ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಯೋಜನೆಗಳನ್ನು ರೂಪಿಸಿರುವುದು ನಿಜವೇ ;

(ಆ) ಹಾಗಿದ್ದರೆ, ಆ ಯೋಜನೆಗಳು ಯಾವುವು ; ಯೋಜನೆಗಳಿಗೆ ೨೦೧೩-೧೪ ರಿಂದ ೨೦೧೭-೧೮ರವರೆಗೆ ಆಯವ್ಯಯದಲ್ಲಿ ನಿಗಧಿಪಡಿಸಿದ ಹಣದ ಮೊತ್ತ ಎಷ್ಟು ; ಖರ್ಚು ಮಾಡಿರುವ ಹಣದ ಮೊತ್ತ ಎಷ್ಟು ? (ಯೋಜನೆವಾರು ಮತ್ತು ವರ್ಷಾವಾರು ವಿವರ ನೀಡುವುದು)

## ಎಂಡೋಸಲ್ಫಾನ್ ಪೀಡಿತ ವಿಕಲಚೇತನರ ಇಲಾಖೆಯಿಂದ ದೊರಕುವ ಸವಲತ್ತುಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೭೫೩ (೪೩೭೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇಲಾಖೆಯಿಂದ ಗುರುತಿಸಲಾದ ಎಂಡೋಸಲ್ಫಾನ್ ಪೀಡಿತ ವಿಕಲಚೇತನರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಎಂಡೋಸಲ್ಫಾನ್ ಪೀಡಿತ ವಿಕಲಚೇತನರಿಗೆ ಇಲಾಖೆಯಿಂದ ಒದಗಿರುವ ಸೌಲಭ್ಯಗಳು ಯಾವುವು ; ಇವರ ಪುನರ್‌ವಸತಿಯ ಬಗ್ಗೆ ಇಲಾಖೆಯಿಂದ ಕೈಗೊಂಡ ಕಾರ್ಯಕ್ರಮಗಳು ಯಾವುವು;

(ಇ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಸರ್ಕಾರಿ ಮತ್ತು ಖಾಸಗಿ ಪುನರ್ ವಸತಿ ಕೇಂದ್ರಗಳು ಯಾವುವು ; ಖಾಸಗಿ ಪುನರ್ ವಸತಿ ಕೇಂದ್ರಕ್ಕೆ ಸರ್ಕಾರದಿಂದ ಒದಗಿಸುವ ಸೌಲಭ್ಯಗಳು ಯಾವುವು ; ಈ ಬಗ್ಗೆ ಸುತ್ತೋಲೆಯನ್ನು ಹೊರಡಿಸಿದ್ದರೆ ಪ್ರತಿಯನ್ನು ಒದಗಿಸುವುದು ;

(ಈ) ಎಂಡೋಸಲ್ಫಾನ್ ಪೀಡಿತ ವಿಕಲಚೇತನರು ಮತ್ತು ಅವರ ಪೋಷಕರಿಗೆ ವೈದ್ಯಕೀಯ ಚಿಕಿತ್ಸೆಯ ಪ್ರಯಾಣ ಭತ್ಯೆ ನೀಡುವ ಉದ್ದೇಶ ಸರ್ಕಾರದ ಮುಂದಿದೆಯೇ ?

## ಪಡಿತರ ಚೀಟಿಯ ಮಂಜೂರಾತಿಯ ಹಂತವಾರು ಮಾಹಿತಿ ಮತ್ತು ಪಡಿತರ ವಿತರಣೆಯಲ್ಲಿನ ಸಮಸ್ಯೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೫೪ (೪೩೭೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯತಿಯಲ್ಲಿ ಪಡಿತರ ಚೀಟಿಗಾಗಿ ಅರ್ಜಿಯನ್ನು ಸಲ್ಲಿಸಿದ ನಂತರ ಅರ್ಜಿದಾರರಿಗಾಗಲೀ ಅಥವಾ ಗ್ರಾಮ ಪಂಚಾಯತಿಗಾಗಲೀ ಪಡಿತರ ಚೀಟಿಯ ಪರಿಶೀಲನಾ ಹಂತದ ಸ್ಥಿತಿಯ ಮಾಹಿತಿಯು ಇಲ್ಲದಿರುವುದರಿಂದ ಪದೆ ಪದೇ ಅರ್ಜಿದಾರರು ಗ್ರಾಮ ಪಂಚಾಯತಿಯನ್ನು ಸಂಪರ್ಕಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಗ್ರಾಮ ಪಂಚಾಯತಿಯಲ್ಲಿ ಆನ್‌ಲೈನ್ ವ್ಯವಸ್ಥೆಯಿದ್ದರೂ ಇಲಾಖೆಯಿಂದ ಮಾಹಿತಿಯನ್ನು

ರವಾನಿಸದೇ ಇರುವುದರಿಂದ ಸ್ಥಳೀಯ ಜನಪ್ರತಿನಿದಿಗಳು ಮುಜುಗರದ ಸನ್ನಿವೇಶ ಎದುರಿಸುತ್ತಿರುವುದನ್ನು ತಪ್ಪಿಸಲು ಸರ್ಕಾರದ ಕ್ರಮವೇನು ;

(ಆ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ೩ ತಿಂಗಳಲ್ಲಿ ನ್ಯಾಯಬೆಲೆ ಅಂಗಡಿಗೆ ಪೂರೈಕೆಯಾದ ಪಡಿತರ ಪ್ರಮಾಣವೆಷ್ಟು; ಬಯೋಮೆಟ್ರಿಕ್ ಸಮಸ್ಯೆ ನೆಟ್‌ವರ್ಕ್ ಸಮಸ್ಯೆ ಸರ್ವರ್ ಸಮಸ್ಯೆಯಿಂದ ಪಡಿತರ ಚೀಟಿದಾರರು ಪದೇ ಪದೇ ನ್ಯಾಯಬೆಲೆ ಅಂಗಡಿಗೆ ಭೇಟಿ ನೀಡುತ್ತಿರುವುದು ನಿಜವೇ ; ಈ ರೀತಿ ಪಡಿತರ ಪಡೆಯಲು ಸಾಧ್ಯವಾಗದೇ ಹಿಂದಿರುಗಿದ ಪಡಿತರ ಪ್ರಮಾಣವೆಷ್ಟು ?

## ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನಡಿಯ ಯೋಜನೆಗಳು ಮತ್ತು ಸವಲತ್ತುಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೫೫(೪೩೭೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸುವರ್ಣ ಆರೋಗ್ಯ ಟ್ರಸ್ಟ್‌ನಿಂದ ನೀಡಲಾಗುತ್ತಿರುವ ಯೋಜನೆಗಳು ಯಾವುವು ; ಈ ಯೋಜನೆಯ ಪ್ರಯೋಜನ ಪಡೆಯಲು ಅಗತ್ಯವಾದ ಅರ್ಹತೆಗಳು ಯಾವುವು ; ಟ್ರಸ್ಟ್‌ನಿಂದ ನೀಡಲಾಗುವ ಸವಲತ್ತುಗಳು ಯಾವುವು ;

(ಆ) ಕೆಲವೊಂದು ಆಸ್ಪತ್ರೆಗಳು ಈ ಟ್ರಸ್ಟ್‌ನಡಿ ನೋಂದಾಯಿಸಿಕೊಂಡಿದ್ದರೂ ನಾಗರಿಕರಿಗೆ ವೈದ್ಯಕೀಯ ಸೇವೆಯನ್ನು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ದಾಖಲಾದ ದೂರುಗಳು ಎಷ್ಟು ; ಈ ಆಸ್ಪತ್ರೆಗಳ ಮೇಲೆ ಇಲಾಖೆಯಿಂದ ಕೈಗೊಂಡ ಕ್ರಮಗಳಾವುವು?

## ಅಂಗನವಾಡಿಗಳಿಗೆ ಮೂಲಭೂತ ಸೌಕರ್ಯ ಮತ್ತು ಸಿಬ್ಬಂದಿಯವರಿಗೆ ವೈದ್ಯಕೀಯ ಮರುಪಾವತಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೫೬ (೪೩೭೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ; ಮೂಲಭೂತ ಸೌಕರ್ಯವಾದ ಕುಡಿಯುವ ನೀರು ಮತ್ತು ಶೌಚಾಲಯ, ವಿದ್ಯುತ್ ಸಂಪರ್ಕ ಹೊಂದಿರದ ಅಂಗನವಾಡಿಗಳ ಸಂಖ್ಯೆ ಎಷ್ಟು ; ಈ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡ ನಿವೇಶನ, ಮೂಲಸೌಕರ್ಯ ಒದಗಿಸುವ ಬಗ್ಗೆ ಸರ್ಕಾರದ ಕ್ರಮವೇನು ;

(ಆ) ಅಂಗನವಾಡಿ ಸಿಬ್ಬಂದಿಗಳ ವೈದ್ಯಕೀಯ ವೆಚ್ಚದ ಮರುಪಾವತಿಗೆ ಸರ್ಕಾರದಿಂದ ಅವಕಾಶ ಕಲ್ಪಿಸಲಾಗಿದೆಯೇ ; ಹೌದಾದಲ್ಲಿ, ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ೩ ವರ್ಷದಲ್ಲಿ ಸಲ್ಲಿಸಿದ ಮತ್ತು ಬಾಕಿಯಿರುವ ಪ್ರಸ್ತಾವನೆ ಸಂಖ್ಯೆ ಎಷ್ಟು ;

(ಇ) ಅಂಗನವಾಡಿ ಸಿಬ್ಬಂದಿಯವರು ಸೇವೆಯಲ್ಲಿರುವಾಗ ಆಕಸ್ಮಿಕ ಮರಣ ಹೊಂದಿದಾಗ ನೀಡಲಾಗುವ ಪರಿಹಾರ ಸೌಲಭ್ಯಗಳು ಯಾವುವು ; ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ೩ ವರ್ಷದಲ್ಲಿ ಸಲ್ಲಿಸಿದ ಮತ್ತು ಬಾಕಿಯಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು ?

## ಹವಾಮಾನ ಮತ್ತು ಮಳೆಮಾಪನ ಕೇಂದ್ರಗಳ ನಿರ್ವಹಣೆ ಮತ್ತು ಸುರಕ್ಷತೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೫೭ (೪೩೬೮) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿ ಸ್ಥಾಪಿಸಲಾದ ಮಳೆಮಾಪನ ಮತ್ತು ಹವಾಮಾನ ವರದಿಯ ಕೇಂದ್ರಗಳ ಸಂಖ್ಯೆ ಎಷ್ಟು ; ಇವುಗಳ ಸ್ಥಾಪನೆಗೆ ಅಂದು ತಗುಲಿದ ಅಂದಾಜು ವೆಚ್ಚವೆಷ್ಟು ; ಇವುಗಳ ನಿರ್ವಹಣೆಗೆ ಕಳೆದ ೩ ವರ್ಷದಲ್ಲಿ ತಗುಲಿದ ವೆಚ್ಚವೆಷ್ಟು ; (ತಾಲ್ಲೂಕುವಾರು, ವರ್ಷಾವಾರು ಮಾಹಿತಿ ನೀಡುವುದು)

(ಆ) ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ಸ್ಥಾಪಿಸಲಾದ ಈ ಕೇಂದ್ರಗಳು ನಿರ್ವಹಣೆಗೆ ಮತ್ತು ಸುರಕ್ಷತೆಯ ಕೊರತೆಯಿಂದ ಕಳ್ಳಕಾಕರ ವಶವಾಗಿರುವುದು ನಿಜವೇ ; ಇವುಗಳ ನಿರ್ವಹಣೆ ಮತ್ತು ಸುರಕ್ಷತೆಯ ಬಗ್ಗೆ ಸರ್ಕಾರದ ಕ್ರಮವೇನು ;

(ಇ) ಸ್ಥಳೀಯ ರೈತರಿಗೆ ಮತ್ತು ಸ್ಥಳೀಯ ಸಂಸ್ಥೆಗಳ ಚುನಾಯಿತ ಜನಪ್ರತಿನಿಧಿಗಳಿಗೆ ಹವಾಮಾನ ಮತ್ತು ಮಳೆಯ ಕುರಿತು ಮಾಹಿತಿ ರವಾನೆಗೆ ಇಲಾಖೆಯಿಂದ ಕ್ರಮವಹಿಸಲಾಗಿದೆಯೇ ; ಮಳೆಯಾಧಾರಿತ ಕೃಷಿ ಪದ್ಧತಿಯಲ್ಲಿ ಇವರಿಂದ ರೈತರಿಗೆ ಉಪಯೋಗವಾಗುವುದನ್ನು ಸರ್ಕಾರವು ಗಮನಿಸಿದೆಯೇ ; ಈ ಬಗ್ಗೆ ಸರ್ಕಾರದ ಕ್ರಮವೇನು ?

## ವಿಸ್ತರಣಾಧಿಕಾರಿ ಹುದ್ದೆಗೆ ನೇಮಕಾತಿ ಮಾರ್ಗಸೂಚಿ ಉಲ್ಲಂಘಿಸಿರುವ ಬಗ್ಗೆ

**ಶ್ರೀ ಪ್ರಾಣೇಶ್ ಎಂ. ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೭೫೮ (೪೧೬೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕು ಹಿಂದುಳಿದ ವರ್ಗಗಳ ವಿಸ್ತರಣಾಧಿಕಾರಿ (ವೇತನ ಶ್ರೇಣಿ ೨೦೦೦೦–೩೬೭೦೦) ಹುದ್ದೆಗೆ ವೃಂದ ಮತ್ತು ನೇಮಕಾತಿ ಮಾರ್ಗಸೂಚಿ ಉಲ್ಲಂಘಿಸಿ ನಿಲಯ ಮೇಲ್ವಿಚಾರಕರನ್ನು (ವೇತನ ಶ್ರೇಣಿ ೧೪೫೫೦–೨೬೭೫೦) ನಿಯೋಜನೆ ಮೇಲೆ ನೇಮಕ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿಸ್ತರಣಾಧಿಕಾರಿಗಳ ಹುದ್ದೆಗಳಿಗೆ ನಿಯಮಾನುಸಾರ ಮುಂಬಡ್ತಿ ಮೂಲಕ ಯಾರನ್ನು ನೇಮಕ ಮಾಡಬೇಕು ;

(ಇ) ಹಾಗಿದ್ದಲ್ಲಿ, ಹಿಂದುಳಿದ ವರ್ಗಗಳ ವಿಸ್ತರಣಾಧಿಕಾರಿ ಹುದ್ದೆಗಳನ್ನು ಹಿರಿಯ ನಿಲಯ ಪಾಲಕರಿಗೆ ಜೇಷ್ಠತಾ ಪಟ್ಟಿಯಂತೆ ಪ್ರಭಾರ ವ್ಯವಸ್ಥೆ/ನಿಯೋಜನೆ ಮಾಡಬೇಕಾಗಿದ್ದು, ಇವರನ್ನು ಬಿಟ್ಟು ಕಡಿಮೆ ಅನುಭವವುಳ್ಳ ನಿಲಯ ಮೇಲ್ವಿಚಾರಕರನ್ನು ನೇಮಕಗೊಳಿಸಿ ಇವರಿಗೆ ಡ್ರಾಯಿಂಗ್ ಪವರ್ ಕೂಡ ನೀಡಲು ಕಾರಣಗಳೇನು;

(ಈ) ಸದರಿ ಹುದ್ದೆಗೆ ಪ್ರಭಾರ/ ನಿಯೋಜನೆ ಮೂಲಕ ನೇಮಕವಾಗಿರುವ ನಿಲಯ ಮೇಲ್ವಿಚಾರಕರ ವಿವರ ಹಾಗೂ ಇವರುಗಳ ಮೂಲ ಹುದ್ದೆಯ ಅನುಭವದ ವಿವರ ನೀಡುವುದು;

(ಉ) ಈ ಹುದ್ದೆಗಳು ಖಾಲಿ ಇದ್ದಲ್ಲಿ ಇವುಗಳನ್ನು ನಿಯಮಾನುಸಾರ ಜೇಷ್ಠತೆಗನುಗುಣವಾಗಿ ಮುಂಬಡ್ತಿ ಮೂಲಕ ಭರ್ತಿ ಮಾಡಲು ಏನು ಕ್ರಮ ವಹಿಸಲಾಗಿದೆ ;

(ಊ) ಈ ವಿಸ್ತರಣಾಧಿಕಾರಿ ಹುದ್ದೆಗೆ ನೇಮಿಸಿರುವ ಕಡಿಮೆ ವೇತನ ಶ್ರೇಣಿವುಳ್ಳ ನಿಲಯ ಮೇಲ್ವಿಚಾರಕರನ್ನು ಯಾವಾಗ ಮೂಲ ಹುದ್ದೆಗಳಿಗೆ ಹಿಂತಿರುಗಿಸಲಾಗುವುದು ?

## ಮಾತೃಪೂರ್ಣ ಯೋಜನೆಯ ಕುರಿತು

**ಶ್ರೀ ಪ್ರಾಣೇಶ್ ಎಂ. ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೫೯ (೪೩೫೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಈವರೆಗೂ ಎಷ್ಟು ಜನರಿಗೆ ಈ ಯೋಜನೆ ಉಪಯೋಗವಾಗಿದೆ ; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಮಾತೃಪೂರ್ಣ ಯೋಜನೆಗೆ ಕೇಂದ್ರ ಸರ್ಕಾರದ ಮತ್ತು ರಾಜ್ಯ ಸರ್ಕಾರದ ಅನುದಾನವೆಷ್ಟು ; ಚಿಕ್ಕಮಗಳೂರು ಜಿಲ್ಲೆಗೆ ಬಿಡುಗಡೆಯಾದ ಅನುದಾನವೆಷ್ಟು ;

(ಇ) ಮಾತೃಪೂರ್ಣ ಯೋಜನೆಯ ಟೆಂಡರ್ ನೀಡಿಕೆಯಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ಇಲಾಖೆಗೆ ದೂರು ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ವಸತಿ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿ ಬಗ್ಗೆ

**ಶ್ರೀ ಪುಟ್ಟಣ (ಶಿಕ್ಷಕರ ಕ್ಷೇತ್ರ) :–**

೩೭೬೦ (೪೧೮೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಮಾಜ ಕಲ್ಯಾಣ ಇಲಾಖೆಯ ವಸತಿ ಶಿಕ್ಷಣ ಸಂಸ್ಥೆಯ ಆಶ್ರಯದಲ್ಲಿ ನಡೆಯುತ್ತಿರುವ ನವೋದಯ ಶಾಲೆ, ಮುರಾರ್ಜಿ ವಸತಿ ಶಾಲೆ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹೆಸರು ವಿಳಾಸಗಳೊಡನೆ ಮಾಹಿತಿ ನೀಡುವುದು)

(ಆ) ಸದರಿ ಶಾಲೆಗಳಿಗೆ ಮಂಜೂರಾಗಿರುವ ಬೋಧಕ/ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ; (ವರ್ಗವಾರು ಮಾಹಿತಿ ನೀಡುವುದು)

(ಇ) ಇದುವರೆವಿಗೂ ಸದರಿ ಹುದ್ದೆಗಳಲ್ಲಿ ನೇಮಕಗೊಂಡಿರುವ ಬೋಧಕ/ ಬೋಧಕೇತರರ ಸಂಖ್ಯೆ ಎಷ್ಟು ; (ವಿವರಗಳೊಡನೆ)

(ಈ) ಉಳಿದ ಖಾಲಿ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು ?

## ವೈದ್ಯಕೀಯ ಶಿಕ್ಷಣ ಇಲಾಖೆಯಡಿಯಲ್ಲಿ ನಡೆಯುತ್ತಿರುವ ಕಾಲೇಜು ಮತ್ತು ಆಸ್ಪತ್ರೆಗಳ ಬಗ್ಗೆ

**ಶ್ರೀ ಪುಟ್ಟಣ (ಶಿಕ್ಷಕರ ಕ್ಷೇತ್ರ) :–**

೩೭೬೧ (೪೩೨೦) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವೈದ್ಯಕೀಯ ಶಿಕ್ಷಣ ಇಲಾಖೆಯಡಿಯಲ್ಲಿ ರಾಜ್ಯದಲ್ಲಿ ನಡೆಯುತ್ತಿರುವ ಸರ್ಕಾರಿ ವೈದ್ಯಕೀಯ ಕಾಲೇಜುಗಳು ಹಾಗೂ ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಸದರಿ ಆಸ್ಪತ್ರೆಗಳಲ್ಲಿ ಕಳೆದ ೫ ವರ್ಷಗಳಿಂದ ಕೈಗೊಂಡಿರುವ ಹೊಸ ಯೋಜನೆಗಳೇನು ; (ವಿವರ ನೀಡುವುದು)

(ಇ) ಈ ಕಾಲೇಜುಗಳು ಮತ್ತು ಆಸ್ಪತ್ರೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಬೋಧಕೇತರರ ಸಂಖ್ಯೆ ಎಷ್ಟು ; (ವಿಭಾಗವಾರು ವಿವರ ನೀಡುವುದು)

(ಈ) ಸದರಿ ಕಾಲೇಜು ಮತ್ತು ಆಸ್ಪತ್ರೆಗಳಲ್ಲಿ ಖಾಲಿ ಇರುವ ಹುದ್ದೆಗಳಿಂದ ರೋಗಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ? (ವಿವರ ನೀಡುವುದು)

## ಥಂಬಿಂಗ್ ಮಾಡಲು ಹಣ ಪಡೆಯುತ್ತಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೬೨ (೪೨೨೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಪಡಿತರ ಅಂಗಡಿಗಳಲ್ಲಿ ಫಲಾನುಭವಿಗಳಿಂದ ಥಂಬಿಂಗ್ ಮಾಡಲು ಹಣ ಪಡೆಯುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಈವರೆಗೆ ಕೈಗೊಂಡಿರುವ ಕ್ರಮಗಳೇನು ;

(ಆ) ಬೀದರ್ ಜಿಲ್ಲೆಯಲ್ಲಿ ಈವರೆಗೆ ಇಂತಹ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ ; ಬಂದಿದ್ದಲ್ಲಿ, ಪಡಿತರ ಅಂಗಡಿವಾರು ಸಂಪೂರ್ಣ ವಿವರ ನೀಡುವುದು ;

(ಇ) ಇದರಲ್ಲಿ ಅಂಗಡಿ ಮಾಲೀಕರು ಇಲಾಖಾ ಅಧಿಕಾರಿಗಳೊಂದಿಗೆ ಶಾಮೀಲಾಗಿರುವುದು ನಿಜವಲ್ಲವೇ ;

(ಈ) ಬಂದಿದ್ದಲ್ಲಿ, ಫಲಾನುಭವಿಗಳಿಂದ ಪಡೆದ ಹಣವನ್ನು ಹಿಂತಿರುಗಿಸಲು ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಪ್ರವಾಸಿ ತಾಣಗಳ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೬೩ (೪೨೧೩) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೦೩ ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ನೀಡಿರುವ ಅನುದಾನದ ಮೊತ್ತ ಎಷ್ಟು ; (ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಎಷ್ಟು ಯಾತ್ರಿ ನಿವಾಸ ಮತ್ತು ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸಲಾಗಿದೆ ; ಅವು ಯಾವುವು ; ಅಭಿವೃದ್ಧಿಪಡಿಸಿದಲ್ಲಿ, ಅವುಗಳಿಗೆ ತಗುಲಿದ ಮೊತ್ತ ಎಷ್ಟು ; (ಸಂಪೂರ್ಣ ವಿವರ ಒದಗಿಸುವುದು)

(ಇ) ಬೀದರ್ ಎಲ್ಲಾ ಕ್ಷೇತ್ರಗಳಲ್ಲಿ ಇರುವ ಪ್ರವಾಸಿ–ಯಾತ್ರ ನಿವಾಸಗಳನ್ನು ಅಭಿವೃದ್ಧಿಪಡಿಸದೇ ಇರಲು ಕಾರಣಗಳೇನು ? (ಮಾಹಿತಿ ನೀಡುವುದು)

## ಬೀದರ್ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ನಡೆದಿರುವ ಅವ್ಯವಹಾರದ/ಹಗರಣ ಕುರಿತು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೬೪ (೪೨೧೫) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಇಂದಿನ ಮತ್ತು ಹಿಂದಿನ ನಿರ್ದೇಶಕರು/ಸಿಬ್ಬಂದಿಗಳು ಮಾಡಿದರೆನ್ನಲಾದ ಹಗರಣ ಹಾಗೂ ಅವ್ಯವಹಾರಗಳ ಬಗ್ಗೆ ತನಿಖೆಗೆ ಆದೇಶಿಸಿರುವುದು ನಿಜವೇ ; (ಆದೇಶದ ಎಲ್ಲಾ ಪ್ರತಿ ಒದಗಿಸುವುದು)

(ಆ) ತನಿಖಾ ವರದಿಯಲ್ಲಿ ಅನೇಕ ಆರೋಪಗಳು ಸಾಬೀತಾದರೂ ನಿರ್ದೇಶಕರು ಮತ್ತು ಸಿಬ್ಬಂದಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ಸ್ಪಷ್ಟ ಮಾಹಿತಿ ಒದಗಿಸುವುದು)

(ಇ) ಇಷ್ಟೆಲ್ಲಾ ಆರೋಪಗಳು ಸಾಬೀತಾದರೂ ನಿರ್ದೇಶಕರನ್ನು ಮತ್ತು ಸಿಬ್ಬಂದಿಗಳನ್ನು ಇನ್ನೂ ಇದೇ ಸಂಸ್ಥೆಯಲ್ಲಿ/ಸ್ಥಳದಲ್ಲಿ ಮುಂದುವರೆಸಲು ಕಾರಣವೇನು ; ಇಂತಹ ಸಿಬ್ಬಂದಿಗಳನ್ನು ಎಷ್ಟು ದಿನಗಳ ಕಾಲಮಿತಿಯೊಳಗೆ ಅವರ ಮಾತೃ ಇಲಾಖೆಗೆ ವರ್ಗಾಯಿಸಲಾಗುವುದು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಬಿ.ಪಿ.ಎಲ್. ಕಾರ್ಡ್ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೩೭೬೫ (೪೨೧೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ತಾಲ್ಲೂಕುವಾರು ಬಿ.ಪಿ.ಎಲ್. ಕಾರ್ಡ್ ಕೋರಿ ಬಂದ ಅರ್ಜಿಗಳು ಎಷ್ಟು ;

(ಆ) ಹಾಗಿದ್ದಲ್ಲಿ, ಇದುವರೆಗೆ ವಿತರಿಸಿದ ಬಿ.ಪಿ.ಎಲ್ ಕಾರ್ಡ್‌ಗಳ ಸಂಖ್ಯೆ ಎಷ್ಟು ; (ಮಾಹಿತಿ ಸಂಖ್ಯೆಗಳೊಂದಿಗೆ ನೀಡುವುದು)

(ಇ) ಇನ್ನೂ ವಿಚಾರಣೆಗೆ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಒಳಗೆ ಅವರಿಗೆ ಕಾರ್ಡ್ ನೀಡಲಾಗುವ ವ್ಯವಸ್ಥೆ ಮಾಡಲಾಗುವುದು ?

## ವೈದ್ಯರುಗಳ ಬೇಡಿಕೆ

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ):–**

೩೭೬೬ (೪೩೦೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕ ೨೦೧೭ರ ವಿರುದ್ಧ ಖಾಸಗಿ ವೈದ್ಯರುಗಳು ವಿರೋಧ ವ್ಯಕ್ತಪಡಿಸಿರುವುದು ನಿಜವೇ ;

(ಆ) ನಿಜವಾಗಿದ್ದಲ್ಲಿ, ಅವರು ತಮ್ಮ ಆಗ್ರಹ ಮತ್ತು ಬೇಡಿಕೆಯ ಪಟ್ಟಿಯಲ್ಲಿ ಯಾವ ಪ್ರಮುಖ ಅಂಶಗಳನ್ನು ಉಲ್ಲೇಖ ಮಾಡಿರುತ್ತಾರೆ ;

(ಇ) ಈಗ ಮಾಡಿರುವ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕ ೨೦೧೭ಕ್ಕೂ ನಿವೃತ್ತ ಮುಖ್ಯ ನ್ಯಾಯಮೂರ್ತಿ ವಿಕ್ರಂಜಿತ್ ಸೇನ್ ರವರ ಸಮಿತಿಯ ಶಿಫಾರಸ್ಸಿಗೂ ಇರುವ ಪ್ರಮುಖ ವ್ಯತ್ಯಾಸಗಳೇನು ; (ವಿವರ ನೀಡುವುದು)

(ಈ) ಖಾಸಗಿ ವೈದ್ಯರುಗಳ ಸಂಘಟಿತ ಹೋರಾಟದಿಂದ ರಾಜ್ಯದಲ್ಲಿ ಆಗಿರುವ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ಯಾವ ರೀತಿ ಮುಂದಾಗುವುದು ?

## ಡಯಾಲೀಸಿಸ್ ಯಂತ್ರದ ಬಗ್ಗೆ

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ):–**

೩೭೬೭ (೪೩೦೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಯಾವ ಯಾವ ತಾಲ್ಲೂಕು ಹಾಗೂ ಜಿಲ್ಲಾ ಸರ್ಕಾರಿ ಆಸ್ಪತ್ರೆಗಳಿಗೆ ಕಳೆದ ಮೂರು ವರ್ಷಗಳಲ್ಲಿ ಡಯಾಲೀಸಿಸ್ ಯಂತ್ರಗಳನ್ನು ಒದಗಿಸಲಾಗಿದೆ ; ಯಾವ ಯಾವ ವರ್ಷದಲ್ಲಿ ಒದಗಿಸಲಾಗಿದೆ; (ವಿವರ ನೀಡುವುದು)

(ಆ) ಡಯಾಲೀಸಿಸ್ ಯಂತ್ರ ಒದಗಿಸಿದ್ದೂ, ಜನರೇಟರ್ ವ್ಯವಸ್ಥೆ, ಡಿಸ್ಟಿಲ್ಡ್ ವಾಟರ್ ಘಟಕ, ತಂತ್ರಜ್ಞರ ಕೊರತೆ ಈ ಮೊದಲಾದ ಯಾವ ಯಾವ ಕಾರಣಗಳಿಂದ ಯಾವ ಯಾವ ಆಸ್ಪತ್ರೆಗಳಲ್ಲಿ ಡಯಾಲೀಸಿಸ್ ಯಂತ್ರಗಳಿಗೆ ಚಾಲನೆ ನೀಡಲಾಗಿಲ್ಲ; (ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕು ಸರ್ಕಾರಿ ಆಸ್ಪತ್ರೆ ಹಾಗೂ ಮಳವಳ್ಳಿ ಸರ್ಕಾರಿ ಆಸ್ಪತ್ರೆಗಳಲ್ಲಿ ಡಯಾಲೀಸಿಸ್ ಯಂತ್ರಗಳ ಚಾಲನೆಯಲ್ಲಿ ವಿಳಂಬವಾಗಿರುವುದು ನಿಜವೇ ; ಕಾರಣವೇನು; ನಿಜವಾಗಿದ್ದಲ್ಲಿ, ಯಾವಾಗ ಚಾಲನೆ ನೀಡಲಾಗುವುದು ?

## ಲೈಂಗಿಕ ಕಾರ್ಯಕರ್ತೆಯರ ಸ್ಥಿತಿಗತಿ

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ):–**

೩೭೬೮ (೪೩೦೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಧಾನ ಪರಿಷತ್ ಸದಸ್ಯೆ ಶ್ರೀಮತಿ ಜಯಮಾಲಾ ರಾಮಚಂದ್ರರವರ ನೇತೃತ್ವದ "ಲೈಂಗಿಕ ಕಾರ್ಯಕರ್ತೆಯರ ಅಧ್ಯಯನ ಸಮಿತಿ"ಯು ಲೈಂಗಿಕ ಕಾರ್ಯಕರ್ತೆಯರ ಸ್ಥಿತಿಗತಿಯನ್ನು ಅಧ್ಯಯನ ಮಾಡಿ ವರದಿಯನ್ನು ಸಲ್ಲಿಸಿದೆಯೇ ;

(ಆ) ಸಲ್ಲಿಸಿದ್ದಲ್ಲಿ, ವಿವರ ನೀಡುವುದು ಲೈಂಗಿಕ ಕಾರ್ಯಕರ್ತೆಯರ ಸ್ಥಿತಿಗತಿಯಲ್ಲಿ ಯಾವ ಪ್ರಮುಖ ಕೊರತೆಗಳನ್ನು ಉಲ್ಲೇಖಿಸಲಾಗಿದೆ;

(ಇ) ಸರ್ಕಾರ ತೆಗೆದುಕೊಳ್ಳಬೇಕಾದ ಕ್ರಮಗಳನ್ನು ಕುರಿತು ಉಲ್ಲೇಖ ಮಾಡಿರುವ ಪ್ರಮುಖ ಅಂಶಗಳು ಯಾವುವು ; ಅವುಗಳಲ್ಲಿ ಯಾವ ಯಾವ ತುರ್ತು ಕ್ರಮಗಳನ್ನು ಕೈಗೊಳ್ಳಲಾಗುವುದು ;

(ಈ) ವಾರ್ಷಿಕ ಎಷ್ಟು ಹಣ ಮೀಸಲಿಡುವಂತೆ ಸಮಿತಿಯು ಶಿಫಾರಸ್ಸು ಮಾಡಿದೆ ; ಈ ಸಂಬಂಧ ಸರ್ಕಾರ ಯಾವ ರೀತಿಯ ಕ್ರಮಕ್ಕೆ ಮುಂದಾಗಿದೆ ?

## ಭಾರತೀಯ ವೈದ್ಯ ಪದ್ದತಿಯ ಶಿಕ್ಷಣದ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೩೭೬೯ (೪೩೨೪) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಸರ್ಕಾರದ ಅಡಿಯಲ್ಲಿ ವೈದ್ಯಕೀಯ ಕಾಲೇಜುಗಳಲ್ಲಿ ಭಾರತೀಯ ವೈದ್ಯ ಪದ್ಧತಿಗೆ (Indian system of Medicine) ಸಂಬಂಧಿಸಿದಂತೆ, ಆಯುಷ್ ಇಲಾಖೆಯ ಅಡಿಯಲ್ಲಿ ಎಷ್ಟು ಕೋರ್ಸ್‌ಗಳಿಗೆ ಪದವಿಗಳನ್ನು ನೀಡಲಾಗುತ್ತಿದೆ; (ಸಂಪೂರ್ಣ ಮಾಹಿತಿಗಳನ್ನು ನೀಡುವುದು)

(ಆ) ಭಾರತೀಯ ವೈದ್ಯ ಪದ್ಧತಿಯ (Indian system of Medicine) ಒಟ್ಟು ವೈದ್ಯಕೀಯ ಕೋರ್ಸ್‌ಗಳಿಂದ ಎಷ್ಟು ವೈದ್ಯರು ಪ್ರತಿ ವರ್ಷ ಪದವಿ ಪಡೆಯುತ್ತಿದ್ದಾರೆ ; (ವಿವರಗಳನ್ನು ಪ್ರತ್ಯೇಕವಾಗಿ ನೀಡುವುದು)

(ಇ) ರಾಜ್ಯ ಸರ್ಕಾರದ ಭಾರತೀಯ ವೈದ್ಯ ಪದ್ಧತಿ (Indian system of Medicine) ಶಿಕ್ಷಣಕ್ಕೆ ಪ್ರತಿ ವಿದ್ಯಾರ್ಥಿಗೆ ಭರಿಸುತ್ತಿರುವ ವೆಚ್ಚ ಎಷ್ಟು ? (ವಿವರಗಳನ್ನು ನೀಡುವುದು)

## ತಿಗಳ ಹಾಗೂ ಅದರ ಉಪಜಾತಿಗಳ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೩೭೭೦ (೪೩೨೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಹಿಂದುಳಿದ ವರ್ಗಗಳ ಆಯೋಗವು ತಿಗಳ ಹಾಗೂ ಅದರ ಅಡಿಯಲ್ಲಿ ಬರುವ ಉಪಜಾತಿಗಳನ್ನು ಪ್ರವರ್ಗ ೨ಎ ದಿಂದ ಪ್ರವರ್ಗ ೧ಕ್ಕೆ ಸೇರಿಸಲು ನಿರ್ಣಯಿಸಿದೆಯೇ ;

(ಆ) ನಿರ್ಣಯಿಸಿದ್ದಲ್ಲಿ, ರಾಜ್ಯ ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮವೇನು? (ಸಂಪೂರ್ಣವಾದ ಮಾಹಿತಿ ನೀಡುವುದು)

## ತಿಗಳ ಜನಾಂಗಕ್ಕೆ ನೀಡಿರುವ ಅನುದಾನದ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೩೭೭೧ (೪೩೨೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಸರ್ಕಾರದ ಹಿಂದುಳಿದ ವರ್ಗಗಳ ಅಭಿವೃದ್ಧಿ ಹಾಗೂ ಇಲಾಖೆ ಅಡಿಯಲ್ಲಿ ಹಿಂದುಳಿದ ವರ್ಗಕ್ಕೆ ಸೇರಿದ ತಿಗಳ ಜನಾಂಗಕ್ಕೆ ೨೦೧೩–೧೪ ರಿಂದ ಇಲ್ಲಿಯವರೆವಿಗೂ ರೂಪಿಸಿದ ಕಾರ್ಯಕ್ರಮ ಹಾಗೂ ನೀಡಿದ ಸೌಲಭ್ಯಗಳ ಬಗ್ಗೆ ವರ್ಷವಾರು ಮಾಹಿತಿ ನೀಡುವುದು ;

(ಆ) ಪ್ರತಿ ವರ್ಷದ ತಿಗಳ ಜನಾಂಗಕ್ಕೆ ಸೇರಿದ ಶೈಕ್ಷಣಿಕ, ವೃತ್ತಿ ಹಾಗೂ ಸಾಲ ಪಡೆದ ಫಲಾನುಭವಿಗಳ ಸಂಖ್ಯೆ ಹಾಗೂ ಅನುದಾನದ ಮೊತ್ತವನ್ನು ವರ್ಷವಾರು ನೀಡುವುದು ;

(ಇ) ರಾಜ್ಯ ಸರ್ಕಾರದ ಆಯವ್ಯಯದಲ್ಲಿ ತಿಗಳ ಜನಾಂಗಕ್ಕೆ ಪ್ರತ್ಯೇಕವಾಗಿ ಲೆಕ್ಕ ಶೀರ್ಷಿಕೆ ಸೃಷ್ಟಿಯಾಗಿದೆಯೇ ; ಅನುದಾನದ ವರ್ಷಾವಾರು ಮಾಹಿತಿ ನೀಡುವುದು ?

## ಮಹಿಳಾ ಮತ್ತು ಮಕ್ಕಳ ಇಲಾಖೆ ಅನುದಾನ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೩೭೭೨ (೪೩೭೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ರಾಜ್ಯ ಸರ್ಕಾರವು ೨೦೧೭–೧೮ನೇ ಸಾಲಿನಲ್ಲಿ ಆಯವ್ಯಯದ ಮೂಲಕ ನೀಡಿರುವ ಒಟ್ಟಾರೆ ಅನುದಾನ ಇಲ್ಲಿಯವರೆಗೆ ಎಷ್ಟು ಹಣ ಬಿಡುಗಡೆ ಆಗಿರುತ್ತದೆ ; ಎಷ್ಟು ಹಣ ಖರ್ಚು ಮಾಡಲಾಗಿರುತ್ತದೆ ;

(ಆ) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ೦೧-೦೪-೨೦೧೩ ರಿಂದ ಇಲ್ಲಿಯವರೆಗೆ ಕೇಂದ್ರ ಸರ್ಕಾರದಿಂದ ಯಾವ ಯಾವ ಯೋಜನೆಗಳಲ್ಲಿ ಎಷ್ಟು ಪ್ರಮಾಣದ ಅನುದಾನಗಳು ಬಿಡುಗಡೆಯಾಗಿರುತ್ತದೆ ; ಎಷ್ಟು ಹಣ ಬಳಕೆ ಆಗಿರುತ್ತದೆ ; ಸದರಿ ಇಲಾಖೆಗೆ ಪ್ರಸಕ್ತ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು ;

(ಇ) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯು ಡಾ : ಜಯಮಾಲರವರ ಸಮಿತಿಯ ಲೈಂಗಿಕ ಕಾರ್ಯಕರ್ತೆಯವರ ವರದಿಯನ್ನು ಜಾರಿಗೊಳಿಸಲು ಯಾವ ಕ್ರಮಗಳನ್ನು ಕೈಗೊಂಡಿರುತ್ತದೆ ; ಲಿಂಗತ್ವ ಅಲ್ಪಸಂಖ್ಯಾತರಿಗೆ ಎಸ್.ಸಿ.ಎಸ್.ಪಿ ಯೋಜನೆಯಡಿ ಕಳೆದ ಮೂರು ವರ್ಷಗಳಲ್ಲಿ ಇಲ್ಲಿಯವರೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿರುತ್ತದೆ ;

(ಈ) ರಾಜ್ಯ ಸರ್ಕಾರವು ಅತ್ಯಾಚಾರ ಮತ್ತು ವಿವಿಧ ದೌರ್ಜನ್ಯಗಳಿಗೆ ಒಳಗಾದ ಮಹಿಳೆಯರ ಚಿಕಿತ್ಸೆಗೆ ಇಲ್ಲಿಯವರೆಗೆ ಎಷ್ಟು ವಿಶೇಷ ಚಿಕಿತ್ಸಾ ಘಟಕಗಳನ್ನು ಸ್ಥಾಪನೆ ಮಾಡಿರುತ್ತದೆ ; ಮಹಿಳಾ ಮತ್ತು ಕಲ್ಯಾಣ ಇಲಾಖೆಯು ರಾಜ್ಯದಲ್ಲಿ ಎಷ್ಟು ಮಕ್ಕಳ ವಿಶೇಷ ನ್ಯಾಯಾಲಯಗಳನ್ನು ತೆರೆದಿರುತ್ತದೆ ಮತ್ತು ಅದಕ್ಕೆ ಬಿಡುಗಡೆಯಾಗಿರುವ ಹಣವೆಷ್ಟು ;

(ಉ) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯು ರಾಜ್ಯದಲ್ಲಿ ಹಿರಿಯ ನಾಗರೀಕರ ಸಬಲೀಕರಣಕ್ಕೆ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆ ಮಾಡಿರುವ ಅನುದಾನವೆಷ್ಟು ಮತ್ತು ಬಳಕೆಯಾಗಿರುವ ಅನುದಾನ ಎಷ್ಟು ;

(ಊ) ತುಮಕೂರು ಜಿಲ್ಲೆಯಲ್ಲಿ ತಾಲ್ಲೂಕುವಾರು ಹಿರಿಯ ನಾಗರೀಕರ ಸಬಲೀಕರಣಕ್ಕೆ ನೀಡಿರುವ ಅನುದಾನವೆಷ್ಟು ಮತ್ತು

ಬಳಕೆಯಾಗಿರುವ ಅನುದಾನವೆಷ್ಟು ; ತುಮಕೂರು ಜಿಲ್ಲೆಯಲ್ಲಿ ಎಷ್ಟು ಹಗಲು ಯೋಗಕ್ಷೇಮ ಕೇಂದ್ರಗಳನ್ನು ಹಿರಿಯ ನಾಗರೀಕರಿಗಾಗಿ ತೆರೆಯಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ವಸತಿ ಶಾಲೆಗಳ ಮಾಹಿತಿ ಕೋರಿ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೩೭೭೩ (೪೩೭೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರದ ಹಣಕಾಸಿನ ಸಹಾಯದೊಂದಿಗೆ ಕರ್ನಾಟಕ ರಾಜ್ಯ ಸರ್ಕಾರವು ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಡಿಯಲ್ಲಿ ರಾಜ್ಯದಲ್ಲಿ ಎಷ್ಟು ವಸತಿ ಶಾಲೆಗಳನ್ನು ನಡೆಸುತ್ತಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು) ಇವುಗಳಿಗೆ ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಸರ್ಕಾರವು ನೀಡಿರುವ ಅನುದಾನ ಎಷ್ಟು ; ಬಳಕೆಯಾಗಿರುವ ಅನುದಾನ ಎಷ್ಟು ;

(ಆ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಅಡಿಯಲ್ಲಿ ಎಷ್ಟು ಶಿಕ್ಷಕರು ಕರ್ನಾಟಕದಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ ; ಇವರಲ್ಲಿ ಎಷ್ಟು ಶಿಕ್ಷಕರನ್ನು ಖಾಯಂಗೊಳಿಸಲಾಗಿದೆ ; ಎಷ್ಟು ಶಿಕ್ಷಕರು ಖಾಯಂ ಇಲ್ಲದೇ ಕಾರ್ಯ ನಿರ್ವಹಿಸುತ್ತಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು) ಖಾಯಂ ಇಲ್ಲದೇ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಯ ಶಿಕ್ಷಕರನ್ನು ಹಾಗೂ ಶಿಕ್ಷಕೇತರ ಸಿಬ್ಬಂದಿಯನ್ನು ಯಾವಾಗ ಖಾಯಂಗೊಳಿಸಲಾಗುವುದು ;

(ಇ) ಪ್ರಸಕ್ತ ಸಾಲಿನಲ್ಲಿ ರಾಜ್ಯ ಸರ್ಕಾರವು ಎಷ್ಟು ವಸತಿ ಶಾಲೆಗಳನ್ನು ಪ್ರಾರಂಭಿಸಿರುತ್ತದೆ ; ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಎಷ್ಟು ವಸತಿ ಶಾಲೆಗಳು ಹಾಗೂ ವಸತಿ ನಿಲಯಗಳು,

ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿವೆ ; ಇವುಗಳಲ್ಲಿರುವ ವಿದ್ಯಾರ್ಥಿಗಳ ಮತ್ತು ಶಿಕ್ಷಕರ ಸಂಖ್ಯೆ ಎಷ್ಟು ; ಈ ತಾಲ್ಲೂಕಿನ ಎಲ್ಲಾ ವಸತಿ ಶಾಲೆ ಮತ್ತು ವಸತಿ ನಿಲಯಗಳಿಗೆ ಖಾಯಂ ಕಟ್ಟಡ ಒದಗಿಸಲಾಗಿದೆಯೇ ;

(ಈ) ಕಳೆದ ಮೂರು ವರ್ಷಗಳಲ್ಲಿ ವಸತಿ ಶಾಲೆಗಳ ಹಾಗೂ ವಸತಿ ನಿಲಯಗಳ ನಿರ್ವಹಣೆಗೆ ಸಮಾಜ ಕಲ್ಯಾಣ ಇಲಾಖೆ, ಗಿರಿಜನ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಎಷ್ಟು ಅನುದಾನ ಹಂಚಿಕೆಯಾಗಿರುತ್ತದೆ ಮತ್ತು ಎಷ್ಟು ಅನುದಾನ ಬಳಕೆಯಾಗಿರುತ್ತದೆ ; ತುಮಕೂರು ಜಿಲ್ಲೆಗೆ ಎಷ್ಟು ಅನುದಾನ ಹಂಚಿಕೆ ಆಗಿರುತ್ತದೆ ಹಾಗೂ ಬಳಕೆಯಾಗಿರುತ್ತದೆ? (ತಾಲ್ಲೂಕುವಾರು ವಿವರ ನೀಡುವುದು)

## ಗ್ರಾಹಕರ ಕಲ್ಯಾಣ ನಿಧಿಯ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೩೭೭೪ (೪೩೭೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯು ಜಾಹಿರಾತಿನ ಮೂಲಕ ಗ್ರಾಹಕರನ್ನು ಮೋಸಗೊಳಿಸುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ರಾಜ್ಯದಲ್ಲಿ ಯಾವ ರೀತಿಯ ನಿಯಮಾವಳಿಗಳನ್ನು ಜಾರಿಗೊಳಿಸಿದೆ; ಸುಳ್ಳು ಜಾಹಿರಾತಿನ ಮೂಲಕ ಮೋಸಕ್ಕೆ ಒಳಗಾದ ಗ್ರಾಹಕರು ಎಲ್ಲಿ ತಮ್ಮ ದೂರುಗಳನ್ನು ದಾಖಲಿಸಬಹುದು ಮತ್ತು ಕಳೆದ ಮೂರು ವರ್ಷಗಳಲ್ಲಿ ಎಷ್ಟು ದೂರುಗಳನ್ನು ದಾಖಲಿಸಿದ್ದಾರೆ ;

(ಆ) ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯು ರಾಜ್ಯದಲ್ಲಿ ಪ್ರತಿ ವರ್ಷ ಎಷ್ಟು ಗ್ರಾಹಕರ ಕಲ್ಯಾಣ ನಿಧಿಯನ್ನು ಸಂಗ್ರಹ ಮಾಡುತ್ತದೆ ; ಕಳೆದ ಮೂರು ವರ್ಷಗಳಲ್ಲಿ ಸಂಗ್ರಹ ಮಾಡಿರುವ ಹಣ ಎಷ್ಟು ; ಸದರಿ ಹಣವನ್ನು ಯಾವ ಉದ್ದೇಶಗಳಿಗೆ ಮತ್ತು ಯಾವ ಜಿಲ್ಲೆಗಳಲ್ಲಿ ಬಳಸಲಾಗಿದೆ ; (ತಾಲ್ಲೂಕುವಾರು ವಿವರಗಳನ್ನು ನೀಡುವುದು) ಗ್ರಾಹಕರ ಕಲ್ಯಾಣ ನಿಧಿಯನ್ನು ಕಳೆದ ಮೂರು ವರ್ಷಗಳಲ್ಲಿ ಇತರೆ ಯಾವ ಯಾವ ಯೋಜನೆಗಳಿಗೆ ಹಾಗೂ ಕಾರ್ಯಕ್ರಮಗಳಿಗೆ ಬಳಸಲಾಗಿದೆ ;

(ಇ) ರಾಜ್ಯದಲ್ಲಿ ಇರುವ ಜಿಲ್ಲಾ ಗ್ರಾಹಕ ವೇದಿಕೆಗಳ ನ್ಯಾಯಾಲಯಗಳೆಷ್ಟು; ಸದರಿ ನ್ಯಾಯಾಲಯಗಳಿಗೆ ನ್ಯಾಯಾಧೀಶ ಹುದ್ದೆಗಳನ್ನು ಹಾಗೂ ಇತರೆ ಸಿಬ್ಬಂದಿಯನ್ನು ಪೂರ್ಣ ಪ್ರಮಾಣದಲ್ಲಿ ನೇಮಿಸಲಾಗಿದೆಯೇ ಇಲ್ಲದೇ ಇದ್ದಲ್ಲಿ, ಪೂರ್ಣ ವಿವರಗಳನ್ನು ನೀಡುವುದು. ಕಂದಾಯ ಉಪ ವಿಭಾಗದಲ್ಲಿ ಗ್ರಾಹಕ ನ್ಯಾಯಾಲಯಗಳನ್ನು ತೆರೆಯುವ ಉದ್ದೇಶ ಸರ್ಕಾರಕ್ಕೆ ಇದೆಯೇ; ರಾಜ್ಯದ ಗ್ರಾಹಕ ನ್ಯಾಯಾಲಯಗಳಲ್ಲಿ ಬಾಕಿಯಿರುವ ಪ್ರಕರಣಗಳು ಎಷ್ಟು ;

(ಈ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಇಲ್ಲಿಯವರೆಗೆ ಎಷ್ಟು ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಪಡಿತರ ಚೀಟಿಯನ್ನು ವಿತರಣೆ ಮಾಡಲಾಗಿದೆ ; ಬಾಕಿಯಿರುವ ಅರ್ಜಿಗಳೆಷ್ಟು ; ಈ ತಾಲ್ಲೂಕಿನಲ್ಲಿ ಪ್ರತಿ ತಿಂಗಳು ಪಡಿತರ ಚೀಟಿದಾರರಿಗೆ ಎಷ್ಟು ಆಹಾರ ಧಾನ್ಯಗಳನ್ನು ವಿತರಣೆ ಮಡಲಾಗುತ್ತಿದೆ ಮತ್ತು ಎಷ್ಟು ನ್ಯಾಯಬೆಲೆ ಅಂಗಡಿಗಳು ಹಾಗೂ ಸಹಕಾರ ಸಂಘಗಳ ಮೂಲಕ ಪಡಿತರ ವಿತರಣೆ ಮಾಡಲಾಗುತ್ತಿದೆ ?

## ಆಸ್ಪತ್ರೆಗಳ ಮಾಹಿತಿ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೩೭೭೫ (೪೩೭೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದಿಂದ ಆಹಾರ ಕಲಬೆರಕೆ ತಡೆಯಲು ೨೦೧೩–೧೪ ರಿಂದ ೨೦೧೭–೧೮ರವರೆಗೆ ಎಷ್ಟು ಅನುದಾನ ಮಂಜೂರಾಗಿರುತ್ತದೆ; ಇದರಲ್ಲಿ ಬಳಕೆಯಾಗಿರುವ ಹಣವೆಷ್ಟು;

(ಆ) ರಾಜ್ಯದ ಆರೋಗ್ಯ ಇಲಾಖೆಯಲ್ಲಿ ಇರುವ ಆಂಬ್ಯುಲೆನ್ಸ್‌ಗಳು ಎಷ್ಟು; ಆಂಬ್ಯುಲೆನ್ಸ್‌ಗಳ ನಿರ್ವಹಣೆಗೆ ವಾರ್ಷಿಕ ಎಷ್ಟು ಹಣವನ್ನು ಖರ್ಚು ಮಾಡಲಾಗುತ್ತಿದೆ; ಇಲಾಖೆಗೆ ಇನ್ನೂ ಎಷ್ಟು ಆಂಬ್ಯುಲೆನ್ಸ್‌ಗಳ ಬೇಡಿಕೆ ಇರುತ್ತದೆ;

(ಇ) ಪ್ರಧಾನ ಮಂತ್ರಿಗಳ ಆರೋಗ್ಯ ಯೋಜನೆಯಡಿಯಲ್ಲಿ ರಾಜ್ಯದಲ್ಲಿ ಎಷ್ಟು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ತೆರೆಯಲಾಗಿದೆ; ಇವುಗಳಿಗೆ ಕೇಂದ್ರ ಸರ್ಕಾರದಿಂದ ಬರುತ್ತಿರುವ ವಾರ್ಷಿಕ ಅನುದಾನ ಎಷ್ಟು; ರಾಜ್ಯ ಸರ್ಕಾರವು ರಾಜ್ಯದಲ್ಲಿ ಎಷ್ಟು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ಯಾವ ಯಾವ ಜಿಲ್ಲೆಯಲ್ಲಿ ತೆರೆದಿರುತ್ತದೆ;

(ಈ) ಪರಿಶಿಷ್ಟ ಜಾತಿ ಉಪ ಯೋಜನೆ ಹಾಗೂ ಗಿರಿಜನ ಉಪ ಯೋಜನೆಯಲ್ಲಿ ಆರೋಗ್ಯ ಇಲಾಖೆಗೆ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಹಣ ಹಂಚಿಕೆಯಾಗಿರುತ್ತದೆ; ಎಷ್ಟು ಹಣ ಯಾವ ಯಾವ ಕಾರ್ಯಕ್ರಮಕ್ಕೆ ಬಳಕೆ ಆಗಿರುತ್ತದೆ;

(ಉ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಎಷ್ಟು ಆರೋಗ್ಯ ಪ್ರಾಥಮಿಕ ಕೇಂದ್ರಗಳು ಮತ್ತು ಸಾರ್ವಜನಿಕ ಆಸ್ಪತ್ರೆಗಳು

ಇರುತ್ತವೆ; ಇವುಗಳಲ್ಲಿ ಪೂರ್ಣ ಪ್ರಮಾಣದ ವೈದ್ಯರು ಇರುತ್ತಾರೆಯೇ; ಕಳೆದ ಮೂರು ವರ್ಷಗಳಲ್ಲಿ ಈ ಆಸ್ಪತ್ರೆಗಳ ನಿರ್ವಹಣೆಗೆ ಎಷ್ಟು ಹಣ ಹಂಚಿಕೆಯಾಗಿದೆ ಮತ್ತು ಬಳಕೆಯಾಗಿದೆ?

## ಮೆಡಿಕಲ್ ಸೀಟುಗಳ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೩೭೭೬ (೪೩೭೭) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಎಷ್ಟು ಸರ್ಕಾರಿ ವೈದ್ಯಕೀಯ ಕಾಲೇಜುಗಳು ಹಾಗೂ ಖಾಸಗಿ ವೈದ್ಯಕೀಯ ಕಾಲೇಜುಗಳು ಇರುತ್ತವೆ; ಪ್ರಸಕ್ತ ಸಾಲಿನಲ್ಲಿ ಸದರಿ ಕಾಲೇಜುಗಳಿಗೆ ನೀಟ್ ಆಧಾರದ ಮೇಲೆ ಎಷ್ಟು ವಿದ್ಯಾರ್ಥಿಗಳಿಗೆ ಉಚಿತವಾಗಿ ಮತ್ತು ಎಷ್ಟು ವಿದ್ಯಾರ್ಥಿಗಳಿಗೆ ಖಾಸಗಿ ಶಿಕ್ಷಣ ಮಂಡಳಿಗಳ ಶುಲ್ಕಕ್ಕೆ ಅನುಗುಣವಾಗಿ ವೈದ್ಯಕೀಯ ಸೀಟುಗಳ ತುಂಬಲಾಗಿದೆ;

(ಆ) ಕಳೆದ ಮೂರು ವರ್ಷಗಳಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯು ಎಷ್ಟು ವೈದ್ಯಕೀಯ ವಿದ್ಯಾರ್ಥಿಗಳಿಗೆ ಶಿಷ್ಯ ವೇತನವನ್ನು ನೀಡಿರುತ್ತದೆ; ಪ್ರತಿ ವಿದ್ಯಾರ್ಥಿಗೆ ಅವರು ವರ್ಗ/ಸಮುದಾಯಕ್ಕೆ ಅನುಗುಣವಾಗಿ ನೀಡುತ್ತಿರುವ ಶಿಷ್ಯ ವೇತನ ಎಷ್ಟು;

(ಇ) ರಾಜ್ಯದಲ್ಲಿ ಮೆರಿಟ್ ಆಧಾರಿತ ಮೆಡಿಕಲ್ ವಿದ್ಯಾರ್ಥಿಗಳಿಗೆ ಹೆಚ್ಚು ಸರ್ಕಾರಿ ಸೀಟುಗಳು ದೊರೆಯಲು ರಾಜ್ಯ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿರುತ್ತದೆ; ನೀಟ್ ಫಲಿತಾಂಶ ಬಂದ ನಂತರ ಸಿ.ಇ.ಟಿ. ವ್ಯವಸ್ಥೆಯಲ್ಲಿ ಮೆರಿಟ್ ಆಧಾರಿತ ವಿದ್ಯಾರ್ಥಿಗಳಿಗೆ ನಿಗಧಿತ

ಅವಧಿಯಲ್ಲಿ ಶಿಕ್ಷಣ ಶುಲ್ಕ ಪಾವತಿ ಮಾಡಿಲ್ಲವೆಂದು ಮೆಡಿಕಲ್ ಸೀಟ್‌ಗಳನ್ನು ವಂಚನೆ ಮಾಡಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸರ್ಕಾರಿ ರಜೆಯ ಅವಧಿಯಲ್ಲಿ ಮೆರಿಟ್ ಆಧಾರಿತ ಮೆಡಿಕಲ್ ವಿದ್ಯಾರ್ಥಿಗಳಿಗೆ ಡಿ.ಡಿ. ಮುಖಾಂತರ ಶಿಕ್ಷಣ ಶುಲ್ಕ ಭರ್ತಿ ಮಾಡಲು ಸೂಚನೆ ನೀಡಿದ್ದು ಸರಿಯೇ; ಈ ಮೋಸದ ಪ್ರಕರಣಗಳನ್ನು ಸರ್ಕಾರ ತನಿಖೆಗೆ ಒಳಪಡಿಸಿದೆಯೇ;

(ಈ) ಜನಾರೋಗ್ಯ ಶಿಕ್ಷಣಕ್ಕೆ ರಾಜ್ಯ ಸರ್ಕಾರದಿಂದ ೨೦೧೩-೧೪ ರಿಂದ ೨೦೧೭-೧೮ ರವರೆಗೆ ಎಷ್ಟು ಅನುದಾನ ಮಂಜೂರಾಗಿರುತ್ತದೆ; ಇದರಲ್ಲಿ ಬಳಕೆಯಾಗಿರುವ ಹಣವೆಷ್ಟು; ಆರೋಗ್ಯ ಇಲಾಖೆಯ ಅಡಿಯಲ್ಲಿ ರಾಜ್ಯದಲ್ಲಿ ಎಷ್ಟು ಜನಾರೋಗ್ಯ ಪ್ರಯೋಗ ಶಾಲೆಗಳು ಇರುತ್ತವೆ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಚಿಲ್ಲರೆ ಸೀಮೆಎಣ್ಣೆ ಲೈಸೆನ್ಸ್‌ದಾರರ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೭೭೭ (೪೧೯೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಚಿಲ್ಲರೆ ಸೀಮೆಎಣ್ಣೆ ಪರವಾನಗಿದಾರರು ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಎಲ್ಲಾ ಪರವಾನಗಿದಾರರಿಗೆ ಮಾಹೆಯಾನ ಸೀಮೆಎಣ್ಣೆಯನ್ನು ವಿತರಿಸಲಾಗುತ್ತಿದೆಯೇ ಅಥವಾ ಇಲ್ಲವೇ;

(ಇ) ಕೆಲವೊಂದು ಚಿಲ್ಲರೆ ಪರವಾನಗಿದಾರರಿಗೆ ಸೀಮೆಎಣ್ಣೆ ಸ್ಥಗಿತಗೊಂಡಿರುವುದರಿಂದ ಅವರಿಗೆ ಯಾವ ಪರ್ಯಾಯ ವ್ಯವಸ್ಥೆಯನ್ನು ಮಾಡಲಾಗಿದೆ? (ಮಾಹಿತಿಯನ್ನು ನೀಡುವುದು)

## ಬಿಪಿಎಲ್ ಮತ್ತು ಎಪಿಎಲ್ ಕಾರ್ಡುಗಳ ವಿತರಣೆ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೭೮ (೪೧೭೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭ ಜನವರಿ ೩೧ ರಂದು ಚಾಲನೆ ನೀಡಲಾದ ಅನ್ನಭಾಗ್ಯ ಯೋಜನೆಯಡಿ ಹೊಸದಾಗಿ ಬಿಪಿಎಲ್ ಮತ್ತು ಎಪಿಎಲ್ ಕಾರ್ಡ್‌ಗಳಿಗೆ ಆನ್‌ಲೈನ್ ಮೂಲಕ ಕಾರ್ಡ್ ಬಯಸಿ ಅರ್ಜಿ ಸಲ್ಲಿಸಿದ ಫಲಾನುಭವಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಅವುಗಳಲ್ಲಿ ಈವರೆಗೆ ವಿತರಣೆ ಮಾಡಿದ ಕಾರ್ಡ್‌ಗಳ ಸಂಖ್ಯೆ ಎಷ್ಟು; ಕಾರ್ಡ್ ವಿತರಣೆ ವಿಳಂಬವಾದರೆ ಅರ್ಜಿ ಸಲ್ಲಿಸಿದವರಿಗೆ ಬದಲಿ ವ್ಯವಸ್ಥೆ ಸರ್ಕಾರದ ಕ್ರಮವೇನು; (ವಿವರ ನೀಡುವುದು)

(ಇ) ಮಂಜೂರಾದ ಆಹಾರ ನಿರೀಕ್ಷಕರ ಹುದ್ದೆಗಳೆಷ್ಟು; ಅದರಲ್ಲಿ ಭರ್ತಿ ಮಾಡಲಾದ ಮತ್ತು ಖಾಲಿ ಹುದ್ದೆಗಳೆಷ್ಟು; ಖಾಲಿ ಹುದ್ದೆಗಳನ್ನು ತುಂಬಲು ಈವರೆಗೆ ಕೈಗೊಂಡಿರುವ ಕ್ರಮಗಳೇನು;

(ಈ) ಆಹಾರ ನಿರೀಕ್ಷಕರ ಹುದ್ದೆ ಕೊರತೆ ಇದ್ದಲ್ಲಿ ಹೊಸದಾಗಿ ಹುದ್ದೆಗಳನ್ನು ಸೃಜಿಸುವ ಬಗ್ಗೆ ವ್ಯವಹರಿಸಲಾಗಿದೆಯೇ? (ಪೂರ್ಣ ವಿವರ ನೀಡುವುದು)

## ಡಯಾಲಿಸಿಸ್ ಕೇಂದ್ರಗಳ ವಿವರ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೭೯ (೪೧೭೭೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಯಾವ ಯಾವ ಸರ್ಕಾರಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಕೇಂದ್ರಗಳನ್ನು ಸ್ಥಾಪಿಸಲಾಗಿದೆ, ಎಷ್ಟು ವಿಭಾಗಗಳನ್ನು ಸ್ಥಾಪಿಸಲಾಗಿದೆ, ಸದರಿ ಆಸ್ಪತ್ರೆಗಳಲ್ಲಿ ಎಷ್ಟು ತಜ್ಞ ವೈದ್ಯರಿದ್ದಾರೆ; ದಿನ ಒಂದಕ್ಕೆ ಗರಿಷ್ಠ ಎಷ್ಟು ರೋಗಿಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ; ವಿಧಿಸುತ್ತಿರುವ ದರವೆಷ್ಟು; ಈವರೆಗೆ ಎಷ್ಟು ರೋಗಿಗಳು ಆಸ್ಪತ್ರೆಯಲ್ಲಿ ನೋಂದಣಿ ಮಾಡಿಕೊಂಡಿರುತ್ತಾರೆ; (ಪೂರ್ಣ ವಿವರ ನೀಡುವುದು)

(ಆ) ರಿಯಾಯಿತಿ ದರದಲ್ಲಿ ಡಯಾಲಿಸಿಸ್ ಮಾಡಲು ಒಪ್ಪಂದ/ಒಪ್ಪಿರುವ ಖಾಸಗಿ ಆಸ್ಪತ್ರೆಗಳು /ಧರ್ಮಾರ್ಥ ಸಂಸ್ಥೆಗಳಾವುವು; ಒಪ್ಪಂದದಂತೆ ಎಷ್ಟು ರೋಗಿಗಳಿಗೆ ಚಿಕಿತ್ಸೆ ನೀಡಲಿವೆ ಹಾಗೂ ಎಷ್ಟು ದರವನ್ನು ನಿಗದಿ ಪಡಿಸಿವೆ;

(ಇ) ಡಯಾಲಿಸಿಸ್‌ಗೆ ಒಳಪಟ್ಟ ರೋಗಿಗಳಿಗೆ ರಕ್ತದ ಇಂಜೆಕ್ಷನ್ ನೀಡುವುದು ಅವಶ್ಯವಾಗಿದ್ದು, ಸರ್ಕಾರಿ ಆಸ್ಪತ್ರೆಗಳಲ್ಲಿ ಅವುಗಳನ್ನು ನೀಡಲಾಗುತ್ತಿದೆಯೇ; (ವಿವರ ನೀಡುವುದು) ಇಲ್ಲದಿದ್ದಲ್ಲಿ, ಸರ್ಕಾರದ ನಿರ್ಧಾರವೇನು?

## ರಾಜ್ಯದಲ್ಲಿ ನವಜಾತ ಶಿಶುಗಳ ಮರಣಹೋಮದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೮೦ (೪೧೫೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಿಂದ ರಾಜ್ಯದಲ್ಲಿ ಎಷ್ಟು ನವಜಾತ ಶಿಶುಗಳು/ ಮಕ್ಕಳು ಮೃತಪಟ್ಟಿವೆ; (ಜಿಲ್ಲಾವಾರು ವಿವರ ನೀಡುವುದು)

(ಆ) ನವಜಾತ ಶಿಶುಗಳ /ಮಕ್ಕಳ ಸಾವಿಗೆ ಕಾರಣಗಳೇನು;

(ಇ) ನವಜಾತ ಶಿಶುಗಳ /ಮಕ್ಕಳ ಸಾವಿಗೆ ಸಂಬಂಧಪಟ್ಟಂತೆ ಎಷ್ಟು ಜನ ವೈದ್ಯರು ಹಾಗೂ ಇತರೆ ಸಿಬ್ಬಂದಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಈ) ಮಕ್ಕಳ ಸಾವಿಗೆ ಸಿಬ್ಬಂದಿ ಕೊರತೆಯು ಪ್ರಮುಖ ಕಾರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅಗತ್ಯ ಸಿಬ್ಬಂದಿಗಳನ್ನು ನೇಮಿಸಲು ಕೈಗೊಂಡಿರುವ ಕ್ರಮಗಳೇನು?

## ಡೆಂಗ್ಯೂ ಮತ್ತು ಚಿಕನ್‌ಗುನ್ಯಾ ರೋಗದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೮೧ (೪೧೫೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇತ್ತೀಚಿನ ದಿನಗಳಲ್ಲಿ ಡೆಂಗ್ಯೂ ಮತ್ತು ಚಿಕನ್‌ಗುನ್ಯಾ ಪ್ರಕರಣಗಳು ಉಲ್ಬಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಎಷ್ಟು ಪ್ರಕರಣಗಳು ದಾಖಲಾಗಿವೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಡೆಂಗ್ಯೂ ಮತ್ತು ಚಿಕನ್‌ಗುನ್ಯಾದಿಂದ ಮೃತಪಟ್ಟವರ ಸಂಖ್ಯೆ ಎಷ್ಟು; (ಜಿಲ್ಲಾ ಮತ್ತು ಖಾಸಗಿ ಆಸ್ಪತ್ರೆಗಳ ಪ್ರತ್ಯೇಕ ವಿವರವನ್ನು ಜಿಲ್ಲಾವಾರು ನೀಡುವುದು)

(ಇ) ಡೆಂಗ್ಯೂ ಮತ್ತು ಚಿಕನ್‌ಗುನ್ಯಾ ಪೀಡಿತರಿಗೆ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸೆ ನೀಡುವ ಕುರಿತು ಸರ್ಕಾರದ ನಿಲುವೇನು;

(ಈ) ಕಳೆದ ೩ ವರ್ಷಗಳಿಂದ ಡೆಂಗ್ಯೂ ಜ್ವರ ನಿಯಂತ್ರಣಕ್ಕಾಗಿ ಸರ್ಕಾರ ವೆಚ್ಚ ಮಾಡಿರುವ ಹಣ ಎಷ್ಟು; ಡೆಂಗ್ಯೂ ಮತ್ತು ಚಿಕನ್‌ಗುನ್ಯಾವನ್ನು ಶಾಶ್ವತವಾಗಿ ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೮೨ (೪೨೩೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಅಡಿಯಲ್ಲಿ ಯಾವ ಯಾವ ಜಿಲ್ಲೆಗಳು ಬರುತ್ತವೆ;

(ಆ) ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ಶಾಸಕರು/ವಿಧಾನ ಪರಿಷತ್ ಸದಸ್ಯರಿಗೆ ಅಭಿವೃದ್ಧಿ ಅನುದಾನ ಕೊಡಲಿಕ್ಕೆ ಅವಕಾಶವಿದೆಯೇ;

(ಇ) ೨೦೧೩–೧೪, ೨೦೧೪–೧೫, ೨೦೧೫–೧೬, ೨೦೧೬–೧೭, ೨೦೧೭–೧೮ನೇ ಸಾಲಿನಲ್ಲಿ ಯಾವ ಯಾವ ವಿಧಾನ ಸಭಾ ಕ್ಷೇತ್ರಕ್ಕೆ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ; ಅದೇ ರೀತಿ ವಿಧಾನ ಪರಿಷತ್ ಸದಸ್ಯರಿಗೆ ವರ್ಷವಾರು ಬಿಡುಗಡೆ ಮಾಡಿದ ಅನುದಾನ ಎಷ್ಟು ? (ವಿವರ ನೀಡುವುದು)

## ಕಳಪೆ ಗುಣಮಟ್ಟದ ಅಕ್ಕಿ ಗೋಧಿ ನೀಡುತ್ತಿರುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) ಹಾಗೂ ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–:–**

೩೭೮೩ (೪೧೫೩+೪೩೯೯+೪೩೦೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನ್ನಭಾಗ್ಯ ಯೋಜನೆಯಡಿ ಬಡವರಿಗೆ ನೀಡಲಾಗುವ ಪಡಿತರದಲ್ಲಿ ಮುಗ್ಗಲು ಹಿಡಿದಿರುವುದು; ಹುಳದ ಗೂಡುಗಳು ಕಂಡು ಬರುವುದು; ಕಳಪೆ ಗುಣಮಟ್ಟದ ಅಕ್ಕಿ ಗೋಧಿ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯದ ಒಟ್ಟು ಎಷ್ಟು ಗೋದಾಮುಗಳಲ್ಲಿ ಅಕ್ಕಿ ಗೋಧಿ ಹುಳವಾಗಿದ್ದು ಕಂಡು ಬಂದಿದೆ; ಒಟ್ಟು ಕ್ವಿಂಟಲ್ ಅಕ್ಕಿ ಗೋಧಿ ಮಣ್ಣುಪಾಲಾಗಿದೆ; ಇದರ ಮೌಲ್ಯವೆಷ್ಟು; ಯಾವ ಯಾವ ಕಡೆ ಈ ರೀತಿಯ ಪಡಿತರವನ್ನು ವಿತರಣೆ ಮಾಡಲಾಗಿದೆ; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಪಡಿತರ ವಿತರಣಾ ಕೇಂದ್ರಕ್ಕೆ ಸರಬರಾಜು ಆಗುವ ಮುನ್ನವೇ ಪಡಿತರಗಳು ಹಾಳಾಗಿರುವುದು ನಿಜವೇ;ನಿಜವಾಗಿದ್ದಲ್ಲಿ ಕಾರಣಗಳೇನು;

(ಈ) ಈ ವಿಚಾರವಾಗಿ ಸರ್ಕಾರ ಕೈಗೊಂಡ ಕ್ರಮಗಳೇನು; ತಪ್ಪಿಸ್ಥರ ವಿರುದ್ಧ ಕ್ರಮ ಜರುಗಿಸಲಾಗಿದೆಯೇ; ಹಾಗೂ ತನಿಖೆಗೆ ಆದೇಶಿಸಲಾಗಿದೆಯೇ; ಹಾಗಿದ್ದಲ್ಲಿ, ತನಿಖೆ ಯಾವ ಹಂತದಲ್ಲಿದೆ; ಯಾವ ಕಾಲಮಿತಿಯಲ್ಲಿ ತನಿಖೆ ಪೂರ್ಣಗೊಳಿಸಲಾಗುವುದು?

(ಉ) ಕೊಳೆಯದ ಯೋಗ್ಯ ಗೋಧಿಯನ್ನು ವಿತರಣೆ ಮಾಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ?

## ಮಹಿಳಾ ಸಂಘಕ್ಕೆ ಸಿಗುವ ಸೌಲಭ್ಯಗಳು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨೮೪ (೪೧೫೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಂಕಣ ಖಾರ್ವಿ ಮಹಿಳಾ ಸಂಘ (ರಿ) ನಂ. ೧೭೯/೪ ೩ನೇ ಮೇನ್ ೩ನೇ ಕ್ರಾಸ್ ಪ್ರಕಾಶನಗರ, ಬೆಂಗಳೂರು ಈ ಸಂಘ ಯಾವಾಗ ಅಸ್ತಿತ್ವಕ್ಕೆ ಬಂದಿದೆ; (ಈ ಸಂಘದಲ್ಲಿರುವ ಒಟ್ಟು ಸದಸ್ಯರ ಹೆಸರು ಸಮೇತ ವಿವರ ಒದಗಿಸುವುದು)

(ಆ) ಈ ಸಂಘಕ್ಕೆ ಇದುವರೆವಿಗೆ ಸಕಾರದಿಂದ ಯಾವ ಯಾವ ರೀತಿಯ ಸೌಲಭ್ಯ ನೀಡಲಾಗಿದೆ; ನೀಡಲು ಅವಕಾಶ ಇರುವ ಯೋಜನೆಗಳಾವುವು;

(ಇ) ಮಹಿಳಾ ಸಂಘಗಳಿಗೆ ಉತ್ತೇಜನ ನೀಡಿ ಪ್ರೋತ್ಸಾಹಿಸುವ ಸಲುವಾಗಿ ಸರ್ಕಾರ ಹಾಕಿಕೊಂಡಿರುವ ಕಾರ್ಯಕ್ರಮಗಳೇನು; ಯೋಜನೆಗಳೇನು; (ವಿವರ ನೀಡುವುದು)

(ಈ) ಈ ಸಂಘಕ್ಕೆ ಯಾವುದೇ ಸ್ವಂತ ನಿವೇಶನ ಕಟ್ಟಡವಿಲ್ಲದಿರುವುದರಿಂದ ಸರ್ಕಾರ ನಿವೇಶನ ಒದಗಿಸಲು ಕ್ರಮ ಜರುಗಿಸುವುದೇ?

## ಚೇತನಾ ಯೋಜನೆ ಮತ್ತು ನಿಗಧಿಪಡಿಸಿರುವ ಅನುದಾನ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೮೫ (೪೩೫೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ "ಚೇತನಾ ಯೋಜನೆ" ಯನ್ನು ಯಾವಾಗ ಜಾರಿಗೆ ತರಲಾಯಿತು; ಇದುವರೆವಿಗೂ ಈ ಯೋಜನೆಯಲ್ಲಿ ಯಾವ ಯಾವ ಅನುಕೂಲತೆಗಳನ್ನು ಮಹಿಳೆಯರು ಮತ್ತು ಮಕ್ಕಳು ಪಡೆದಿದ್ದಾರೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಯೋಜನೆಗೆ ಸರ್ಕಾರ ನಿಗಧಿಪಡಿಸಿರುವ ಹಣವೆಷ್ಟು; ವೆಚ್ಚವಾದ ಹಣವೆಷ್ಟು;

(ಇ) ಕಳೆದ ಎರಡು ವರ್ಷಗಳಿಂದ ಇದುವರೆವಿಗೂ ಸಹಾಯ ಪಡೆದಿರುವ ಫಲಾನುಭವಿಗಳು ಎಷ್ಟು; ಆ ಫಲಾನುಭವಿಗಳಿಗೆ ನೀಡುವ ಪ್ರೋತ್ಸಾಹ ಧನವೆಷ್ಟು?

## ಜಾತಿವಾರು/ಪ್ರವರ್ಗವಾರು ಮೀಸಲಾತಿ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೮೬ (೪೨೩೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಜಾತಿವಾರು/ಪ್ರವರ್ಗವಾರು ವಿವರಗಳನ್ನು ಒದಗಿಸುವುದು; ಯಾವ ಯಾವ ಜಾತಿ ಪ್ರವರ್ಗಕ್ಕೆ ಯಾವ ಪ್ರಮಾಣದ ಮೀಸಲಾತಿಯನ್ನು ಒದಗಿಸಲಾಗಿದೆ;

(ಆ) ಈ ಜಾತಿ ಪ್ರವರ್ಗಗಳಿಗೆ ನೀಡುತ್ತಿರುವ ಮೀಸಲಾತಿ ಮಾನದಂಡಗಳೇನು; ಸದರಿ ವರ್ಗಗಳಿಗೆ ಇರುವ ಆದಾಯ ಮಿತಿ ಪ್ರಮಾಣವೆಷ್ಟು;

(ಇ) ಇತ್ತೀಚೆಗೆ ರಾಜ್ಯ ಸರ್ಕಾರವು ಕೆಲ ಜಾತಿಗಳ ಪ್ರವರ್ಗ ಮೀಸಲಾತಿಯನ್ನು ಬದಲಾಯಿಸಲು ಉದ್ದೇಶಿಸಿರುವುದು ನಿಜವೇ;

(ಈ) ನಿಜವಿದ್ದಲ್ಲಿ, ಇದಕ್ಕೆ ಕಾರಣಗಳೇನು; ಯಾವ ಯಾವ ಜಾತಿಗಳನ್ನು ಯಾವ ವರ್ಗ/ಪ್ರವರ್ಗಕ್ಕೆ ಸೇರಿಸಲು ತೀರ್ಮಾನಿಸಿದೆ;

(ಉ) ಒಂದೇ ಪ್ರವರ್ಗಕ್ಕೆ ಹಲವು ಜಾತಿ/ಪಂಗಡಗಳನ್ನು ಸೇರಿಸುವುದರಿಂದ ಮೀಸಲಾತಿ ಪಡೆಯಲು ಪೈಪೋಟಿ ಉಂಟಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಒಳಮೀಸಲಾತಿಗೆ ಸರ್ಕಾರ ಬದ್ಧವಾಗಿದೆಯೇ?

## ಧನಶ್ರೀ ಯೋಜನೆ ಫಲಾನುಭವಿಗಳ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೮೭ (೪೩೫೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೆಚ್.ಐ.ವಿ. ಸೊಂಕಿತ ಸಂತ್ರಸ್ಥೆಯರಿಗೆ ಆರ್ಥಿಕ ಶಕ್ತಿ ನೀಡುವ ಮೂಲಕ ಮುಖ್ಯವಾಹಿನಿಗೆ ತರುವ ಉದ್ದೇಶಿತ "ಧನಶ್ರೀ" ಯೋಜನೆಯಡಿ ೨೦೧೫–೧೬, ೨೦೧೬–೧೭ ಮತ್ತು ೨೦೧೭–೧೮ ರಲ್ಲಿ ಎಷ್ಟು ಫಲಾನುಭವಿಗಳಿಗೆ ಆರ್ಥಿಕ ಸಹಾಯ ಮಾಡಲಾಗಿದೆ; ಮಾಡಿದ್ದರೆ ವಿವರ ನೀಡುವುದು;

(ಆ) ಈ ವಿಚಾರವಾಗಿ ಸರ್ಕಾರ ಸಮಿತಿಯುನ್ನು ರಚಿಸಿ ಡಾ॥ ಜಯಮಾಲ ರಾಮಚಂದ್ರರವರನ್ನು ಅಧ್ಯಕ್ಷರನ್ನಾಗಿ ಮಾಡಿದ ನಂತರ ಅವರು ಮಾಡಿದ ಶಿಫಾರಸ್ಸು ಅಂಶಗಳನ್ನು ಜಾರಿಗೆ ತಂದಿರುವುದೇ; ತಂದಿದ್ದರೆ, ಅದರ ವಿವರ ನೀಡುವುದು?

## ನಿರ್ಭಯ ಸಂಚಿತ ಯೋಜನೆ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೮೮ (೪೩೫೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ ಮತ್ತು ೨೦೧೭–೧೮ ರಲ್ಲಿ ರಾಜ್ಯದಲ್ಲಿ ಲೈಂಗಿಕ ದೌರ್ಜನ್ಯಕ್ಕೆ ಒಳಗಾದ ಒಟ್ಟು ಮಹಿಳೆಯರು/ಮಕ್ಕಳ ಸಂಖ್ಯೆ ಎಷ್ಟು;

(ಆ) ಸಂತ್ರಸ್ಥೆಯರಿಗೆ ಕೇಂದ್ರ ಸಕಾರದ “ನಿರ್ಭಯ ಸಂಚಿತ” ಮೂಲಕ ಪರಿಹಾರ ನೀಡಲಾಗಿದೆಯೇ; ನೀಡಿದ್ದರೆ ಎಷ್ಟು ಜನ ಸಂತ್ರಸ್ಥೆಯರಿಗೆ ನೀಡಲಾಗಿದೆ; ಹಾಗೂ ಮತ್ತ್ಯಾವ ರೀತಿಯಲ್ಲಿ ಸಹಕರಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಇ) “ನಿರ್ಭಯ ಸಂಚಿತ” ಪರಿಹಾರವನ್ನು ಯಾವ ಯಾವ ರೂಪದಲ್ಲಿ ರಾಜ್ಯದಲ್ಲಿ ವಿನಿಯೋಗಿಸಲಾಗಿದೆ; “ನಿರ್ಭಯ ಸಂಚಿತ ನಿಧಿ”ಯ ವಿವರ ನೀಡುವುದು?

## ಮೊರಾರ್ಜಿ ವಸತಿ ಶಾಲೆ, ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ಮುಂತಾದ ವಸತಿ ಶಾಲೆಗಳ ಶಿಕ್ಷಕರ ವರ್ಗಾವಣೆ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೩೭೮೯ (೪೩೫೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೊರಾರ್ಜಿ ವಸತಿ ಶಾಲೆ, ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ಮುಂತಾದ ವಸತಿ ಶಾಲೆಗಳಲ್ಲಿ ಈ ಶೈಕ್ಷಣಿಕ ವರ್ಷ ಶಿಕ್ಷಕರ ವರ್ಗಾವಣೆಗೆ ಅರ್ಜಿಗಳನ್ನು ಆಹ್ವಾನ ಮಾಡಲಾಗಿದೆಯೇ; ಹಾಗಿದ್ದಲ್ಲಿ, ವರ್ಗಾವಣೆಯ ಅಧಿಸೂಚನಾ ಪತ್ರದ ಪ್ರತಿ ನೀಡುವುದು;

(ಆ) ಈ ವರ್ಗಾವಣೆ ಅಧಿಸೂಚನಾ ಪತ್ರದ ಅನ್ವಯ ಎಷ್ಟು ಅರ್ಜಿಗಳನ್ನು ಸ್ವೀಕರಿಸಲಾಗಿದೆ; ಅದರಲ್ಲಿ ಶಿಕ್ಷಕರನ್ನು ವರ್ಗಾವಣೆ ಮಾಡಿ ಆದೇಶ ಹೊರಡಿಸಲಾಗಿದೆಯೇ;

(ಇ) ಈ ವರ್ಗಾವಣೆಗಳ ಮಾಡುವಾಗ ಯಾವ ಯಾವ ನಿಯಮಗಳನ್ನು ಪಾಲಿಸಲಾಗಿದೆ; ವರ್ಗಾವಣೆಗಾಗಿ ನೀತಿ ನಿಯಮಾವಳಿಗಳನ್ನು ರೂಪಿಸಲಾಗಿದೆಯೇ; ಹಾಗಿದ್ದಲ್ಲಿ, ಅದರ ಪ್ರತಿ ನೀಡುವುದು;

(ಈ) ಶಿಕ್ಷಣ ಇಲಾಖೆಯಲ್ಲಿ ಈಗಾಗಲೇ ಕೌನ್ಸಲಿಂಗ್ ಪದ್ಧತಿಯ ವರ್ಗಾವಣೆ ನೀತಿಯನ್ನು ವಸತಿ ಶಾಲೆಗಳ ಶಿಕ್ಷಕರಿಗೂ ಅನ್ವಯಿಸುವಲ್ಲಿ ಯಾವ ತೊಂದರೆಗಳಿವೆ? (ವಿವರಣೆ ನೀಡುವುದು)

## ಬಯೋಮೆಟ್ರಿಕ್ ಯಂತ್ರೋಪಕರಣಗಳು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೬೦ (೪೩೪೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ನ್ಯಾಯಬೆಲೆ ಅಂಗಡಿಗಳು ಎಷ್ಟು; (ತಾಲ್ಲೂಕುವಾರು ಮತ್ತು ಜಿಲ್ಲಾವಾರು ವಿವರವಾದ ಮಾಹಿತಿ ನೀಡುವುದು)

(ಆ) ಸರ್ಕಾರಿ ನ್ಯಾಯಬೆಲೆ ಅಂಗಡಿಗಳಲ್ಲಿ ಅಳವಡಿಸಿರುವ ಬಯೋಮೆಟ್ರಿಕ್ ಯಂತ್ರೋಪಕರಣಗಳು ಎಷ್ಟು; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಬಯೋಮೆಟ್ರಿಕ್ ಯಂತ್ರೋಪಕರಣಗಳು ಕಾರ್ಯನಿರ್ವಹಿಸದೆ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದರೆ, ತೆಗೆದುಕೊಂಡ ಕ್ರಮಗಳೇನು;

(ಈ) ಬಯೋಮೆಟ್ರಿಕ್ ಯಂತ್ರೋಪಕರಣಗಳು ಖರೀದಿಗಾಗಿ ಸರ್ಕಾರವು ಖರ್ಚು ಮಾಡಿರುವ ಹಣವೆಷ್ಟು; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ಬಯೋಮೆಟ್ರಿಕ್ ಯಂತ್ರೋಪಕರಣಗಳು ಚಾಲ್ತಿಯಲ್ಲಿರುವ ಹಾಗೂ ಸ್ಥಗಿತಗೊಂಡಿರುವ ಅಂಕಿ ಅಂಶಗಳವಾರು ಮಾಹಿತಿ ನೀಡುವುದು?

## ಪ್ರವಾಸಿ ಸೌಲಭ್ಯಗಳಿಗಾಗಿ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೯೧ (೪೧೯೨) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿನಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಪ್ರವಾಸಿ ಸೌಲಭ್ಯಗಳ ಸಂಬಂಧ ರಾಮನಗರ ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಆ) ರಾಮನಗರ ವಿಧಾನಸಭಾ ಕ್ಷೇತ್ರಕ್ಕೆ ಅನುದಾನ ಬಿಡುಗಡೆ ಮಾಡದಿರಲು ಕಾರಣಗಳೇನು;

(ಇ) ರಾಮನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಪ್ರವಾಸಿ ಕ್ಷೇತ್ರಗಳಿಗೆ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳುವುದೇ?

## ವಿದ್ಯಾರ್ಥಿ ನಿಯಲಯಗಳಲ್ಲಿ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಭತ್ಯೆ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೭೨ (೪೧೧೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರವು ಅಲ್ಪಸಂಖ್ಯಾತರ, ಹಿಂದುಳಿದ ವರ್ಗ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಒಂದು ದಿನಕ್ಕೆ/ಮಾಹೆಯಾನ ನೀಡುತ್ತಿರುವ ಭತ್ಯೆ ಎಷ್ಟು; (ಪ್ರತ್ಯೇಕ ಮಾಹಿತಿ ನೀಡುವುದು)

(ಆ) ಈಗಿನ ಆರ್ಥಿಕ ಸ್ಥಿತಿಗೆ ಅನುಗುಣವಾಗಿ ಭತ್ಯೆಯನ್ನು ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

(ಇ) ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಹೆಚ್ಚಿಸಲಾಗುವುದು? (ಮಾಹಿತಿ ನೀಡುವುದು)

## ಹೊಸ ಪಡಿತರ (ಬಿ.ಪಿ.ಎಲ್. ) ಅರ್ಜಿ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೭೩ (೪೧೧೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹೊಸದಾಗಿ ಬಿ.ಪಿ.ಎಲ್. ಅರ್ಜಿ ಸಲ್ಲಿಸಿದ ಅರ್ಹ ಫಲಾನುಭವಿಗಳಿಗೆ ಹೊಸ ಪಡಿತರ ಚೀಟಿ ಹಂಚಿಕೆ ಮಾಡಲು ತೆಗೆದುಕೊಳ್ಳುವ ಸಮಯ ಎಷ್ಟು; (ಮಾಹಿತಿ ನೀಡುವುದು)

(ಆ) ರಾಮನಗರ ಜಿಲ್ಲೆಯಲ್ಲಿ ಹೊಸ/ತಿದ್ದುಪಡಿಯಾದ ಪಡಿತರ ಚೀಟಿ ಹಂಚಿಕೆ ಮಾಡುವುದರಲ್ಲಿ ತುಂಬಾ ವಿಳಂಬವಾಗುತ್ತಿದ್ದು ಸಕಾಲಕ್ಕೆ ಪಡಿತರ ಚೀಟಿ ಹಂಚಿಕೆ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ;

(ಇ) ಸರ್ಕಾರವು ಪ್ರಸ್ತುತ ನೀಡುತ್ತಿರುವ ಪಡಿತರ ಪದಾರ್ಥಗಳು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಪಡಿತರ ಪದಾರ್ಥಗಳನ್ನು ಹೆಚ್ಚಿಸಲಾಗುವುದು? (ಮಾಹಿತಿ ನೀಡುವುದು)

## ಪಡಿತರ ಚೀಟಿ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೯೪ (೪೮೯೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಿಂದ ವಿತರಿಸಲಾಗಿರುವ ಬಿ.ಪಿ.ಎಲ್. ಮತ್ತು ಎ.ಪಿ.ಎಲ್. ಪಡಿತರ ಚೀಟಿಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಖಾಸಗಿ ಬಯೋಮೆಟ್ರಿಕ್ ಕೇಂದ್ರಗಳಲ್ಲಿ ಇಲಾಖೆ ಅಧಿಕಾರಿಗಳೇ ಪಡಿತರ ಚೀಟಿಗಳನ್ನು ಮುದ್ರಿಸಿಕೊಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಬಿ.ಪಿಎಲ್. ಪಡಿತರ ಚೀಟಿಗಳನ್ನು ಇಲಾಖೆಯವರೇ ಉದ್ದೇಶ ಪೂರ್ವಕವಾಗಿ ರದ್ದುಪಡಿಸಿ ಹೊಸ ಅರ್ಜಿ ಸಲ್ಲಿಸಲು ಸೂಚಿಸುತ್ತಿರುವುದರಿಂದ ಬಡವರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)

## ಅಪೌಷ್ಟಿಕತೆಯಿಂದ ಸಂಭವಿಸುತ್ತಿರುವ ಮಕ್ಕಳು ಮತ್ತು ಗರ್ಭಿಣಿಯರ ಸಾವಿನ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೭೯೫ (೪೧೭೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಹತ್ತು ವರ್ಷಗಳಿಂದ ಅಪೌಷ್ಟಿಕತೆಯಿಂದ ಸಂಭವಿಸಿರುವ ಮಕ್ಕಳು ಮತ್ತು ಗರ್ಭಿಣಿಯರ ಸಾವಿನ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ರೀತಿ ಅಪೌಷ್ಟಿಕತೆಯಿಂದ ಸಂಭವಿಸುತ್ತಿರುವ ಸಾವಿಗೆ ಕಾರಣವೇನು;

(ಇ) ರಾಜ್ಯದಲ್ಲಿ ಅಪೌಷ್ಟಿಕತೆ ನಿವಾರಣೆ ಮಾಡಲು ಸರ್ಕಾರ ಕಳೆದ ಐದು ವರ್ಷಗಳಿಂದ ಖರ್ಚು ಮಾಡಿದ ಹಣ ಎಷ್ಟು; ಈ ಬಗ್ಗೆ ರೂಪಿಸಿದ ಯೋಜನೆಗಳೇನು; (ವಿವರ ನೀಡುವುದು)

(ಈ) ರಾಜ್ಯದ ಅಂಗನವಾಡಿಗಳಲ್ಲಿ ಆಹಾರ ಒದಗಿಸಲು ಗುತ್ತಿಗೆ ಪಡೆದ ತಮಿಳುನಾಡಿನ ಸಂಸ್ಥೆ ಅಕ್ರಮ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮ ಏನು; ಪ್ರಸ್ತುತ ಯಾವ ಸಂಸ್ಥೆಯು ಅಂಗನವಾಡಿಗಳಿಗೆ ಆಹಾರವನ್ನು ಪೂರೈಸುತ್ತಿದೆ; ಈ ಸಂಸ್ಥೆಯು ಅಕ್ರಮ ನಡೆಸದಂತೆ ನೋಡಿಕೊಳ್ಳಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ಅಂಗನವಾಡಿ ಕೇಂದ್ರಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೭೬ (೪೧೭೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳೆಷ್ಟು;

(ಆ) ಸ್ವಂತ ಕಟ್ಟಡಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳೆಷ್ಟು; ಬಾಡಿಗೆ ಕಟ್ಟಡಗಳಲ್ಲಿರುವ ಅಂಗನವಾಡಿ ಕೇಂದ್ರಗಳೆಷ್ಟು; (ವಿವರ ನೀಡುವುದು)

(ಇ) ರಾಜ್ಯದ ಎಲ್ಲಾ ಅಂಗನವಾಡಿ ಕೇಂದ್ರಗಳಿಗೂ ಸ್ವಂತ ಕಟ್ಟಡಗಳನ್ನು ಪೂರೈಸಲು ಸರ್ಕಾರ ಕೈಗೊಂಡ ಕ್ರಮವೇನು;

(ಈ) ಯಾವ ಕಾಲಮಿತಿಯಲ್ಲಿ ಪೂರೈಸಲಾಗುವುದು?

# ಆಯುಷ್ ಇಲಾಖೆಯಲ್ಲಿನ ಸಿಬ್ಬಂದಿ ಅಧಿಕಾರಿ ನೌಕರರ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೭೯೭ (೪೧೭೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆಯುಷ್ ಇಲಾಖೆಯಲ್ಲಿ ಗ್ರೂಪ್ ಎ, ಬಿ, ಸಿ ವೃಂದದ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ಮತ್ತು ನೌಕರರ ಸಂಖ್ಯೆ ಎಷ್ಟು; ಇವರುಗಳು ಸಲ್ಲಿಸುವ ವಾರ್ಷಿಕ ಆಸ್ತಿ ಮತ್ತು ದಾಯಿತ್ವ ಪಟ್ಟಿಯನ್ನು ಕೇಂದ್ರ ಕಚೇರಿಯಲ್ಲಿ ನಿರ್ವಹಣೆ ಮಾಡಲಾಗಿದೆಯೇ;

(ಆ) ೨೦೦೮–೦೯ನೇ ಸಾಲಿನಿಂದ ೨೦೧೫–೧೬ನೇ ಸಾಲಿನ ವರೆಗೆ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ನೌಕರರುಗಳಲ್ಲಿ ಆಸ್ತಿ ಮತ್ತು ದಾಯಿತ್ವ ಪಟ್ಟಿಗಳನ್ನು ಸಲ್ಲಿಸಿರುವವರ ಮತ್ತು ಸಲ್ಲಿಸದೆ ಇರುವವರ ಸಂಖ್ಯೆ ಎಷ್ಟು;

(ಇ) ಆಸ್ತಿ ಮತ್ತು ದಾಯಿತ್ವ ಪಟ್ಟಿಗಳನ್ನು ಮತ್ತು ನಿವೇಶನ ಖರೀದಿ ಮತ್ತು ಗೃಹ ನಿರ್ಮಾಣ ಮಾಡಲು ಅನುಮತಿ ಪಡೆದಿರುವ ಮತ್ತು ಪಡೆಯದಿರುವ ಅಧಿಕಾರಿ ನೌಕರರ ಸಂಖ್ಯೆ ಎಷ್ಟು;

(ಈ) ಅನುಮತಿ ಪಡೆಯದೇ ಇರುವವರ ವಿರುದ್ಧ ಇಲಾಖಾ ವಿಚಾರಣೆಗೆ ಆದೇಶ ನೀಡಲಾಗಿದೆಯೇ; ಆದೇಶ ಹೊರಡಿಸಿ ಎಷ್ಟು ಸಮಯವಾಗಿದೆ; ಇಲಾಖಾ ವಿಚಾರಣೆ ನಡೆದು ವರದಿ ನೀಡಿ ಎಷ್ಟು ಸಮಯವಾಗಿದೆ;

(ಉ) ಈ ರೀತಿ ಇಲಾಖಾ ವಿಚಾರಣೆ ಎದುರಿಸುತ್ತಿರುವ ಅಧಿಕಾರಿ ನೌಕರರಿಗೆ ಪದೋನ್ನತಿ ನೀಡಬೇಕಾಗಿದೆಯೇ; ಪದೋನ್ನತಿಯನ್ನು ತಪ್ಪಿಸಲು ವಿಚಾರಣಾ ವರದಿಯನ್ನು ಅಂಗೀಕರಿಸಲು ವಿಳಂಬ ಮಾಡಲಾಗುತ್ತಿದೆಯೇ;

(ಊ) ಈ ಕೂಡಲೇ ವಿಚಾರಣಾ ವರದಿಯನ್ನು ಅಂಗೀಕರಿಸಿ ಸದರಿ ಅಧಿಕಾರಿ ನೌಕರರುಗಳಿಗೆ ಪದೋನ್ನತಿ ನೀಡಲು ಸರ್ಕಾರ ಕೈಗೊಂಡ ಕ್ರಮವೇನು?

## ಆಯುಷ್ ಇಲಾಖೆಯ ಲಿಪಿಕ ವೃಂದದ ನೌಕರರ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೩೭೯೮ (೪೧೭೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆಯುಷ್ ಇಲಾಖೆಯಲ್ಲಿ ಲಿಪಿಕ ವೃಂದದ ಹುದ್ದೆಗಳಲ್ಲಿ ಸರ್ಕಾರಿ ಸೇವೆಗೆ ಸೇರಿದ ದಿನಾಂಕದಿಂದ ೧೦ ವರ್ಷಗಳಿಗೆ ಮೇಲ್ಪಟ್ಟು ಕೇಂದ್ರ ಕಛೇರಿ ಮತ್ತು ಬೆಂಗಳೂರಿನ ವಿವಿಧ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಲಿಪಿಕ ವೃಂದದಲ್ಲಿ ೨ ಮತ್ತು ೩ ಪದೋನ್ನತಿಗಳನ್ನು ಪಡೆದು ಬೆಂಗಳೂರಿನಲ್ಲಿಯೇ ಸೇವೆ ಸಲ್ಲಿಸುತ್ತಿರುವ ಅಧಿಕಾರಿ ನೌಕರರ ಸಂಖ್ಯೆ ಎಷ್ಟು; (ಇವರು ಎಷ್ಟು ವರ್ಷಗಳಿಂದ ಬೆಂಗಳೂರಿನಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ; (ವಿವರ ನೀಡುವುದು)

(ಇ) ಆಯುಷ್ ಇಲಾಖೆಯಲ್ಲಿ ೧೦ ವರ್ಷಗಳಿಗಿಂತ ಮೇಲ್ಪಟ್ಟು ಒಂದೇ ಸ್ಥಳದಲ್ಲಿ ಕಾರ್ಯ ನಿರ್ವಹಿಸಿದ ಅಧಿಕಾರಿ ನೌಕರರ ವರ್ಗಾವಣೆ ಮಾಡಲಾಗಿದೆಯೇ; ಮಾಡಿದ್ದಲ್ಲಿ, ವಿವರ ನೀಡುವುದು;

(ಈ) ಆಯುಷ್ ನಿರ್ದೇಶನಾಲಯದ ಆಯವ್ಯಯ ವಿಭಾಗದ ಅಧೀಕ್ಷಕರು ಅದೇ ಸ್ಥಳದಲ್ಲಿ ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ; ಇವರಿಗೆ ಪದೋನ್ನತಿ ನೀಡಲು ಸಹಾಯಕ ಆಡಳಿತಾಧಿಕಾರಿ ಹುದ್ದೆಯನ್ನು ನಿರ್ದೇಶನಾಲಯಕ್ಕೆ ಸ್ಥಳಾಂತರಿಸಲಾಗಿದೆಯೇ;

(ಉ) ಸ್ಥಳಾಂತರಿಸಿದ ಹುದ್ದೆಗೆ ಪದೋನ್ನತಿ ನೀಡಿ ಆಯವ್ಯಯ ವಿಭಾಗದಲ್ಲಿಯೇ ಮುಂದುವರಿಸಲಾಗಿದೆಯೇ; ಮುಂದುವರಿಸಿದ್ದಲ್ಲಿ, ಕಾರಣ ತಿಳಿಸುವುದು;

(ಊ) ಆಯುಷ್ ನಿರ್ದೇಶನಾಲಯದ ಲೆಕ್ಕಾಧಿಕಾರಿ ಹುದ್ದೆಗೆ ರಾಜ್ಯ ಲೆಕ್ಕಪತ್ರ ಇಲಾಖೆಯ ಅಧಿಕಾರಿಯನ್ನು ನಿಯೋಜಿಸಬೇಕಾಗಿದ್ದು, ವರ್ಗಾವಣೆಯಿಂದ ತೆರವಾದ ಲೆಕ್ಕಾಧಿಕಾರಿ ಹುದ್ದೆಗೆ ಲೆಕ್ಕಾಧೀಕ್ಷಕರಿಗೆ ಪ್ರಭಾರ ನೀಡದೆ ಆಯವ್ಯಯ ವಿಭಾಗದ ಇಲಾಖಾಧಿಕಾರಿಗೆ ಪ್ರಭಾರ ನೀಡಲು ಕಾರಣವೇನು?

## ಪಶ್ಚಿಮ ಘಟ್ಟದ ಮಾರ್ಗದ ಯೋಜನೆ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :-**

೩೭೯ (೩೪೩೦) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗೋಕರ್ಣ ಮತ್ತು ಕನ್ಯಾಕುಮಾರಿಗಳನ್ನು ಸಂಪರ್ಕಿಸುವ ಪಶ್ಚಿಮ ಘಟ್ಟ ಪ್ರವಾಸೋದ್ಯಮ ಮಾರ್ಗದ ಯೋಜನೆ ಸರ್ಕಾರದ ಮುಂದಿದೆಯೇ;

(ಆ) ಈ ಬಗ್ಗೆ ವರದಿಯೊಂದನ್ನು ಕೇರಳ ರಾಜ್ಯ ಸರ್ಕಾರವು ಸಲ್ಲಿಸಿರುವುದು ನಿಜವೇ;

(ಇ) ಈ ವರದಿಯ ಪ್ರಮುಖ ಅಂಶಗಳೇನು; ಇದನ್ನು ಜಾರಿಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ವೈದ್ಯಾಧಿಕಾರಿಗಳ ನಿರ್ಲಕ್ಷ್ಯದ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೩೮೦೦ (೩೪೨೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೊಸಪೇಟೆ ಸರ್ಕಾರಿ ಆಸ್ಪತ್ರೆಯಲ್ಲಿ ಇತ್ತೀಚೆಗೆ ಸೂಕ್ತ ಚಿಕಿತ್ಸೆ ಇಲ್ಲದೆ ವೃದ್ಧ ದಂಪತಿಗಳು ಸಾವಿಗೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಾರಣಗಳ ಸಹಿತ ಸಂಪೂರ್ಣ ವಿವರ ನೀಡುವುದು;

(ಆ) ವೈದ್ಯಕೀಯ ಚಿಕಿತ್ಸೆ ನೀಡದೆ ನಿರ್ಲಕ್ಷ್ಯ ತೋರಿಸಿದ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿ ವಿರುದ್ಧ ಇಲಾಖೆಯು ಕೈಗೊಂಡ ಕ್ರಮಗಳೇನು?

## ಭಾಷಿಕ ಹಾಗೂ ಮತೀಯ ಅಲ್ಪ ಸಂಖ್ಯಾತರ ವೈದ್ಯಕೀಯ ಕಾಲೇಜುಗಳ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೩೮೦೧ (೪೨೩೪) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಭಾಷಿಕ ಹಾಗೂ ಮತೀಯ ಅಲ್ಪಸಂಖ್ಯಾತರೆಂದು ರಿಯಾಯಿತಿ, ವಿನಾಯಿತಿ ಪಡೆಯುತ್ತಿರುವ ವೈದ್ಯಕೀಯ ದಂತ ಹಾಗೂ ವೈದ್ಯಕೀಯ ಇನ್ನಿತರ ಕಾಲೇಜುಗಳ ಪಟ್ಟಿ ನೀಡಿ;

(ಆ) ಆಯಾ ಸಂಸ್ಥೆಗಳಿಗೆ ದೊರೆತಿರುವ ವಿನಾಯಿತಿ, ರಿಯಾಯಿತಿ ವಿಶೇಷ ಸೌಲಭ್ಯಗಳ ಮಾಹಿತಿ ನೀಡುವುದು;

(ಇ) ಧಾರ್ಮಿಕ/ಮತೀಯ/ಭಾಷಿಕ ಅಲ್ಪಸಂಖ್ಯಾತರು ಎನ್ನುವ ಕಾರಣಕ್ಕಾಗಿ ಸಾಮಾನ್ಯ ಆಡಳಿತ ಮಂಡಳಿಯವರಿಗೂ ಹಾಗೂ ಇವರಿಗೂ ಇರುವ ವ್ಯತ್ಯಾಸ ಏನು; (ವಿಶ್ಲೇಷಣಾತ್ಮಕ ವಿವರ ನೀಡುವುದು) ಆಯಾ ಸಂಸ್ಥೆಗಳಲ್ಲಿ ಆಯಾ ಧಾರ್ಮಿಕ/ಮತೀಯ/ ಭಾಷಿಕ ಅಲ್ಪಸಂಖ್ಯಾತರಿಗೆ ದೊರಕುತ್ತಿರುವ ಸೀಟುಗಳ ಪ್ರಮಾಣ ಎಷ್ಟು; ಶುಲ್ಕ ವಿನಾಯಿತಿಗಳು ಎಷ್ಟು; ಹಾಗೂ ಪ್ರವೇಶಾತಿಗೆ ಇರುವ ನಿಯಮಗಳೇನು;

(ಈ) ಮೇಲಿನ ಎಲ್ಲಾ ಸಂಗತಿಗಳನ್ನು ಕಾಲೇಜುವಾರು ಹಾಗೂ ಕೋರ್ಸ್‌ವಾರು ಮಾಹಿತಿ ಒದಗಿಸುವುದು?

## ಅಂಗನವಾಡಿ ಕೇಂದ್ರಗಳು ಮತ್ತು ಫಲಾನುಭವಿಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೩೮೦೨ (೪೩೧೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳೆಷ್ಟು; ಅವು ಎಲ್ಲೆಲ್ಲಿವೆ; (ವಿವರ ನೀಡುವುದು)

(ಆ) ಅಂಗನವಾಡಿ ಕೇಂದ್ರಗಳಿಂದ ಒಟ್ಟು ಎಷ್ಟು ಜನ ಫಲಾನುಭವಿಗಳಿಗೆ ಸೌಲಭ್ಯ ದೊರೆತಿದೆ;

(ಇ) ಒಟ್ಟು ಎಷ್ಟು ಜನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದಾರೆ;

(ಈ) ಫಲಾನುಭವಿಗಳಿಗೆ ಪ್ರತಿನಿತ್ಯ ನೀಡುತ್ತಿರುವ ಆಹಾರಗಳೇನು; ಅದಕ್ಕಾಗಿ ಸರ್ಕಾರ ನೀಡುತ್ತಿರುವ ಅನುದಾನವೆಷ್ಟು? (ವಿವರ ನೀಡುವುದು)

## ಡೆಂಗ್ಯೂ, ಮಲೇರಿಯಾ ಮತ್ತು ಚಿಕನ್‌ಗುನ್ಯಾ ಕಾಯಿಲೆಗಳಿಗೆ ತುತ್ತಾದವರು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೩೮೦೩ (೪೩೧೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಡೆಂಗ್ಯೂ ಮಲೇರಿಯಾ, ಚಿಕನ್‌ಗುನ್ಯಾ ಮುಂತಾದ ರೋಗಗಳಿಗೆ ಎಷ್ಟು ಜನರು ತುತ್ತಾಗಿದ್ದಾರೆ;

(ಆ) ಈ ರೋಗಿಗಳ ಚಿಕಿತ್ಸೆಗೆ ಸರ್ಕಾರ ಇದುವರೆಗೆ ತೆಗೆದುಕೊಂಡಿರುವ ಕ್ರಮಗಳೇನು;

(ಇ) ಎಷ್ಟು ಜನ ರೋಗಿಗಳು ಈ ಕಾಯಿಲೆಗಳಿಂದ ಗುಣಮುಖರಾಗಿದ್ದಾರೆ; ಎಷ್ಟು ಜನರು ಸಾವನ್ನಪ್ಪಿದ್ದಾರೆ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಈ ರೋಗಗಳನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

## ಮೀಸಲಾತಿ ಪ್ರಮಾಣ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೩೮೦೪ (೪೨೨೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಾಸಿಸುತ್ತಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಇತರೆ ಹಿಂದುಳಿದ ಜಾತಿ (ಓಬಿಸಿ) ಅಲ್ಪಸಂಖ್ಯಾತರು ಹಾಗೂ ಇತರೆ ಜಾತಿಗಳಿಗೆ ಸೇರಿದ ಜನಸಂಖ್ಯೆ ಪ್ರಮಾಣವೆಷ್ಟು; (ವರ್ಗಾವಾರು ತಾಲ್ಲೂಕುವಾರು ಜನಸಂಖ್ಯೆ ವಿವರ ನೀಡುವುದು)

(ಆ) ಈ ವರ್ಗದ ಜನರಿಗೆ ಶೈಕ್ಷಣಿಕ ಉದ್ಯೋಗ ಮತ್ತು ರಾಜಕೀಯ ಕ್ಷೇತ್ರಗಳಲ್ಲಿ ಅನುಕ್ರಮವಾಗಿ ನೀಡಿರುವ ಮೀಸಲಾತಿ ಪ್ರಮಾಣ ಎಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಪಡಿತರ ಕುಟುಂಬಗಳು ಮತ್ತು ಪಡಿತರ ವ್ಯವಸ್ಥೆ

**ಶ್ರೀ ವಿ.ಎಸ್.ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು):–**

೩೮೦೫ (೪೩೧೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಾಸಿಸುತ್ತಿರುವ ಒಟ್ಟು ಕುಟುಂಬಗಳ ಸಂಖ್ಯೆ ಎಷ್ಟು; ಅವುಗಳ ಪೈಕಿ ಬಿ.ಪಿ.ಎಲ್. ಮತ್ತು ಎ.ಪಿ.ಎಲ್. ಸೌಲಭ್ಯ ಪಡೆದ ಕುಟುಂಬಗಳ ಸಂಖ್ಯೆ ಎಷ್ಟು; (ಪೂರ್ಣ ವಿವರ ನೀಡುವುದು)

(ಆ) ಈ ಪಡಿತರ ಕುಟುಂಬಗಳಿಗೆ ಮಾಹೆಯಾನ ಯಾವ ಬೆಲೆಯಲ್ಲಿ ಯಾವ ಯಾವ ಆಹಾರ ಪದಾರ್ಥಗಳನ್ನು ಎಷ್ಟು ಪ್ರಮಾಣದಲ್ಲಿ ನೀಡಲಾಗುತ್ತಿದೆ; (ವಿವರಗಳನ್ನು ನೀಡುವುದು)

(ಇ) "ಅನ್ನಭಾಗ್ಯ" ಯೋಜನೆ ಜಾರಿಯಲ್ಲಿದೆಯೇ; ಇದ್ದಲ್ಲಿ, ಪ್ರತಿ ತಿಂಗಳು ಎಷ್ಟು ಜನ ಪಡಿತರದಾರರಿಗೆ ಎಷ್ಟು ಪ್ರಮಾಣದಲ್ಲಿ ಆಹಾರ ಪದಾರ್ಥಗಳನ್ನು ನೀಡಲಾಗುತ್ತಿದೆ;

(ಈ) ಇದಕ್ಕಾಗಿ ಮಾಹೆಯಾನ ಸರ್ಕಾರಕ್ಕೆ ತಗಲುತ್ತಿರುವ ವೆಚ್ಚವೆಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ವಸತಿ ಶಾಲಾ–ಕಾಲೇಜುಗಳು

**ಶ್ರೀ ವಿ.ಎಸ್.ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು):–**

೩೮೦೬ (೪೩೧೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಸಗಿ ವಸತಿ ಪ್ರಾಥಮಿಕ, ಉನ್ನತ ಪ್ರಾಥಮಿಕ ಪ್ರೌಢಶಾಲೆ ಮತ್ತು ವಸತಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; ಅವು ಯಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಆ) ವಸತಿ ಶಾಲಾ–ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ– ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು; ಬೋಧಕ–ಬೋಧಕೇತರರ ಸಂಖ್ಯೆ ಎಷ್ಟು; (ಶಾಲಾ–ಕಾಲೇಜುವಾರು ವಿವರ ನೀಡುವುದು)

(ಇ) ಖಾಸಗಿ ವಸತಿ ಶಾಲಾ–ಕಾಲೇಜುಗಳಿಗೆ ಅನುಮತಿ ನೀಡಲು ವಿಧಿಸುವ ಮಾನದಂಡಗಳೇನು?

(ಈ) ವಸತಿ ಶಾಲಾ–ಕಾಲೇಜುಗಳ ಆಡಳಿತ ಮಂಡಳಿಯವರು ಸರ್ಕಾರಕ್ಕೆ ವಾರ್ಷಿಕ ಎಷ್ಟು ಶುಲ್ಕವನ್ನು ಸಂದಾಯ ಮಾಡುತ್ತಿವೆ; ಆಡಳಿತ ಮಂಡಳಿಯವರು ಪ್ರತಿ ವಿದ್ಯಾರ್ಥಿಯಿಂದ ವಾರ್ಷಿಕ ಎಷ್ಟು ಶುಲ್ಕವನ್ನು ಸಂಗ್ರಹಿಸುತ್ತಿವೆ; (ತರಗತಿವಾರು/ಶಾಲಾವಾರು ವಿವರಗಳೊಂದಿಗೆ)

(ಉ) ಖಾಸಗಿ ವಸತಿ ಶಾಲಾ–ಕಾಲೇಜುಗಳನ್ನು ನಿಯಂತ್ರಿಸುವ ಅಧಿಕಾರವನ್ನು ಯಾರು ಹೊಂದಿರುತ್ತಾರೆ? (ವಿವರಗಳೊಂದಿಗೆ)

## ಕೊಡಗು ಜಿಲ್ಲೆಯಲ್ಲಿ ಸಾಮಾಜಿಕ ಆರ್ಥಿಕ ಜಾತಿ ಗಣತಿ ಕುರಿತು

**ಶ್ರೀ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೮೦೭ (೪೩೩೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಸಾಮಾಜಿಕ, ಆರ್ಥಿಕ ಜಾತಿ ಗಣತಿ ಪೂರ್ಣಗೊಂಡಿದೆಯೇ;

(ಆ) ಪೂರ್ಣಗೊಂಡಿಲ್ಲದಿದ್ದಲ್ಲಿ, ಪ್ರಸ್ತುತ ಯಾವ ಹಂತದಲ್ಲಿದೆ;

(ಇ) ಯಾವ ಕಾರಣಗಳಿಗಾಗಿ ಕೊಡಗು ಜಿಲ್ಲೆಯಲ್ಲಿನ ಸಾಮಾಜಿಕ ಆರ್ಥಿಕ ಜಾತಿ ಗಣತಿ ಪೂರ್ಣಗೊಂಡಿರುವುದಿಲ್ಲ;

(ಈ) ಕೊಡಗು ಜಿಲ್ಲೆಯಲ್ಲಿನ ಸಾಮಾಜಿಕ ಆರ್ಥಿಕ ಜಾತಿಗಣತಿಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು?

## ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯ ಕಟ್ಟಡ ಕಾಮಗಾರಿಗಳ ನಿರ್ಮಾಣ ಕುಂಠಿತವಾಗಿರುವ ಬಗ್ಗೆ

**ಶ್ರೀ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೮೦೮ (೪೩೩೪) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯ ಮೊದಲನೆ ಹಂತದ ಕಟ್ಟಡ ಕಾಮಗಾರಿಗಳು ನಿರ್ಮಾಣ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ರೀತಿಯ ವಿಳಂಬಕ್ಕೆ ಕಾರಣಗಳೇನು; ಹಾಗೂ ಮೊದಲನೇ ಹಂತದ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು;

(ಇ) ಸದರಿ ಸಂಸ್ಥೆಯ ಎರಡನೇ ಹಂತದ ಕಾಮಗಾರಿಗಳು ಅನುಮೋದನೆ ಗೊಂಡಿವೆಯೇ ಹಾಗೂ ಈ ಕಾಮಗಾರಿಗಳಿಗೆ ಮಂಜೂರಾದ ಹಣವೆಷ್ಟು; ಹಾಗೂ ಕಾಮಗಾರಿಗಳು ಪ್ರಾರಂಭವಾಗುವುದು ಯಾವಾಗ?

## ಕೊಡಗು ಜಿಲ್ಲೆಯಲ್ಲಿನ ಆಸ್ಪತ್ರೆಗಳಲ್ಲಿನ ಖಾಲಿ ಹುದ್ದೆಗಳನ್ನು ತುಂಬುವ ಕುರಿತು

**ಶ್ರೀ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೮೦೯ (೪೩೩೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿರುವ ವಿವಿಧ ಸರ್ಕಾರಿ ಆಸ್ಪತ್ರೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಆಸ್ಪತ್ರೆಗಳಿಗೆ ಮಂಜೂರಾದ ವಿವಿಧ ಶ್ರೇಣಿಯ ಹುದ್ದೆಗಳ ಸಂಖ್ಯೆ ಎಷ್ಟು; (ಪ್ರತಿ ಆಸ್ಪತ್ರೆಯ ಪ್ರತ್ಯೇಕ ವಿವರ ನೀಡುವುದು)

(ಇ) ಸದರಿ ಮಂಜೂರಾದ ಹುದ್ದೆಗಳಲ್ಲಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವವರು, ಖಾಲಿ ಇರುವ ಹುದ್ದೆಗಳು ಹಾಗೂ ನಿಯೋಜನೆ ಮೇಲೆ ತೆರಳಿರುವವರ ಸಂಖ್ಯೆ ಎಷ್ಟು; (ವಿವರಗಳನ್ನು ನೀಡುವುದು)

(ಈ) ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು?

## ಬೀದರ್ ಜಿಲ್ಲೆಯ ಬಿದ್ರಿ ಕಲೆಯ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮೧೦ (೪೩೧೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ವಿಶ್ವವಿಖ್ಯಾತಿ ಬಿದ್ರಿ ಕಲೆಯಲ್ಲಿ ತೊಡಗಿಸಿ–ಕೊಂಡಿರುವ ಕುಟುಂಬಗಳ ಸಂಖ್ಯೆ ಎಷ್ಟು;

(ಆ) ಬಿದ್ರಿ ಕಲೆಯನ್ನು ಉಳಿಸಿ ಬೆಳೆಸಲು ಹಾಗೂ ಕಲಾವಿದರಿಗೆ ಪ್ರೋತ್ಸಾಹಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಆಯುಷ್ ಆಸ್ಪತ್ರೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೮೧೧ (೪೩೧೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಇರುವ ಆಯುಷ್ ಆಸ್ಪತ್ರೆಗಳ ಸಂಖ್ಯೆ ಎಷ್ಟು;

(ಆ) ಆಯುಷ್ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರ ಸಂಖ್ಯೆ ಎಷ್ಟು; ಅವರಲ್ಲಿ ಪಂಚಕರ್ಮ ಪದವಿ ಪೂರೈಸಿದ ಪರಿಣಿತರ ಸಂಖ್ಯೆ ಎಷ್ಟು;

(ಇ) ಜಿಲ್ಲೆಯಲ್ಲಿ ಆಯುರ್ವೇದ ಚಿಕಿತ್ಸಾ ವಿಧಾನವನ್ನು ಜನಪ್ರಿಯ–ಗೊಳಿಸಲು ಕೈಗೊಂಡಿರುವ ಕ್ರಮಗಳೇನು?

## ಬೀದರ್‌ನ ಬ್ರೀಮ್ಸ್ ಆಸ್ಪತ್ರೆ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೮೧೨ (೪೩೧೯) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್‌ನ ಬ್ರೀಮ್ಸ್ ಆಸ್ಪತ್ರೆಗಾಗಿ ನಿರ್ಮಿಸಲಾಗಿರುವ ಹೊಸ ಕಟ್ಟಡಕ್ಕೆ ಬೋಧಕ ಆಸ್ಪತ್ರೆಯನ್ನು ಸ್ಥಳಾಂತರ ಮಾಡಲಾಗುವುದು ಯಾವಾಗ;

(ಆ) ಹೊಸ ಕಟ್ಟಡಕ್ಕೆ ಎಷ್ಟು ಹಣ ಖರ್ಚು ಮಾಡಲಾಗಿದೆ? (ಸಂಪೂರ್ಣ ವಿವರ ನೀಡುವುದು)

## ಶಾಸಕರ ಪ್ರದೇಶಾಭಿವೃದ್ಧಿ ನಿಧಿ ಬಗ್ಗೆ

**ಶ್ರೀ ಡಿ.ಎಸ್.ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೮೧೩ (೪೧೮೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಾಸಕರ ಪ್ರದೇಶಾಭಿವೃದ್ಧಿ ನಿಧಿಯಿಂದ ಸಂಘ ಸಂಸ್ಥೆಗಳಿಗೆ ಕಟ್ಟಡ ಹಾಗೂ ಮೂಲ ಭೂತ ಸೌಲಭ್ಯಕ್ಕಾಗಿ ನೀಡುವ ಅನುದಾನಕ್ಕೆ ಗರಿಷ್ಠ ಮಿತಿಯನ್ನು ನಿಗಧಿಪಡಿಸಲಾಗಿದೆಯೇ;

(ಆ) ಈ ಮಿತಿಯನ್ನು ಸಡಿಲಗೊಳಿಸಲು ಇರುವ ತೊಂದರೆಗಳೇನು;

(ಇ) ನಿಗಧಿಪಡಿಸಿದ ಮಿತಿಯನ್ನು ಹೆಚ್ಚಿಸುವುದರಿಂದ ಸಂಘ ಸಂಸ್ಥೆಗಳಿಗೆ ಹೆಚ್ಚಿನ ಮೂಲಭೂತ ಸೌಕರ್ಯ ಕಲ್ಪಿಸಲು ಅವಕಾಶ ಮಾಡಿಕೊಟ್ಟಂತಾಗುವುದಿಲ್ಲವೇ;

(ಈ) ಹಾಗಿದ್ದಲ್ಲಿ, ಸರ್ಕಾರ ಆದೇಶ ಹೊರಡಿಸಲು ಇರುವ ತೊಂದರೆಗಳೇನು?

## ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಭೂಮಿ ಖರೀದಿ ಬಗ್ಗೆ

**ಶ್ರೀ ಡಿ.ಎಸ್.ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

೩೮೧೪ (೪೧೮೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟೆಷ್ಟು ಜಮೀನು ಖರೀದಿಸಲಾಗಿದೆ;

(ಆ) ಹಾಗಿದ್ದಲ್ಲಿ, ಈ ಯೋಜನೆಗೆ ಖರ್ಚು ಮಾಡಲಾಗಿರುವ ಹಣ ಎಷ್ಟು; ಜಿಲ್ಲಾವಾರು ಫಲಾನುಭವಿಗಳ ಹೆಸರು ಖರೀದಿಸಿದ ಜಮೀನಿನ ವಿಸ್ತೀರ್ಣ ಎಷ್ಟು;

(ಇ) ೨೦೧೪ ರಿಂದ ಐ.ಎಸ್.ಬಿ. ಯೋಜನೆ ಅಡಿಯಲ್ಲಿ ಸಾಲಕ್ಕಾಗಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು; ವಿತರಿಸಿದ ಸಾಲಗಳ ಸಂಖ್ಯೆ ಎಷ್ಟು; ಮಂಜೂರು ಮಾಡಲಾದ ಫಲಾನುಭವಿಗಳ ಸಂಖ್ಯೆ ಎಷ್ಟು; ಬಿಡುಗಡೆಯಾದ ಅನುದಾನ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೮೧೫ (೪೨೩೧) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ ವಿವಿಧ ಇಲಾಖೆ/ನಿಗಮ/ಮಂಡಳಿ ಹಾಗೂ ಸ್ವಾಯತ್ತ ಸಂಸ್ಥೆಗಳಲ್ಲಿ ಖಾಲಿ ಇರುವ ತಾಂತ್ರಿಕೇತರ ಎ.ಬಿ.ಸಿ ದರ್ಜೆಯ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಬ್ಯಾಕ್‌ಲಾಗ್ ಹುದ್ದೆಗಳನ್ನು ಎಷ್ಟು ದಿನಗಳಲ್ಲಿ ಭರ್ತಿ ಮಾಡಲಾಗುವುದು ;

(ಆ) ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಡುವ ಸಂದರ್ಭದಲ್ಲಿ ದಿನಾಂಕ : ೨೧–೧೧–೨೦೦೧ರ ನಿಯಮಾವಳಿಗಳನ್ನು ಪರಿಷ್ಕರಿಸಿ ವಯೋಮಿತಿಯನ್ನು ೪೦ ವರ್ಷಗಳಿಂದ ೪೫ ವರ್ಷಕ್ಕೆ ಏರಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ನಿಯಮಾವಳಿಗಳನ್ನು ಪರಿಷ್ಕರಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು ;

(ಈ) ಬ್ಯಾಕ್‌ಲಾಗ್ ಹುದ್ದೆಗಳನ್ನು ತುಂಬಲು ಇರುವ ನಿಯಮಾವಳಿಗಳನ್ನು ಎಷ್ಟು ದಿನಗಳಲ್ಲಿ ಪರಿಷ್ಕರಿಸಲಾಗುವುದು?

## SCP/TSP ಅಡಿಯಲ್ಲಿ ನಿಗಧಿಪಡಿಸಿರುವ ಅನುದಾನದ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೮೧೬ (೪೧೮೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) SCP/TSP ಅನುಷ್ಠಾನ ಯೋಜನೆ ವಿಧೇಯಕ ೨೦೧೪ರ ಕಾಯ್ದೆಗೆ ನಿಯಮಗಳನ್ನು ರೂಪಿಸಲಾಗಿದೆಯೇ ; ರೂಪಿಸಿದ್ದಲ್ಲಿ ಪ್ರತಿಯನ್ನು ನೀಡುವುದು ;

(ಆ) ಆಯಾ ವರ್ಷಗಳಲ್ಲಿ ನಿಗಧಿಪಡಿಸಿದ ಅನುದಾನವನ್ನು ಆಯಾವರ್ಷ ಖರ್ಚು ಮಾಡಬೇಕೆಂಬ ನಿಯಮ ಜಾರಿಯಾಗಿದೆಯೇ ;

(ಇ) ಖರ್ಚು ಮಾಡದೆ ಇರುವ ಅನುದಾನವನ್ನು ಮುಂದಿನ ವರ್ಷಕ್ಕೆ ಮುಂದುವರೆಸಿ ೩ನೇ ವರ್ಷವೂ ಖರ್ಚಾಗದಿದ್ದರೆ ಆ ಹಣವನ್ನು ಮುಂದುವರೆಸಬಾರದು ಎಂಬ ನಿಯಮವನ್ನು ತಿದ್ದುಪಡಿ ಮಾಡಲಾಗಿದೆಯೇ ;

(ಈ) ಸರ್ಕಾರ ಯಾವ ಕಾರಣಕ್ಕಾಗಿ ಈ ನಿಯಮ ತಂದಿದೆ ?

## ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಕಾಲೋನಿಗಳ ಅಭಿವೃದ್ಧಿ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೮೧೭ (೪೧೮೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಕಾಲೋನಿಗಳ ಅಭಿವೃದ್ಧಿಗಾಗಿ ಕೈಗೊಂಡ ಕಾರ್ಯಕ್ರಮಗಳೇನು; (ಜಿಲ್ಲಾವಾರು, ಕಾಮಗಾರಿವಾರು ಖರ್ಚು ಮಾಡಲಾದ ಹಣದ ವಿವರ ನೀಡುವುದು)

(ಆ) ೨೦೧೪–೧೫ನೇ ಸಾಲಿನಿಂದ ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಗಂಗಾ ಕಲ್ಯಾಣ ಯೋಜನೆ ಅಡಿಯಲ್ಲಿ ಕೊರೆದ ಕೊಳವೆ ಬಾವಿಗಳೆಷ್ಟು ; ಪಂಪ್‌ಸೆಟ್ ಅಳವಡಿಸಿದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ಸಂಪರ್ಕ ಪಡೆದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ಬಾಕಿ ಇರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು; ವಿಳಂಬಕ್ಕೆ ಕಾರಣಗಳೇನು ?

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅನುದಾನದಲ್ಲಿ ದುರುಪಯೋಗವಾಗಿರುವ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೮೧೮ (೪೨೧೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ೨೦೧೩–೧೪ನೇ ಸಾಲಿನಿಂದ ೨೦೧೬–೧೭ನೇ ಸಾಲಿನವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ

ಯಾವ ಯಾವ ಕಾರ್ಯಕ್ರಮಗಳಿಗೆ ಯಾವ ಯಾವ ಶೀರ್ಷಿಕೆಯಡಿಯಲ್ಲಿ ಎಷ್ಟೆಷ್ಟು ಅನುದಾನವನ್ನು ಒದಗಿಸಲಾಗಿರುತ್ತದೆ; (ವಿವರ ನೀಡುವುದು)

(ಆ) ಸದರಿ ಅನುದಾನದಲ್ಲಿ ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿ ಯಾವ ಯಾವ ಸಂಘ ಸಂಸ್ಥೆಗಳಿಂದ ಕಾರ್ಯಕ್ರಮ ನಿರ್ವಹಿಸಲಾಗಿದೆ; ಅವರಿಗೆ ನೀಡಿರುವ ಅನುದಾನ ಎಷ್ಟು ; (ಜಿಲ್ಲಾವಾರು/ ತಾಲ್ಲೂಕುವಾರು ಕಾರ್ಯಕ್ರಮದ ವಿವರ/ಅವರಿಗೆ ನೀಡಿರುವ ಅನುದಾನ/ಚೆಕ್ ನಂಬರ್ ಸಹಿತ ವಿವರ ನೀಡುವುದು)

(ಇ) ಸದರಿ ಅವಧಿಯಲ್ಲಿ ವಿವಿಧ ಕಾರ್ಯಕ್ರಮಗಳಿಗೆ ಬಂದಿರುವ ಅನುದಾನದಲ್ಲಿ ಕೆಲವೊಂದು ಸಂಘ ಸಂಸ್ಥೆಗಳಿಗೆ ಕಾರ್ಯಕ್ರಮ ಮಾಡದೇ ಹಣ ಬಿಡುಗಡೆ ಮಾಡಿ ದುರುಪಯೋಗ ಮಾಡಿರುತ್ತಾರೆಂದು ತಿಳಿದು ಬಂದಿದ್ದು, ಇದು ನಿಜವೇ ? (ವಿವರ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯಿಂದ ಆದ ಅಭಿವೃದ್ಧಿ ಕಾಮಗಾರಿಗಳಲ್ಲಿ ಅವ್ಯವಹಾರ ಆದ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೮೯೯ (೪೨೨೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ೨೦೧೨–೧೩ನೇ ಸಾಲಿನಿಂದ ೨೦೧೫–೧೬ನೇ ಸಾಲಿನವರೆಗೆ ಸಮಾಜ ಕಲ್ಯಾಣ ಇಲಾಖೆಯಿಂದ ಯಾವ ಯಾವ ಯೋಜನೆಯಲ್ಲಿ (ಶೀರ್ಷಿಕೆಯಡಿಯಲ್ಲಿ) ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ವರ್ಷಾವಾರು, ಯೋಜನಾವಾರು ವಿವರ ನೀಡುವುದು)

(ಆ) ಸದರಿ ಅನುದಾನದಲ್ಲಿ ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ; ಯಾವ ಯಾವ ಕಾಮಗಾರಿಗಳನ್ನು ಕೈಗೊಂಡಿರುತ್ತಾರೆ ; ಅದರಲ್ಲಿ ಜಿಲ್ಲೆಯ ಪ್ರತಿನಿಧಿಗಳಿಗನುಸಾರ ಬಿಡುಗಡೆ ಮಾಡಿದ ಅನುದಾನ ಎಷ್ಟು ; (ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ವಿವರ ನೀಡುವುದು) ಜಿಲ್ಲೆಯಲ್ಲಿ ಶಾಸಕರಿಗೆ ಸಂಬಂಧಿಸಿದ ಅನುದಾನ ಬಿಡುಗಡೆ ಮಾಡಿದ ವಿವರ ; (ಜಿಲ್ಲಾವಾರು, ತಾಲ್ಲೂಕುವಾರು ಹಾಗೂ ಸಂಬಂಧಿಸಿದ ಶಾಸಕರು ಅನುದಾನ ಬಿಡುಗಡೆ ಮಾಡಿ ಅಭಿವೃದ್ಧಿ ಕಾರ್ಯ ಮಾಡಲು ಶಿಫಾರಸ್ಸು ಮಾಡಿದ ಪತ್ರದೊಂದಿಗೆ ಸವಿಸ್ತಾರ ವರದಿ ನೀಡುವುದು)

(ಇ) ಸದರಿ ಅವಧಿಯಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಬಿಡುಗಡೆ ಮಾಡಿದ ಅನುದಾನದಲ್ಲಿ ೨೫% ಉಳಿದ ಮೊತ್ತ ಬಿಡುಗಡೆ ಮಾಡಲಾಗುವುದು ಯಾವಾಗ ; (ವಿವರ ನೀಡುವುದು)

(ಈ) ಸದರಿ ೨೫% ಉಳಿದ ಮೊತ್ತಕ್ಕೆ ಸಂಬಂಧಿಸಿದ ಕಾಮಗಾರಿಗಳಿಗೆ ಬಿಡುಗಡೆ ಮಾಡಬೇಕಾಗಿದ್ದು, ಆದರೆ ಸರ್ಕಾರಿ ಆದೇಶ ಉಲ್ಲಂಘನೆ ಮಾಡಿ ಸಂಬಂಧಿಸಿದ ಅಧಿಕಾರಿ ಸದರಿ ಮೊತ್ತ ಬೇರೆ ಬೇರೆ ಕಾಮಗಾರಿಗಳಿಗೆ ಅವಕಾಶ ಮಾಡಿರುವುದು ನಿಜವೇ ; ಹಾಗಿದ್ದಲ್ಲಿ ಸದರಿ ೨೫% ಉಳಿದ ಮೊತ್ತ ಅದೇ ಕೆಲಸಕ್ಕೆ ಬಿಡುಗಡೆ ಮಾಡಲಾಗಿದೆಯೇ ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಉ) ಈ ಎಲ್ಲಾ ಅವಧಿಯಲ್ಲಿ ಆಗಿರುವ ಅಭಿವೃದ್ಧಿ ಕಾಮಗಾರಿಗಳಲ್ಲಿ ಅವ್ಯವಹಾರ ಆಗಿದ್ದು ಇದರಲ್ಲಿ ಅಧಿಕಾರಿಗಳು, ಗುತ್ತಿಗೆದಾರರು ಶಾಮಿಲಾಗಿರುತ್ತಾರೆಂದು ತಿಳಿದು ಬಂದಿದ್ದು, ಈ ಬಗ್ಗೆ ಸೂಕ್ತ ತನಿಖೆ ಮಾಡಲಾಗುವುದೇ ? (ವಿವರ ನೀಡುವುದು)

## ಪ್ರವಾಸೋದ್ಯಮ ಇಲಾಖೆಯ ಯೋಜನೆಗಳ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೮೨೦ (೪೨೧೮) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಕಳೆದ ೫ ವರ್ಷಗಳಲ್ಲಿ ಯಾವ ಯಾವ ಯೋಜನೆಗಳು ಜಾರಿಯಲ್ಲಿರುತ್ತದೆ; (ಯೋಜನೆವಾರು ವಿವರ ನೀಡುವುದು)

(ಆ) ಸದರಿ ಯೋಜನೆಗಳಿಗಿರುವ ಮಾನದಂಡವೇನು ; (ವಿವರ ನೀಡುವುದು)

(ಇ) ಕಳೆದ ೫ ವರ್ಷಗಳಲ್ಲಿ ಸದರಿ ಫಲಾನುಭವಿಗಳ ಆಯ್ಕೆಯಲ್ಲಿ ಸರ್ಕಾರದ ಆದೇಶ ಪರಿಗಣಿಸದೇ ಫಲಾನುಭವಿಗಳ ಆಯ್ಕೆ ಆಗಿರುತ್ತದೆಯೆಂದು ಸಾರ್ವಜನಿಕರಿಂದ ತಿಳಿದು ಬಂದಿದ್ದು, ಈ ಕುರಿತು ಸರ್ಕಾರ ಸೂಕ್ತ ವಿಚಾರಣೆ ಮಾಡುವುದೇ ; (ವಿವರ ನೀಡುವುದು)

(ಈ) ೨೦೧೩–೧೪ನೇ ಸಾಲಿನಿಂದ ಇಲ್ಲಿಯವರೆಗೆ ಪ್ರವಾಸೋದ್ಯಮ ಇಲಾಖೆಯಿಂದ ವಿವಿಧ ಯೋಜನೆಯಡಿ ಫಲಾನುಭವಿಗಳನ್ನು ಅರ್ಹತೆಗನುಗುಣವಾಗಿ ಆಯ್ಕೆಮಾಡಿದ ವಿವರ ? (ವಾಹನ ವಿತರಣೆ ಹಾಗೂ ಇತರೇ ವಿವಿಧ ಯೋಜನೆಯಡಿ ಸರ್ಕಾರಿ ಆದೇಶದಂತೆ ಆಯ್ಕೆ ಮಾಡಿದ ಫಲಾನುಭವಿಗಳ ಸವಿಸ್ತಾರ ವರದಿ ಜಿಲ್ಲಾವಾರು/ತಾಲ್ಲೂಕುವಾರು ವಿವರ ನೀಡುವುದು)

111

## ಮಹಿಳಾ ಪುನರ್ವಸತಿ ಕೇಂದ್ರ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೩೮೨೧ (೪೨೧೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಕಾರವಾರ ಜಿಲ್ಲೆಯಲ್ಲಿರುವ ಮಹಿಳಾ ಪುನರ್ವಸತಿ ಸಂಖ್ಯೆ ಎಷ್ಟು; ಸದರಿ ಪುನರ್ವಸತಿ ಕೇಂದ್ರಗಳಲ್ಲಿರುವ ಸಂತ್ರಸ್ತೆಯರ ಯುವತಿಯರ ಸಂಖ್ಯೆ ಎಷ್ಟು ; ಶಾಶ್ವತ ಸಂತ್ರಸ್ತೆಯರ ಸಂಖ್ಯೆ ಎಷ್ಟು ; ತಾತ್ಕಾಲಿಕ ಸಂತ್ರಸ್ತೆಯರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ರಾಜ್ಯದ ಮಹಿಳಾ ಪುನರ್ವಸತಿ ಕೇಂದ್ರದಲ್ಲಿ ಸಿಬ್ಬಂದಿಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಯಾವ ದಿನಾಂಕದಿಂದ ಖಾಲಿ ಇದೆ ; ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ರೀತಿ ಕ್ರಮ ಕೈಗೊಂಡಿದೆ ; ಎಷ್ಟು ಕಾಲಾವಕಾಶದಲ್ಲಿ ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ;

(ಇ) ಪುನರ್ವಸತಿ ಕೇಂದ್ರಗಳಲ್ಲಿ ಸಂತ್ರಸ್ತ ಮಹಿಳೆಯರಿಗೆ ಯಾವುದಾದರೂ ತರಬೇತಿಗಳನ್ನು ನೀಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ತರಬೇತಿಗಳನ್ನು ನೀಡಲಾಗುತ್ತಿದೆ ?

## ವಿಕಲಚೇತನರ ಅಭಿವೃದ್ಧಿಗೆ ಅನುದಾನ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು):–**

೩೮೨೨ (೪೩೧೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಗೆ ಕಳೆದ ೨ ವರ್ಷಗಳ ಅವಧಿಯಲ್ಲಿ ವಿಕಲಚೇತನರ ಅಭಿವೃದ್ಧಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಯಾವ ಯೋಜನೆ ಅಡಿಯಲ್ಲಿ ಮಾಡಲಾಗಿದೆ ; (ವಿವರ ಒದಗಿಸುವುದು)

(ಆ) ಜಿಲ್ಲೆಯಲ್ಲಿರುವ ವಿಕಲಚೇತನರಿಗಾಗಿ ಇಲಾಖಾ ವತಿಯಿಂದ ಯಾವ ಯಾವ ಸಾಧನಗಳನ್ನು ವಿತರಿಸಲಾಗಿದೆ ? (ವಿವರ ಒದಗಿಸುವುದು)

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸಾಲ ಮಂಜೂರಾತಿ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು):–**

೩೮೨೩ (೪೩೧೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಲ್ಲಿ ಕಲಬುರಗಿ ಜಿಲ್ಲೆಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ಯಾವ ಯಾವ ಯೋಜನೆಗಳ ಅಡಿಯಲ್ಲಿ ಸಾಲ ಮಂಜೂರು ಮಾಡಲಾಗಿದೆ;

(ಆ) ಜಿಲ್ಲೆಯಲ್ಲಿ ಒಟ್ಟು ಎಷ್ಟು ಫಲಾನುಭವಿಗಳಿದ್ದಾರೆ; ಇಂತಹ ಯೋಜನೆಗಳ ಬಡ್ಡಿದರವೆಷ್ಟು;

(ಇ) ಸಾಲ ಮಂಜೂರು ಮಾಡಲು ಅನುಸರಿಸುವ ಮಾನದಂಡಗಳೇನು;

(ಈ) ಪ್ರಸ್ತುತ ಸಾಲಿನಲ್ಲಿ ಸಾಲ ಮಂಜೂರಾತಿಗಾಗಿ ಎಷ್ಟು ಅರ್ಜಿಗಳು ಬಂದಿವೆ; ಕಲಬುರಗಿ ಜಿಲ್ಲೆಯಲ್ಲಿ ಇದರಲ್ಲಿ ಎಷ್ಟು ಅರ್ಜಿಗಳಿಗೆ ಸಾಲ ಮಂಜೂರಾತಿ ಮಾಡಲಾಗಿದೆ?

## ಅಡಿಗೆ ಕೆಲಸಗಾರರ ಮತ್ತು ವಾರ್ಡ್‌ಗಳ ಖಾಲಿಯಿರುವ ಹುದ್ದೆಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೩೮೨೪ (೪೩೦೧ಎ) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸುವ ಹಾಸ್ಟೆಲ್‌ಗಳಲ್ಲಿ ಅಡುಗೆ ಕೆಲಸಗಾರರ ಮತ್ತು ವಾರ್ಡ್‌ನ್ ಹುದ್ದೆಗಳ ಸಂಖ್ಯೆ ಎಷ್ಟು; ಅವುಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು? (ಜಿಲ್ಲೆಗಳವಾರು ವಿವರ ನೀಡುವುದು)

## ವಿದ್ಯಾಸಿರಿ ಯೋಜನೆಯ ಅನುಷ್ಟಾನದ ಕುರಿತು

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೮೨೫ (೪೩೦೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬, ೨೦೧೬–೧೭ನೇ ಸಾಲಿನಲ್ಲಿ ವಿದ್ಯಾಸಿರಿ ಯೋಜನೆಯನ್ವಯ ಎಷ್ಟು ಮಂದಿ ವಿದ್ಯಾರ್ಥಿಗಳಿಗೆ ಅನುದಾನ ನೀಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ವಿದ್ಯಾಸಿರಿ ಯೋಜನೆ ಯಾವ ಯಾವ ಸಮುದಾಯಗಳಿಗೆ ಮೀಸಲಿದೆ; ಪ್ರಯೋಜನ ಪಡೆಯಲು ಇರುವ ಷರತ್ತುಗಳು ಯಾವುವು? (ವಿವರ ಒದಗಿಸುವುದು)

## ಅಂಗವಿಕಲರಿಗೆ ವಿತರಿಸಲಾಗುತ್ತಿರುವ ಪಿಂಚಣಿ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

' ೩೮೨೬ (೪೩೦೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಂಗವಿಕಲರಿಗೆ ಮಾಸಿಕವಾಗಿ ಎಷ್ಟು ವಿಕಲಾಂಗ ಪಿಂಚಣಿ ನೀಡಲಾಗುತ್ತದೆ; ಪಿಂಚಣಿ ಏರಿಕೆ ಮಾಡಲು ಇಲಾಖೆಯಲ್ಲಿ ಪ್ರಸ್ತಾವನೆ ಇದೆಯೇ; ಎಷ್ಟು ಮಂದಿ ಪಿಂಚಣಿ ಪಡೆಯುತ್ತಿದ್ದಾರೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಪಿಂಚಣಿ ಏರಿಕೆ ಮಾಡಬೇಕೆಂದು ಅಂಗವಿಕಲರ ಸಂಘಟನೆಗಳಿಂದ ಮನವಿ ಸ್ವೀಕರಿಸಲಾಗಿದೆಯೇ; (ವಿವರ ಒದಗಿಸುವುದು)

(ಇ) ರಾಜ್ಯದಲ್ಲಿ ಅಂಗವಿಕಲರಿಗಾಗಿ ವಾರ್ಷಿಕವಾಗಿ ಎಷ್ಟು ಅನುದಾನ ಖರ್ಚು ಮಾಡಲಾಗುತ್ತಿದೆ? (ಜಿಲ್ಲಾವಾರು ವಿವರ ನೀಡುವುದು)

## ಕರಾವಳಿ ಅಭಿವೃದ್ಧಿ ಪ್ರಾಧಿಕಾರದ ಅನುದಾನದ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೮೨೭ (೪೩೦೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ ರಿಂದ ೨೦೧೭–೧೮ನೇ ಸಾಲಿಗೆ ಕರಾವಳಿ ಅಭಿವೃದ್ಧಿ ಪ್ರಾಧಿಕಾರಕ್ಕೆ ನೀಡಿರುವ ಒಟ್ಟು ಅನುದಾನದ ಮೊತ್ತ ಎಷ್ಟು; ಖರ್ಚು ಮಾಡಿರುವ ಅನುದಾನವೆಷ್ಟು; ಬಳಕೆ ಆಗಿರುವ ಅನುದಾನದ ಮೊತ್ತವೆಷ್ಟು; (ವಿವರ ಒದಗಿಸುವುದು)

(ಆ) ಈ ಸಾಲಿನಲ್ಲಿ ಕರಾವಳಿ ಅಭಿವೃದ್ಧಿ ಪ್ರಾಧಿಕಾರದಿಂದ ಕೈಗೊಂಡ ಕಾಮಗಾರಿಗಳಾವುವು; (ವಿವರ ಒದಗಿಸುವುದು)

(ಇ) ಕರಾವಳಿ ಅಭಿವೃದ್ಧಿ ಪ್ರಾಧಿಕಾರದಲ್ಲಿ ನೌಕರರಿಗೆ ವೇತನ ನೀಡಲಾಗುತ್ತಿದೆಯೇ; ಇಲ್ಲದಿದ್ದಲ್ಲಿ, ಇಲಾಖೆ ಕೈಗೊಂಡ ಕ್ರಮಗಳೇನು; ಒಟ್ಟು ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು; ಖಾಯಂ ಮತ್ತು ಗುತ್ತಿಗೆ ನೌಕರರ ಸಂಖ್ಯೆ ಎಷ್ಟು? (ವಿವರ ಒದಗಿಸುವುದು)

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಾರ್ಯ ವೈಖರಿಯ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೮೨೮ (೪೩೦೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಹಾಗೂ ಸಮುದಾಯ ಆಸ್ಪತ್ರೆಗಳ ಸಂಖ್ಯೆ ಎಷ್ಟು; ಖಾಲಿಯಿರುವ ವೈದ್ಯರ ಸಂಖ್ಯೆ ಎಷ್ಟು; ಗುತ್ತಿಗೆ ಆಧಾರದ ವೈದ್ಯರ ಸಂಖ್ಯೆ ಎಷ್ಟು; ವೈದ್ಯರಿಗೆ ನೀಡುವ ಆರಂಭಿಕ ಹಂತದ ವೇತನವೆಷ್ಟು; (ವಿವರ ಒದಗಿಸುವುದು)

(ಆ) ಆರೋಗ್ಯ ಇಲಾಖೆಗೆ ಸಂಬಂಧಿಸಿದಂತೆ ಚಾಲ್ತಿಯಲ್ಲಿರುವ ವಿವಿಧ ಯೋಜನೆಗಳಾವುವು; ವರ್ಷ ಒಂದಕ್ಕೆ ಎಷ್ಟು ಫಲಾನುಭವಿಗಳು ಪ್ರಯೋಜನ ಪಡೆಯುತ್ತಿದ್ದಾರೆ; (ವಿವರ ಒದಗಿಸುವುದು)

(ಇ) ಆರೋಗ್ಯ ಇಲಾಖೆಯಲ್ಲಿ ಪ್ರತಿ ವರ್ಷ ಖರ್ಚು ಮಾಡುವ ಹಣವೆಷ್ಟು; ಖಾಸಗಿ ಆಸ್ಪತ್ರೆಗಳಿಗೆ ಸರ್ಕಾರದ ಯೋಜನೆಗಳಿಂದ ನೀಡುವ

ಅನುದಾನವೆಷ್ಟು; ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಆರೋಗ್ಯಕ್ಕೆ ನೀಡುವ ಮೊತ್ತವೆಷ್ಟು; (ವಿವರ ಒದಗಿಸುವುದು)

(ಈ) ಆರೋಗ್ಯ ಇಲಾಖೆಯಲ್ಲಿ ನೂತನವಾಗಿ ಅನುಷ್ಠಾನಕ್ಕೆ ತರಲಿರುವ ಯೋಜನೆ ಯಾವುದು? (ವಿವರ ಒದಗಿಸುವುದು)

## ಮಂಗಳೂರು ಬೆಂಗಡೆ ಗ್ರಾಮದಲ್ಲಿ ಗಾಲ್ಫ್ ಕ್ಲಬ್ ನಿರ್ಮಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೩೮೨೯ (೪೩೫೩) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ಬೆಂಗಡೆ ಕಸಬ ಗ್ರಾಮದಲ್ಲಿ ಸ್ಥಾಪಿಸಲು ಉದ್ದೇಶಿಸಿದ ಗಾಲ್ಫ್ ಕ್ಲಬ್ ಯೋಜನೆ ಯಾವ ಹಂತದಲ್ಲಿದೆ ; ಎಷ್ಟು ಎಕರೆ ಭೂಮಿ ನೀಡಲಾಗಿದೆ ; (ವಿವರ ಒದಗಿಸುವುದು)

(ಆ) ಈ ಯೋಜನೆ ಕಾರ್ಯಗತಗೊಳ್ಳುವುದು ಯಾವಾಗ ಸಿ.ಆರ್.ಝಡ್ ನಿಯಮದಲ್ಲಿ ವಿನಾಯ್ತಿ ನೀಡಲಾಗಿದೆಯೇ ; ಈ ಯೋಜನೆಯ ಖರ್ಚು ವೆಚ್ಚ ಎಷ್ಟು ; (ವಿವರ ಒದಗಿಸುವುದು)

(ಇ) ಈ ಯೋಜನೆಯು ಎಂ.ಒ.ಯು (ಮೆಮೋರಂಡಮ್ ಆಫ್ ಅಚಿಡರ್‌ಸ್ಟ್ಯಾಂಡಿಂಗ್) ಪ್ರಕಾರ ಯಾವ ಕಾಲಮಿತಿಯೊಳಗೆ ಪೂರ್ಣಗೊಳ್ಳಬೇಕಾಗಿತ್ತು ; ಹಾಗಿದ್ದಲ್ಲಿ, ವಿಳಂಬಗೊಳ್ಳಲು ಕಾರಣವೇನು ? (ವಿವರ ಒದಗಿಸುವುದು)

# ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ವಸತಿ ನಿಲಯಗಳ ಸಿಬ್ಬಂದಿ ಕೊರತೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)**

**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮೩೦ (೪೨೦೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯ ಹಿಂದುಳಿದ ವರ್ಗಗಳ ಹಾಸ್ಟೆಲ್‌ನಲ್ಲಿ ಖಾಲಿ ಇರತಕ್ಕ ಅಡುಗೆಯವರು, ಅಡುಗೆ ಸಹಾಯಕರು ಮತ್ತು ಇತರ ಸಹಾಯಕ ಸಿಬ್ಬಂದಿ ವರ್ಗಗಳ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿಗಳ ಹಾಸ್ಟೆಲ್‌ಗಳಲ್ಲಿ ಖಾಲಿ ಇರತಕ್ಕ ಅಡುಗೆಯವರು, ಅಡುಗೆ ಸಹಾಯಕರು ಹಾಗೂ ಇತರ ಸಹಾಯಕ ಸಿಬ್ಬಂದಿ ವರ್ಗದವರ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಈಗಾಗಲೇ ಸದರಿ ಹುದ್ದೆಗಳಿಗೆ ಅರ್ಜಿಗಳನ್ನು ಸಂದರ್ಶನ ನಡೆಸಿದ್ದರೂ, ಆಯ್ಕೆ ಪಟ್ಟಿ ಪ್ರಕಟಿಸಿ, ನೇಮಕಾತಿ ಆದೇಶ ನೀಡದೇ ಇರಲು ಕಾರಣಗಳೇನು ; ಇದರಿಂದ ಸದರಿ ವಸತಿ ನಿಲಯಗಳಲ್ಲಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಸಂಚಾರಿ ಆಸ್ಪತ್ರೆ ಸೌಲಭ್ಯ ಕಲ್ಪಿಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮೩೧ (೪೨೦೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ಜಿಲ್ಲೆಯ ಕುಂದಕೆರೆ ಅರಣ್ಯ ವಲಯದ ಉಪಕಾರ ಕಾಲೋನಿಯಲ್ಲಿ ಸುಮಾರು ೪೦ ಜೇನುಕುರುಬರ ಕುಟುಂಬಗಳ ೧೫೦ ಜನರಲ್ಲಿ ಅನೇಕ ಜನರು ವಿವಿಧ ಖಾಯಿಲೆಗಳಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕುಂದಕೆರೆಗೆ ವಾರಕ್ಕೊಮ್ಮೆ ಮಾತ್ರ ಆಯುರ್ವೇದ ವೈದ್ಯರು ಮಾತ್ರ ಬರುತ್ತಿದ್ದು, ಈ ಹಾಡಿಗೆ ಒಂದೇ ಒಂದು ಬಸ್ ಮಾತ್ರ ಬರುವುದರಿಂದ, ಸೂಕ್ತ ಬಸ್ಸ್ ಸೌಲಭ್ಯ ಇಲ್ಲದೆ ಇರುವ ಕಾರಣ ಗಿರಿಜನರು ೨೦ ಕಿ.ಮೀ. ದೂರದಲ್ಲಿರುವ ತೆರಕಣಾಂಬಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಬಂದು ಆಲೋಪತಿ ಚಿಕಿತ್ಸೆ ಪಡೆಯಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಸ್ಸ್ ಸೌಲಭ್ಯದಿಂದ ವಂಚಿತವಾಗಿ, ದೂರದಲ್ಲಿರುವ ಹಾಡಿಗಳಿಗೆ ವಾರಕ್ಕೊಮ್ಮೆ ಸಂಚಾರಿ ಆಸ್ಪತ್ರೆಗಳ ಸೌಲಭ್ಯ ಕಲ್ಪಿಸಲು ಸೂಕ್ತ ಕ್ರಮ ಜರುಗಿಸಲಾಗುವುದೇ ?

## ಪ್ರದೇಶಾಭಿವೃದ್ಧಿ ಮಂಡಳಿಗಳ ಕಾಮಗಾರಿ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮೩೨ (೪೧೪೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ಹಾಗೂ ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಗಳ ವತಿಯಿಂದ ನೀಡಲಾಗಿರುವ ಒಟ್ಟು ಅನುದಾನವೆಷ್ಟು ; (ವಿಧಾನಸಭಾ ಸದಸ್ಯರು ಹಾಗೂ ವಿಧಾನ ಪರಿಷತ್ ಸದಸ್ಯರು ಒಳಗೊಂಡಂತೆ ತಾಲ್ಲೂಕುವಾರು, ವರ್ಷಾವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಜಿಲ್ಲೆಗಳಲ್ಲಿ ಅನುದಾನಕ್ಕೆ ಅನುಗುಣವಾಗಿ ಪ್ರಸ್ತಾಪಿಸಲಾಗಿರುವ ಕಾಮಗಾರಿಗಳಾವುವು ; (ತಾಲ್ಲೂಕುವಾರು, ಪೂರ್ಣ ವಿವರ ನೀಡುವುದು)

(ಇ) ಈ ಜಿಲ್ಲೆಗಳಲ್ಲಿ ಪ್ರಸ್ತಾಪಿತ ಕಾಮಗಾರಿಗಳನ್ನು ತ್ವರಿತವಾಗಿ ಅನುಷ್ಠಾನಗೊಳಿಸಲು ಇದುವರೆಗೆ ಕೈಗೊಂಡಿರುವ ಕ್ರಮಗಳೇನು ; ಅನುಷ್ಠಾನಗೊಳಿಸುವಲ್ಲಿ ಆಗುತ್ತಿರುವ ವಿಳಂಬಕ್ಕೆ ಕಾರಣಗಳೇನು ;

(ಈ) ನಿರ್ದಿಷ್ಟ ಕಾಲಮಿತಿಯೊಳಗಾಗಿ ಸದರಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದೇ ? (ವಿವರ ಒದಗಿಸುವುದು)

## ಭೂ ಒಡೆತನ ಯೋಜನೆಯ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮೩೩ (೪೩೧೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಭೂ ಒಡೆತನ ಯೋಜನೆಯಡಿ ಈವರೆಗೆ ಎಷ್ಟು ಫಲಾನುಭವಿಗಳಿಗೆ ಭೂಮಿ ವಿತರಿಸಲಾಗಿದೆ ; (ಜಿಲ್ಲಾವಾರು ಫಲಾನುಭವಿವಾರು ವಿವರ ನೀಡುವುದು)

(ಆ) ಈ ಯೋಜನೆಯಡಿ ಭೂಮಿ ಮಂಜೂರಾತಿ ಕೋರಿ ಈ ಜಿಲ್ಲೆಗಳಲ್ಲಿ ಈವರೆಗೆ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ; ಆ ಪೈಕಿ ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಇದಕ್ಕೆ ಕಾರಣವೇನು ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಯಡಿ ಭೂಮಿ ಮಂಜೂರಾತಿಗೆ ಇರುವ ಮಾನದಂಡಗಳೇನು ? (ಸಂಪೂರ್ಣ ವಿವರ ನೀಡುವುದು)

## ಅಂಗನವಾಡಿ ಕೇಂದ್ರಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮೩೪ (೪೨೦೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಎಲ್ಲೆಲ್ಲಿ, ಎಷ್ಟು ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಕೇಂದ್ರಗಳಿಗೆ ಮಂಜೂರಾದ ಅಂಗನವಾಡಿ ಶಿಕ್ಷಕಿಯರ ಕಾರ್ಯಕರ್ತೆಯರ ಹಾಗೂ ಸಹಾಯಕಿಯರ ಹುದ್ದೆಗಳೆಷ್ಟು; ಹಾಲಿ ಹುದ್ದೆವಾರು ಕರ್ತವ್ಯ ನಿರ್ವಹಿಸುತ್ತಿರುವವರು ಎಷ್ಟು ; (ಹುದ್ದೆವಾರು, ಜಿಲ್ಲಾವಾರು, ಸಂಪೂರ್ಣ ವಿವರ ನೀಡುವುದು)

(ಇ) ಈ ಜಿಲ್ಲೆಗಳಿಗೆ ಕಳೆದ ೩ ವರ್ಷಗಳಿಂದ ಈವರೆಗೆ ಯಾವ ಯಾವ ಹೊಸ ಅಂಗನವಾಡಿ ಕೇಂದ್ರಗಳಿಗೆ ಮಂಜೂರಾತಿ ನೀಡಿದೆ; (ಜಿಲ್ಲಾವಾರು, ವರ್ಷಾವಾರು ಪೂರ್ಣ ವಿವರ ನೀಡುವುದು)

(ಈ) ಈ ಜಿಲ್ಲೆಗಳಿಗೆ ಹೊಸ ಕೇಂದ್ರಗಳಿಗೆ ಸ್ಥಾಪನೆಗಾಗಿ ಕೋರಿ ಕಳೆದ ೩ ವರ್ಷಗಳಲ್ಲಿ ಯಾವ ಸ್ಥಳಗಳಿಗೆ ಪ್ರಸ್ತಾವನೆಯು ಸರ್ಕಾರಕ್ಕೆ ಸಲ್ಲಿಕೆಯಾಗಿವೆ ; ಇವುಗಳಲ್ಲಿ ಬಾಕಿ ಇರುವ ಪ್ರಸ್ತಾವನೆಗೆ ಯಾವ ಕಾಲಮಿತಿಯೊಳಗೆ ಮಂಜೂರಾತಿ ನೀಡಲಾಗುವುದು ? (ವಿವರ ನೀಡುವುದು)

## ಅನ್ನಭಾಗ್ಯ ಯೋಜನೆಯ ಅನುದಾನದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮೩೫ (೪೧೫೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ 'ಅನ್ನಭಾಗ್ಯ' ಯೋಜನೆಗೆ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದ ಅನುಪಾತ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ೨೦೧೩ ರಿಂದ ಈವರೆಗೆ ಈ ಯೋಜನೆಗೆ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರಗಳು ನೀಡಿರುವ ಅನುದಾನ ಎಷ್ಟು ? (ವರ್ಷಾವಾರು ಸಂಪೂರ್ಣ ವಿವರ ನೀಡುವುದು)

## ಅನ್ನಭಾಗ್ಯ ಯೋಜನೆಯ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮೩೬ (೪೧೫೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯ ಅಕ್ಕಿ ಹಾಗೂ ಇತರೆ ವಸ್ತುಗಳನ್ನು ಅಕ್ರಮವಾಗಿ ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಅಕ್ರಮವೆಸಗಿದವರ ವಿರುದ್ಧ ಸರ್ಕಾರ ಈವರೆಗೆ ಕೈಗೊಂಡಿರುವ ಕ್ರಮಗಳೇನು ; (ಪ್ರಕರಣವಾರು ಸಂಪೂರ್ಣ ವಿವರ ನೀಡುವುದು)

(ಇ) ಅನ್ನಭಾಗ್ಯ ಯೋಜನೆಯಡಿಯಲ್ಲಿ ವಿತರಿಸಲಾಗುತ್ತಿರುವ ಆಹಾರ ಪದಾರ್ಥಗಳು ಯಾವುವು ? (ವಿವರ ನೀಡುವುದು)

## ಕಿಯೋನಿಕ್ಸ್ ಅನುಷ್ಠಾನಗೊಳಿಸಿರುವ ಯೋಜನೆಗಳ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೮೩೭(೪೧೭೦) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬-೧೭ ಹಾಗೂ ೨೦೧೭-೨೦೧೮ನೇ ಸಾಲಿನಲ್ಲಿ ಕಿಯೋನಿಕ್ಸ್ ಸಂಸ್ಥೆಯಲ್ಲಿ ಕೈಗೊಂಡಿರುವ ಯೋಜನೆಗಳ ವಿವರ ನೀಡುವುದು ;

(ಆ) ಕಿಯೋನಿಕ್ಸ್ ಸಂಸ್ಥೆಯಲ್ಲಿ ಕೆಲಸ ಮಾಡುತ್ತಿರುವ ಖಾಯಂ ಹಾಗೂ ಹೊರಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುವ ನೌಕರರ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಇ) ೨೦೧೬-೧೭ ನೇ ಸಾಲಿನಲ್ಲಿ ಕಿಯೋನಿಕ್ಸ್ ಸಂಸ್ಥೆಯು ಗಳಿಸಿರುವ ಲಾಭ ಎಷ್ಟು ; ಹಾಗೂ ಅನುಭವಿಸಿದ ನಷ್ಟ ಎಷ್ಟು ; (ವಿವರ ನೀಡುವುದು)

(ಈ) ಕಿಯೋನಿಕ್ಸ್ ಸಂಸ್ಥೆಯಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಅದರ ಮಾಹಿತಿ ನೀಡುವುದು)

(ಉ) ಸದರಿ ಹುದ್ದೆಗಳನ್ನು ಭರ್ತಿಗೊಳಿಸಲು ಸರ್ಕಾರ ಏನು ಕ್ರಮ ವಹಿಸಿದೆ ? (ಮಾಹಿತಿ ಒದಗಿಸುವುದು)

**ಕೆ.ಆರ್.ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-59/ಕಾ.ಸೂ.207/700 ಪ್ರತಿಗಳು/ 13-11-2017